ಸಂಪುಟ: 14 Volume | ಸಂಚಿಕೆ: 77 Issue | ಪುಟಗಳು 08 Pages | ಶನಿವಾರ 27 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಧೈರ್ಯ ಅಂದರೆ ಭಯ ಇಲ್ಲದಿರುವುದಲ್ಲ, ಭಯದ ಮೇಲೆ ಜಯ ಸಾಧಿಸುವುದು.
–ನೆಲ್ಸನ್ ಮಂಡೇಲಾ



ಗುರುಮಠಕಲ್: ಪಟ್ಟಣದ ಮೊಹರಂ ಅಂಗವಾಗಿ ಅಲೆ–ಕುಣಿತದಲ್ಲಿ ಪಾಲ್ಗೊಂಡ ಜನ.



ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಶುಕ್ರವಾರ ತೆರಿಗೆ ಸಂಗ್ರಹ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಎಲ್ ಕೆ ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್ ಹಾಗೂ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.



ಹುಮನಾಬಾದ: ತಾಲೂಕಿನ ಹುಣಸಗೇರಾ ಗ್ರಾಮದಲ್ಲಿ ಮೊಹರಂ ಹಬ್ಬದ ಪ್ರಯುಕ್ತ ಹಜರತ್_ಲಾಲಸಾಬ ಷರೀಫ ದರ್ಗಾ, ಹುಸೇನಿ ಬಾಷಾ ದರ್ಗಾ ಹಾಗೂ ಸಿಲಸಿಲಾ–ಎ–ಪನಜತನ ದರ್ಗಾಕೆ ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ ಭೇಟಿ ನಿಡಿ ವಿಶೇಷ ದರ್ಶನ ಪಡೆದುಕೊಂಡರು. ಸೌಹಾರ್ದತೆ, ಸಹಬಾಳ್ವೆ ಹಾಗೂ ಮಾನವೀಯ ಮೌಲ್ಯಗಳ ಸಂದೇಶ ಸಾರುವ ಮೊಹರಂ ಹಬ್ಬದ ಸಂದರ್ಭದಲ್ಲಿ ನಾಡಿನ ಸಮಸ್ತ ಜನರ ಸುಖ, ಶಾಂತಿ, ಆರೋಗ್ಯ ಮತ್ತು ಸಮೃದ್ಧಿಗಾಗಿ ಪ್ರಾರ್ಥನೆ ಸಲ್ಲಿಸಿದರು. ಈ ಸಂರ್ಭದಲ್ಲಿ ಗ್ರಾಮದ ಮುಖಂಡರು ಹಾಗೂ ಕಾರ್ಯಕರ್ತರಿದ್ದರು.



ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಅವರು ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಶಾಸಕರಾದ ಪೊನ್ನಣ್ಣ, ರಾಘವೇಂದ್ರ ಹಿಟ್ನಾಳ್, ಅಪ್ಪಾಜಿ ನಾಡಗೌಡ ಹಾಗೂ ಯಶವಂತರಾಯ ಗೌಡ ಅವರೂ ಸಿದ್ದರಾಮಯ್ಯ ಅವರನ್ನು ಭೇಟಿಯಾದರು.

## ಶಿಕ್ಷಣ ಇಲಾಖೆಯ ಕಾರ್ಯ ಮಹತ್ವದ್ದು: ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಶೈಕ್ಷಣಿಕ ಬೆಳವಣಿಗೆಯಲ್ಲಿ ಶಿಕ್ಷಣ ಇಲಾಖೆಯ ಕಾರ್ಯ ಮಹತ್ವದ್ದಾಗಿದೆ ಎಂದು ಗ್ರಾಮೀಣಾಭಿವೃದ್ಧಿ, ಹಾಗು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಸಚಿವರ ನಿವಾಸ ಕಚೇರಿಯಲ್ಲಿ ಶುಕ್ರವಾರ ಕರ್ನಾಟಕರಾಜ್ಯಶಾಲಾ ಶಿಕ್ಷಣ ಇಲಾಖೆನೌಕರರ ಸಂಘದ ತಾಲೂಕು ಘಟಕದ ವತಿಯಿಂದ ನೌಕರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಣಮಂತ ಕಾರಾಮುಂಗೆ ನೇತೃತ್ವದಲ್ಲಿ ನೀಡಲಾದ ಮನವಿ ಪತ್ರ ಸ್ವೀಕರಿಸಿ ಅವರು ಮಾತನಾಡಿದರು. ರಾಜ್ಯದ ಶೈಕ್ಷಣಿಕ ಬೆಳವಣಿಗೆಗೆ ಶಿಕ್ಷಣ ಇಲಾಖೆ ಮಹತ್ವದ ಕಾರ್ಯನಿರ್ವಹಿಸುತ್ತಲಿದೆ. ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಲಿರುವ ನೌಕರರು ಮತ್ತು ಶಿಕ್ಷಕರು ಸದಾ ಮಕ್ಕಳ ಏಳ್ಗೆಗಾಗಿ ದುಡಿಯುವ ಕಾರ್ಯಮಾಡಬೇಕು ಎಂದರು. ತಾಲೂಕು ಮಟ್ಟದಲ್ಲಿ ಗುರುಭವನ ನಿರ್ಮಾಣಕ್ಕಾಗಿ ಶಿಕ್ಷಣ ಇಲಾಖೆ ನೌಕರರು ಮನವಿ ಸಲ್ಲಿಸಿದ್ದು, ಆದಷ್ಟು ಬೇಗ ಗುರುಭವನ ನಿರ್ಮಾಣ



ಮಾಡಿಕೊಡಲಾಗುವುದು ಎಂದು ಭರವಸೆ ನೀಡಿದರು. ಇದೇವೇಳೆ ಸಚಿವರು ಮೂರನೆಸಲ ರಾಜ್ಯದಲ್ಲಿ ಮಂತ್ರಿಯಾಗಿ ಕಾರ್ಯನಿರ್ವಹಿಸುತ್ತಿರುವ ಕಾರಣ ಶಾಲಾ ಶಿಕ್ಷಣ ಇಲಾಖೆಯ ನೌಕರರ ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ನೌಕರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಣಮಂತ ಕಾರಾಮುಂಗೆ, ಶಿವಕುಮಾರ ಘುಲಾರಿ, ದೇವಿದಾಸ ಮೇತ್ರೆ, ಪರಮೇಶ್ವರ ಕರಡ್ಯಾಳೆ, ರತ್ನಮ್ಮಾ ಹಾಲಕೂಡೆ, ಮುಕ್ತಾಬಾಯಿ ಎಕಲೂರೆ, ರಮೇಶ ಸಂಗಮೆ, ಮಹೇಶ ಮೇತ್ರೆ, ಚಂದ್ರಕಾಂತ ತಳವಾಡೆ ಹಾಗೂ ಇನ್ನಿತರರಿದ್ದರು.

## ಯುವಕನ ಮೇಲೆ ಹಲ್ಲೆ, ಪ್ರಕರಣ ದಾಖಲು

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಮೊಹರಂ ಹಬ್ಬದ ಅಂಗವಾಗಿ ನಡೆದ ಮೆರವಣಿಗೆ ವೇಳೆ ಆರಂಭವಾದ ಮಾತಿನ ಚಕಮಕಿ ಬಳಿಕ ಯುವಕನ ಮೇಲೆ ಹಲ್ಲೆ ನಡೆಸಿ ಜೀವ ಬೆದರಿಕೆ ಹಾಕಿದ ಆರೋಪದಡಿ ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಪೊಲೀಸರ ಮಾಹಿತಿ ಪ್ರಕಾರ, ದೂರುದಾರರಾದ ಮಲ್ಲಿಕಾರ್ಜುನ ಬಸಪ್ಪ ಮಲತಪ್ಪ (27) ಅವರು ಜೂನ್ 24ರ ರಾತ್ರಿ ಮೊಹರಂ ಮೆರವಣಿಗೆ ವೀಕ್ಷಿಸಲು ಸ್ನೇಹಿತರೊಂದಿಗೆ ತೆರಳಿದ್ದರು. ಈ ವೇಳೆ ಪರಿಚಯಸ್ಥರಾದ ಮಹೇಶ್, ಮಧು, ಅಂಬರೀಶ್ ಹಾಗೂ ಆನಂದ್ ಸೇರಿದಂತೆ ಕೆಲವರು ಕ್ಷುಲ್ಲಕ ವಿಚಾರಕ್ಕೆ ಜಗಳ ಆರಂಭಿಸಿ, ಪ್ಲಾಸ್ಟಿಕ್ ಪೈಪ್, ಕಟ್ಟಿಗೆ ಹಾಗೂ ಸ್ಟಿಕ್‌ನಿಂದ ಹಲ್ಲೆ ನಡೆಸಿ ಗಾಯಪಡಿಸಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಹಲ್ಲೆಯಲ್ಲಿ ಗಾಯಗೊಂಡ ಮಲ್ಲಿಕಾರ್ಜುನ ಅವರನ್ನು ಸ್ನೇಹಿತರು ಗುರುಮಠಕಲ್ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಬಳಿಕ ಕುಟುಂಬದ ಸದಸ್ಯರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಈ ದೂರಿನ ಮೇರೆಗೆ ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 147/2026 ದಾಖಲಿಸಲಾಗಿದ್ದು, ಬಿಎನ್‌ಎಸ್‌ನ ಕಲಂ 115(2), 118(1), 118(2), 352, 351(3) ಹಾಗೂ ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆ, 1989ರ ಸಂಬಂಧಿತ ಕಲಂಗಳು ಅಡಿಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ. ಪಿಎಸ್‌ಐ ಅಲಾಭಕ್ಷ್ ಶಾಬಾದ್ ಅವರ ನೇತೃತ್ವದಲ್ಲಿ ತನಿಖೆ ಮುಂದುವರಿದಿದೆ.

# ಹೈ.ಕದಲ್ಲಿ ಯೆಲ್ಲೊ ಅಲರ್ಟ್

## ರಾಜ್ಯದಲ್ಲಿ ಮುಂಗಾರು ಮತ್ತೆ ಜೋರು | ಹೈದರಾಬಾದ್ ಕರ್ನಾಟಕದಲ್ಲಿ ಸಿಡಿಲಬ್ಬರ: ಇಲಾಖೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದಲ್ಲಿ ಮುಂಗಾರು ಮತ್ತೆ ಜೋರಾಗಲಿದೆ. ಜೂನ್ 27 ರಿಂದ ಜೂನ್ 30ರವರೆಗೆ ವಿವಿಧ ಭಾಗಗಳಲ್ಲಿ ಗುಡುಗು, ಮಿಂಚು–ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಮಳೆಯ ತೀವ್ರತೆ ಹೆಚ್ಚಿರುವ ಹಿನ್ನೆಲೆಯಲ್ಲಿ ಉತ್ತರ ಒಳನಾಡು, ಕರಾವಳಿ ಭಾಗದ ಹಲವು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಲಾಗಿದೆ.

**ಅನುಕೂಲ ವಾತಾವರಣ:** ಬೆಂಗಳೂರು ಹವಾಮಾನ ಕೇಂದ್ರ ಮಾಹಿತಿ ಪ್ರಕಾರ, ನೈರುತ್ಯ ಮುಂಗಾರು 4 ದಿನಗಳಲ್ಲಿ ಅರಬ್ಬಿ ಸಮುದ್ರದ ಉತ್ತರ ಭಾಗ, ಗುಜರಾತ್, ಮಧ್ಯಪ್ರದೇಶ ಹಾಗೂ ಇತರ ಕೆಲವು ರಾಜ್ಯಗಳಿಗೆ ಇನ್ನಷ್ಟು ವ್ಯಾಪಿಸಲು ಅನುಕೂಲಕರ ವಾತಾವರಣವಿದೆ. ಗುಡುಗು ಮಿಂಚಿನ ಮಳೆ: ಜೂನ್ 26 ರಿಂದ 28 ರವರೆಗೆ ಉತ್ತರ ಒಳನಾಡಿನ ಒಂದೆರಡು ಕಡೆ 30–40 ಕಿ.ಮೀ ವೇಗದಲ್ಲಿ ಬಿರುಗಾಳಿ ಸಹಿತ ಗುಡುಗು–ಮಿಂಚಿನ ಮಳೆಯಾಗುವ ಸಾಧ್ಯತೆ ಇದೆ. ಇನ್ನು ಮುಂದಿನ 4 ದಿನಗಳ ಕಾಲ ರಾಜ್ಯದ ಗರಿಷ್ಠ ತಾಪಮಾನದಲ್ಲಿ ಯಾವುದೇ ದೊಡ್ಡ ಬದಲಾವಣೆಗಳು ಇರುವುದಿಲ್ಲ ಎಂದು ವಿವರಿಸಿದೆ.



### ಹೈ.ಕಕ್ಕೆ ಗುಡುಗು ಮಿಂಚು

ಜೂನ್ 27 ರಿಂದ ಜೂನ್ 29ರ ಮುಂಜಾನೆಯವರೆಗೆ ಉತ್ತರ ಒಳನಾಡಿನಲ್ಲಿ ಮುಂಗಾರು ಚುರುಕುಗೊಳ್ಳಲಿದೆ. ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಬಿರುಗಾಳಿ ಬೀಸಲಿದೆ. ಗುಡುಗು–ಮಿಂಚು ಸಹಿತ ಭಾರಿ ಮಳೆಯಾಗಲಿದೆ. ಬೀದರ್, ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಬೆಳಗಾವಿ, ಧಾರವಾಡ, ಗದಗ, ಕೊಪ್ಪಳ, ಹಾವೇರಿ, ಉತ್ತರ ಕನ್ನಡ ಜಿಲ್ಲೆಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

### ಕರಾವಳಿಯತ್ತ ಮುಖ

ಜೂನ್ 29 ರಿಂದ ಹವಾಮಾನದಲ್ಲಿ ಕೊಂಚ ಬದಲಾವಣೆಯಾಗಲಿದ್ದು, ಉತ್ತರ ಒಳನಾಡಿನಲ್ಲಿ ಮಳೆಯ ಪ್ರಮಾಣ ತಗ್ಗಲಿದೆ ಹಾಗೂ ಅಲ್ಲಿನ ಎಚ್ಚರಿಕೆಯನ್ನು ಹಿಂಪಡೆಯಲಾಗಿದೆ. ಆದರೆ, ಮಳೆಯ ಅಬ್ಬರ ಕರಾವಳಿಯತ್ತ ಮುಖಮಾಡಲಿದೆ. ಉತ್ತರ ಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಭಾರಿ ಮಳೆಯಾಗಲಿದ್ದು, ಜೂನ್ 29 ಹಾಗೂ 30 ರಂದು ಯೆಲ್ಲೋ ಅಲರ್ಟ್ ನೀಡಲಾಗಿದೆ.

### ದಕ್ಷಿಣ ಒಳನಾಡು ಡಲ್..!

ರಾಜಧಾನಿ ಬೆಂಗಳೂರು ಸೇರಿದಂತೆ ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಮೈಸೂರು, ಮಂಡ್ಯ, ಹಾಸನ, ತುಮಕೂರು, ಚಿತ್ರದುರ್ಗ, ಚಿಕ್ಕಮಗಳೂರು, ಶಿವಮೊಗ್ಗಕ್ಕೆ ನಾಲ್ಕೂ ದಿನಗಳ ಕಾಲ ಯಾವುದೇ ಹವಾಮಾನ ಎಚ್ಚರಿಕೆ ನೀಡಿಲ್ಲ. ಕೇವಲವು ಕಡೆ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಗರಿಷ್ಠ ತಾಪಮಾನವು 31 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ತಾಪಮಾನವು 21 ಡಿಗ್ರಿ ಸೆಲ್ಸಿಯಸ್ರ ಆಸುಪಾಸಿನಲ್ಲಿ ಇರಲಿದೆ.

### ಯೆಲ್ಲೊ ಅಲರ್ಟ್ ಅಂದ್ರೆ..?

ಯೆಲ್ಲೋ ಅಲರ್ಟ್ ಎಂದರೆ ವಿಪತ್ತಿನ ಮುನ್ಸೂಚನೆ. ಈ ಜಿಲ್ಲೆಗಳಲ್ಲಿ ಬಿರುಗಾಳಿ, ಗುಡುಗು ಮತ್ತು ಮಿಂಚಿನ ಸಾಧ್ಯತೆ ಇರುವುದರಿಂದ, ಈ ಸಂದರ್ಭದಲ್ಲಿ ಸಾರ್ವಜನಿಕರು ಹಾಗೂ ದನಗಾಹಿಗಳು ಬಯಲು ಪ್ರದೇಶದಲ್ಲಿ ಓಡಾಡುವುದು ಅಥವಾ ಮರಗಳು/ವಿದ್ಯುತ್ ಕಂಬಗಳ ಕೆಳಗೆ ಆಶ್ರಯ ಪಡೆಯುವುದನ್ನು ತಡೆಯಬೇಕು ಎಂದು ಮುಂಜಾಗ್ರತಾ ಕ್ರಮವಾಗಿ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

## ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಜೊತೆ ಯಾವುದೇ ವ್ಯವಹಾರ ಸಂಬಂಧವಿಲ್ಲ

• ಮಲ್ಲಮ್ಮ ನುಡಿ ವಾರ್ತೆ ಧರ್ಮಸ್ಥಳ

ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ಮತ್ತು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಜೊತೆಗಿನ ಬಾಂಧವ್ಯದ ಬಗ್ಗೆ ರಾಜ್ಯ ರಾಜಕೀಯದಲ್ಲಿ ಹಲವಾರು ಬಾರಿ ಚರ್ಚೆಗಳು ಆಗುತ್ತಲೇ ಇವೆ. ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು, ವಿಜಯೇಂದ್ರ ಮತ್ತು ಡಿಕೆ ಶಿವಕುಮಾರ್ ಅವರು ಬ್ಯೂಸಿನೆಸ್ ಪಾರ್ಟ್ನರ್ ಎಂದು ಹಲವಾರು ಬಾರಿ ಹೇಳಿದ್ದರು. ಇಬ್ಬರ ನಡುವೆ ಹೊಂದಾಣಿಕೆ ಇರುವುದರಿಂದಲೇ, ರಾಜ್ಯ ಬಿಜೆಪಿಯಲ್ಲಿ ಭಿನ್ನಮತ ಹೆಚ್ಚಾಗಿರುವುದು ಎಂದು ಯತ್ನಾಳ್ ಆರೋಪಿಸುತ್ತಲೇ ಬರುತ್ತಿದ್ದಾರೆ. ಈ ಬಗ್ಗೆ, ವಿಜಯೇಂದ್ರ, ಸ್ಪಷ್ಟನೆಯನ್ನು ನೀಡಿ, "ನನ್ನ ಮತ್ತು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವೆ ವ್ಯವಹಾರವಿದೆ ಎನ್ನುವ ಆರೋಪಕ್ಕೆ ಯಾವುದೇ ಹುರುಳಿಲ್ಲ ಮತ್ತು ನಮ್ಮ ನಡುವೆ ಆತ್ಮೀಯತೆಯೂ



ಇಲ್ಲ. ಯಾರೋ ಈ ಸುದ್ದಿಯನ್ನು ಹರಿಯ ಬಿಟ್ಟಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾಗಿದ್ದಾಗ ಮತ್ತು ಈಗ ಮುಖ್ಯಮಂತ್ರಿಯಾಗಿದ್ದಾಗ, ಒಬ್ಬ ರಾಜಕಾರಣಿಯಾಗಿ ಏನು ಮರ್ಯಾದೆ, ಗೌರವ ಕೊಡಬೇಕೋ ಅದನ್ನು ಕೊಡುತ್ತಿದ್ದೇನೆಯೇ ಹೊರತು, ಇದರಿಂದ ಹೊರತಾದ ಯಾವುದೇ ಸಂಬಂಧ ನಮ್ಮಿಬ್ಬರ ನಡುವೆ ಇಲ್ಲ ಎಂದು ಹೇಳಿದ್ದಾರೆ.

ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ಆದಾಗ, ನನ್ನ ಬಗ್ಗೆ ಏನೇನೋ ಪುಕಾರು ಹಬ್ಬಿಸಲಾಯಿತು. ರಾಜ್ಯದ ಬಿಜೆಪಿ ಅಧ್ಯಕ್ಷರು ಮತ್ತು ರಾಜ್ಯದ ಮುಖ್ಯಮಂತ್ರಿಗಳು ಜೊತೆಯಾಗಿದ್ದಾರೆ ಎಂಬ ಅಪಪ್ರಚಾರ ಮಾಡಲಾಯಿತು. ಡಿಕೆ ಶಿವಕುಮಾರ್ ಮತ್ತು ನನ್ನ ಮಧ್ಯೆ ಯಾವುದೇ ವ್ಯವಹಾರವಿಲ್ಲ. ನನ್ನ ವಿರುದ್ಧ ಯಾರು ಅಪಪ್ರಚಾರ ಮಾಡುತ್ತಿದ್ದಾರೋ, ಅವರಿಗೆ ಆ ಭಗವಂತನೇ ಒಳ್ಳೆಯ ಬುದ್ಧಿ ಕೊಡಲಿ ಎಂದು ಎಂದು ಹೇಳಿದ್ದಾರೆ.

# ಬೆಳಕೇರಾ ಸಿ.ಸಿ ರಸ್ತೆಯೋ, ಸೆಗಣಿಯಂಥ ಕಳಪೆಯೋ..?

• ರಾಜ್‌ಕುಮಾರ್ ಹಡಪದ, ಚಿಟಗುಪ್ಪ

ಹೇಳಿ ಕೇಳಿ ಇದು ಹಿಂದುಳಿದ ಪ್ರದೇಶ. ಮೂಲ ಸೌಲಭ್ಯಗಳಿಲ್ಲದೆ ಗ್ರಾಮಗಳ ಸ್ಥಿತಿ ಚಿಂತಾಜನಕವಾಗಿದೆ. ಅಧಿಕಾರಿಗಳು ಈ ಬಗ್ಗೆ ಕೇಳಲೂ ಬರುವುದಿಲ್ಲ. ಹೇಳಲು ಹೋದರೆ ಕಿವಿಗೊಟ್ಟು ಕೇಳುವುದೂ ಇಲ್ಲ. ಇಂತಹ ಸಂದರ್ಭದಲ್ಲಿ ಯಾವ ಜನ್ಮದ ಪುಣ್ಯವೋ ಎಂಬಂತೆ, ಯಾರದೋ ಒತ್ತಾಯಕ್ಕೆ, ಯಾರದೋ ದೂರಿನ ಮೇರೆಗೆ ಕೆಕೆಆರ್‌ಡಿಬಿ ಅನುದಾನು ಬಂದಿದ್ದು ಅಪರೂಕ್ಕೆ ರಸ್ತೆ ನಿರ್ಮಿಸಲು ಮುಂದಾಗಿದೆ.

**ನಾಮಕಾವಾಸ್ತೆಗೆ ಕಾಮಗಾರಿ:** ಆದರೆ..! ತಾಲೂಕಿನ ಬೆಳಕೇರಾ ಗ್ರಾಮದಲ್ಲಿ 10 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಸಿ.ಸಿ ರಸ್ತೆ ಕಳಪೆ ಮಟ್ಟದಿಂದ ಕೂಡಿದೆ. ಸಿಮೆಂಟ್ ನಾಮಕಾವಾಸ್ತೆ ಎಂಬಂತೆ ಹಾಕಿದ್ದು, ಕಾಲಿಂದ ಒದ್ದರೆ ಕೂಡಲೇ ಎದ್ದು ಬರುತ್ತದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

**ಕಳಪೆ ಕಾಮಗಾರಿಗೆ ಸಾಕ್ಷಿ:** ಬೆಳೆಕೇರಾ ಗ್ರಾಮದ ಕನಕದಾಸ ವೃತ್ತದ ಪಕ್ಕದ ಓಣಿಯಲ್ಲಿ ಕೆಕೆಆರ್‌ಡಿಬಿ ಅನುದಾನದಿಂದ ಸುಮಾರು 10 ಲಕ್ಷ ರೂಪಾಯಿ ವೆಚ್ಚದಲ್ಲಿ ರಸ್ತೆ ಕಾಮಗಾರಿ ನಡೆಸಲಾಗುತ್ತಿದೆ. ಆದರೆ ಇಲ್ಲಿ ರಸ್ತೆ ಕಾಮಗಾರಿಗೆ ಮರಳು ಬಳಸದೇ ಜಲ್ಲಿಕಲ್ಲಿನ ಬೂದಿಯನ್ನು ಬಳಸಲಾಗಿದೆ.

**ಪಂಚಾಯಿತಿ ಫಜೀತಿ**

### ರಸ್ತೆಗೆ ನೀರಿಂದ ಕ್ಯೂರಿಂಗ್ ಕೂಡ ಮಾಡಿಲ್ಲ..!


ಇದು ಸಿಸಿ ರಸ್ತೆಯ ಬದಲು ಸೆಗಣಿಯಿಂದ ಅಂಗಳ ಸಾರಿಸಿದ ರೀತಿಯಲ್ಲಿ ಸಿಸಿ ರಸ್ತೆಯಂತಿದೆ. ನಿರ್ಮಿಸಿದ ರಸ್ತೆಗೆ ನೀರಿನಿಂದ ಕ್ಯೂರಿಂಗ್ ಕೂಡ ಮಾಡುತ್ತಿಲ್ಲ. ಹನಿ ನೀರು ಬಿದ್ದರೂ ರಸ್ತೆಯ ಮೇಲೆ ನಿಲ್ಲುತ್ತಿದೆ. ರಭಸವಾಗಿ ಮಳೆ ಬಂದರೆ ಈ ರಸ್ತೆ ಸಂಪೂರ್ಣ ವಾಗಿ ಕೆಟ್ಟು ಹೋಗುತ್ತದೆ. ಈ ರಸ್ತೆ ಸಂಪೂರ್ಣ ಕಳಪೆ ಮಟ್ಟದಿಂದ ಕೂಡಿದೆ. ಈ ಕುರಿತು ಮೇಲಾಧಿಕಾರಿಗಳು ತನಿಖೆ ನಡೆಸಬೇಕು ಎಂದು ಓಣಿಯವರು ಆಗ್ರಹಿಸಿದ್ದಾರೆ.

### ಎಲ್ಲಿದ್ದಾರೆ ಜನಪ್ರತಿನಿಧಿ ಅಧಿಕಾರಿ?

ಬೆಳಕೇರಾ ಗ್ರಾಮದಲ್ಲಿ 10 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಸಿ.ಸಿ ರಸ್ತೆ ಕಳಪೆ ಮಟ್ಟದಿಂದ ಕೂಡಿದೆ. ಇದರ ಬಗ್ಗೆ ಸಂಬಂಧ ಪಟ್ಟ ನಿರ್ಮಿತಿ ಇಲಾಖೆಯ ಎಇಇ ಅವರಿಗೆ ಮಾಹಿತಿ ಕೇಳಲು ಪತ್ರಕರ್ತ ಕರೆ ಮಾಡಿದರೆ ಎಇಇ ಕರೆ ಸ್ವೀಕರಿಸುವುದೇ ಇಲ್ಲ. ಯಾರಿಗೆ ಹೇಳಬೇಕು..? ಚುನಾವಣೆಯಲ್ಲಿ ಮಾತ್ರ ಕಾಣಿಸಿಕೊಳ್ಳುವ ಜನಪ್ರತಿನಿಧಿಗಳು ಈಗೆಲ್ಲಿದ್ದಾರೆ? ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಾರೆ.



ಗುತ್ತಿಗೆದಾರ ಮನಬಂದಂತೆ ಸಿಸಿ ರಸ್ತೆ ಕಾಮಗಾರಿ ಮಾಡಿದ್ದಾರೆ. ಯಾವುದೇ ಗುಣಮಟ್ಟದ ಕಾಮಗಾರಿ ಮಾಡಿಲ್ಲ. ರಸ್ತೆ ಹೊಡು ತೆಂಗು ರೀತಿಯಲ್ಲಿ ಮಾಡಿದ್ದಾರೆ. ಸಿಸಿ ರಸ್ತೆಯ ಬೆಡ್ ಹಾಕುವಾಗ ಸಂಬಂಧ ಪಟ್ಟ ಅಧಿಕಾರಿಗಳು ಬಂದಿಲ್ಲ. ಕೆಲಸ ಪೂರ್ಣಗೊಂಡು ಸುಮಾರು 5 6 ದಿನಗಳು ಕಳೆದಿವೆ ಆದರೆ ಒಂದು ದಿನವೂ ಸಹ ರಸ್ತೆಗೆ ಒಂದು ಕೊಡನು ನೀರು ಹಾಕಿಲ್ಲ. ಈಗಾಗಲೇ ರಸ್ತೆ ಕಾಮಗಾರಿಯ ಹಾಕಿರುವ ಮರಳು ಕಿತ್ತು ಹೋಗುತ್ತಿದೆ. ಈ ಕಾಮಗಾರಿಯನ್ನು ಅಧಿಕಾರಿಗಳು ಪರಿಶೀಲಿಸಿ ಗುಣಮಟ್ಟದ ರಸ್ತೆ ನಿರ್ಮಿಸಬೇಕು.
–ಮಾಣಿಕ ಹಿಪ್ಪರ್ಗಿ, ಮಾಜಿ ಅಧ್ಯಕ್ಷರು ಗ್ರಾ.ಪಂ. ಬೆಳಕೇರಾ





**ಡಿಕೆಶಿ ಜೊತೆ ಯಾವುದೇ ವ್ಯವಹಾರಿಕ, ಆತ್ಮೀಯತೆಯಿಲ್ಲ, ಅಪಪ್ರಚಾರ ಮಾಡುವವರಿಗೆ ದೇವರೇ ಬುದ್ಧಿ ಕೊಡಲಿ: ವಿಜಯೇಂದ್ರ**

## ಮಾನವೀಯತೆಯ ಬೆಲೆ ಹೆಚ್ಚಿಸಿಕೊಳ್ಳುವುದನ್ನು ಕಲಿಯಬೇಕು

ಮಾನವನ ನಿಜವಾದ ಮೌಲ್ಯವು ಹಣ, ಹುದ್ದೆ ಅಥವಾ ಅಧಿಕಾರದಿಂದ ಅಲ್ಲ; ಅವನ ಮಾನವೀಯತೆಯಿಂದ ಅಳೆಯಲ್ಪಡುತ್ತದೆ. ಇತರರ ದುಃಖದಲ್ಲಿ ಭಾಗಿಯಾಗುವುದು, ಸಂಕಷ್ಟದಲ್ಲಿರುವವರಿಗೆ ನೆರವಾಗುವುದು, ಪ್ರೀತಿ, ಕರುಣೆ ಮತ್ತು ಗೌರವದಿಂದ ವರ್ತಿಸುವುದು ಮಾನವೀಯತೆಯ ನಿಜವಾದ ಲಕ್ಷಣಗಳು.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಇಂದಿನ ಸ್ಪರ್ಧಾತ್ಮಕ ಜೀವನದಲ್ಲಿ ಮಾನವೀಯ ಮೌಲ್ಯಗಳು ನಿಧಾನವಾಗಿ ಮರೆಯಾಗುತ್ತಿರುವುದು ವಿಷಾದನೀಯ. ಸ್ವಾರ್ಥಕ್ಕಿಂತ ಪರೋಪಕಾರಕ್ಕೆ, ದ್ವೇಷಕ್ಕಿಂತ ಪ್ರೀತಿಗೆ, ಅಹಂಕಾರಕ್ಕಿಂತ ವಿನಯಕ್ಕೆ ಹೆಚ್ಚಿನ ಮಹತ್ವನೀಡಿದಾಗ ಮಾತ್ರ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ವಿಶ್ವಾಸ ಬೆಳೆಯುತ್ತದೆ. ಪ್ರತಿಯೊಬ್ಬರೂ ತಮ್ಮ ನಡೆ–ನುಡಿಗಳಲ್ಲಿ ಮಾನವೀಯತೆಯನ್ನು ಅಳವಡಿಸಿಕೊಂಡರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಆದ್ದರಿಂದ, ಮಾನವೀಯತೆಯ ಬೆಲೆ ಹೆಚ್ಚಿಸಿಕೊಳ್ಳುವುದನ್ನು ಪ್ರತಿಯೊಬ್ಬರೂ ಕಲಿಯಬೇಕು. ಇದು ವ್ಯಕ್ತಿಯನ್ನಷ್ಟೇ ಅಲ್ಲ, ಇಡೀ ಸಮಾಜವನ್ನೂ ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ಶ್ರೇಷ್ಠ ಗುಣವಾಗಿದೆ.

## ಸಂಗೋಳಗಿಯಲ್ಲಿ ಅದ್ದೂರಿಯಾಗಿ ಜರುಗಿದ ಮೊಹರಂ



**ಬೀದರ್:** ಜಿಲ್ಲೆಯ ಸಂಗೋಳಗಿ ಗ್ರಾಮದಲ್ಲಿ ಮೊಹರಂ ಹಬ್ಬವನ್ನು ಭಕ್ತಿ, ಶ್ರದ್ಧೆ ಹಾಗೂ ಸೌಹಾರ್ದತೆಯಿಂದ ಅದ್ದೂ–ರಿಯಾಗಿ ಆಚರಿಸಲಾಯಿತು. ಹಬ್ಬದ ಅಂಗವಾಗಿ ಧಾರ್ಮಿಕ ವಿಧಿವಿಧಾನಗಳು, ಪಂಜಿನ ಮೆರವಣಿಗೆ ನಡೆದವು.

ಗ್ರಾಮದ ವಿವಿಧ ಭಾಗಗಳಿಂದ ಆಗಮಿಸಿದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಶಾಂತಿ, ಸೌಹಾರ್ದತೆ ಹಾಗೂ ಸಹೋದರತ್ವದ ಸಂದೇಶವನ್ನು ಸಾರಿದರು. ಮೆರವಣಿಗೆಯಲ್ಲಿ ಯುವಕರು, ಹಿರಿಯರು ಹಾಗೂ ಮಹಿಳೆಯರು ಉತ್ಸಾಹದಿಂದ ಪಾಲ್ಗೊಂಡಿದ್ದು ಗ್ರಾಮದಲ್ಲಿ ಹಬ್ಬದ ಸಂಭ್ರಮ ಮನೆ ಮಾಡಿತ್ತು.

ಮೊಹರಂ ಹಬ್ಬವನ್ನು ಹಿಂದು ಮತ್ತು ಮುಸ್ಲಿಂ ಎರಡು ಧರ್ಮಗಳು ಸೇರಿ ಜಾತಿ ಭೇದವನ್ನು ಮರೆತು ಮಾನವರೆಲ್ಲರು ಹಿಂದೆ ಎಂಬ ಮನೋಬಾವುಳ್ಳ ಹಬ್ಬವಾಗಿದ್ದು, ಹಿಂದು ಮತ್ತು ಮುಸ್ಲಿಂ ಎಂದು ಬುದುವಾರ ವಿಜ್ಞಬನೆಯಿಂದ ಮೊಹರಂ ಹಬ್ಬವನ್ನು ಅಚ್ಚರಿಸಲಾಯಿತು.







ಕಲಬುರ್ಗಿ .ತ್ಯಾಗ,ಬಲಿದಾನದ ಸಂಕೇತವಾದ ಮೊಹರಂ ಹಬ್ಬದ ಆಚರಣೆ ಅಂಗವಾಗಿ ಇರಾನಿ ಸಮುದಾಯದ ಜನರು ಖೂನಿ ಮಾತಂ ಅಂಗವಾಗಿ ದೇಹದಲ್ಲಿ ರಕ್ತ ಗಾಯ ಮಾಡಿಕೊಂಡು ಮೊಹರಂ ಆಚರಣೆ ಮಾಡಿದರು.



ಬೆಂಗಳೂರಿನ ಕ್ವೀನ್ಸ್ ರಸ್ತೆಯ ಭಾರತ್ ಜೋಡೋ ಭವನದಲ್ಲಿ ನಡೆದ ಎಸ್‌ಐಆರ್ ತರಬೇತಿ ಶಿಬಿರವನ್ನು ಉದ್ದೇಶಿಸಿ ಕೆಪಿಸಿಸಿ ಅಧ್ಯಕ್ಷರಾದ ಶ್ರೀ ಬಿಕೆ ಹರಿಪ್ರಸಾದ್ ಅವರು ಮಾತನಾಡಿದರು."ಕಾಂಗ್ರೆಸ್ ನಡೆ ನಿಮ್ಮ ಮತರಕ್ಷಣೆ ಕಡೆ" ಘೋಷವಾಕ್ಯದಲ್ಲಿ ತಳಮಟ್ಟದಿಂದಲೇ ಎಸ್‌ಐಆರ್ ಕುರಿತು ಜಾಗೃತಿ ಮೂಡಿಸಲು ಸೂಚನೆ ನೀಡಿದರು. ಕೆಪಿಸಿಸಿ ಕಾರ್ಯಾಧ್ಯಕ್ಷರುಗಳಾದ ಜಿ.ಸಿ ಚಂದ್ರಶೇಖರ್, ಮಂಜುನಾಥ್ ಭಂಡಾರಿ, ಮಾಜಿ ಸಭಾಪತಿಗಳಾದ ವಿ ಆರ್ ಸುದರ್ಶನ್ ಮಾಜಿ ವಿಧಾನಪರಿಷತ್ತಿನ ಸದಸ್ಯ ಎಂ ನಾರಾಯಣಸ್ವಾಮಿ ಹಾಗೂ ಸಾಮಾಜಿಕ ಕಾರ್ಯಕರ್ತ ಡಾ.ಹೆಚ್.ವಿ.ವಾಸು ಅವರು ಉಪಸ್ಥಿತರಿದ್ದರು.

# ಅರ್ಹರ ಹೆಸರು ಬಿಟ್ಟುಹೋಗದಂತೆ ಎಚ್ಚರಿಕೆ ವಹಿಸಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಎಚ್ಚರಿಕೆ ವಹಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ನಗರದ ಬಿಕೆಐಟಿ ಸಭಾಂಗಣದಲ್ಲಿ ತಾಲೂಕು ಕಾಂಗ್ರೆಸ್ ಸಮಿತಿ ವತಿಯಿಂದ ಎಸ್‌ಐಆರ್ ಕುರಿತು ಗುರುವಾರ ಆಯೋಜಿಸಿದ್ದ ಜನಜಾಗೃತಿ ಮತ್ತು ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬೂತ್ ಮಟ್ಟದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಬಿಎಲ್‌ಎ–2 ಪ್ರತಿನಿಧಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಿ, ಎಸ್‌ಐಆರ್ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದರ ಜತೆಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಲು ಸಹಕರಿಸಬೇಕು ಎಂದು ಕರೆ ನೀಡಿದರು. ಪ್ರಜಾಪ್ರಭುತ್ವದ ಭದ್ರ ಅಡಿಪಾಯವೇ ಮತದಾರರಾಗಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕರ ಮತದಾನದ ಹಕ್ಕು ಸುರಕ್ಷಿತವಾಗಿರಲು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸಂಘಟಿತವಾಗಿ ಹಾಗೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕಾರ್ಯಕರ್ತರಿಗೆ ಕಿವಿಮಾತು ಹೇಳಿದರು.

ಸಂಸದ ಸಾಗರ ಖಂಡ್ರೆ ಮಾತನಾಡಿ, ಮತದಾರರ ಹಕ್ಕುಗಳ ರಕ್ಷಣೆಗೆ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಕಾರ್ಯಕರ್ತರು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.



ಭಾಲ್ಕಿಯ ನಗರದ ಬಿಕೆಐಟಿ ಸಭಾಂಗಣದಲ್ಲಿ ನಡೆದ ಎಸ್‌ಐಆರ್ ಜನಜಾಗೃತಿ ಮತ್ತು ತರಬೇತಿ ಕಾರ್ಯಕ್ರಮದಲ್ಲಿ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ ನೇತೃತ್ವದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಸನ್ಮಾನಿಸಲಾಯಿತು. ಸಂಸದ ಸಾಗರ ಖಂಡ್ರೆ ಇದ್ದರು.

> **ಚುನಾವಣಾ ಆಯೋಗ ಕೈಗೊಂಡಿರುವ ಮತದಾರರ ವಿಶೇಷ ತೀವ್ರ ಪರಿಷ್ಕರಣೆ(ಎಸ್‌ಐಆರ್) ಪ್ರಕ್ರಿಯೆಯು ಮತದಾರರನ್ನು ಪಟ್ಟಿಯಿಂದ ಕೈಬಿಡುವ ಹುನ್ನಾರವಾಗಿದೆ. ಅರ್ಹ ಮತದಾರರ ಹೆಸರು ಪಟ್ಟಿಯಿಂದ ಡಿಲೀಟ್ ಆಗದಂತೆ ಕೈ ಕಾರ್ಯಕರ್ತರು ಎಚ್ಚರಿಕೆ ವಹಿಸಬೇಕು.**
>
> **–ಈಶ್ವರ ಖಂಡ್ರೆ**
> **ಜಿಲ್ಲಾ ಉಸ್ತುವಾರಿ ಸಚಿವರು ಬೀದರ್**

ತಾಲೂಕು ಕಾಂಗ್ರೆಸ್ ಪಕ್ಷದ ಅಧ್ಯಕ್ಷರು, ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರು ಆಗಿರುವ ಹಣಮಂತರಾವ ಚವ್ಹಾಣ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಪ್ರಕಾಶ ಮಾಶೆಟ್ಟೆ, ಮಲ್ಲಿಕಾರ್ಜುನ ಪಾಟೀಲ್ ಮುಗನೂರ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಅಶೋಕರಾವ ಸೋನಜೀ, ಜಿಪಂ ಮಾಜಿ ಅಧ್ಯಕ್ಷ ಶಿವರಾಜ ಹಾಸನಕರ್, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ಅಬ್ದುಲ್ ನಸೀರ್ ಸೇರಿದಂತೆ ಹಲವರು ಇದ್ದರು.

# ಮಾದಕ ದ್ರವ್ಯಗಳಿಗೆ ಇಲ್ಲ ಎನ್ನಿ, ವ್ಯಸನಮುಕ್ತ ಭಾರತ ಕಟ್ಟೋಣ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ನಗರದ ಅರುಣೋದಯ ವ್ಯಸನ ಮುಕ್ತ ಕೇಂದ್ರದಲ್ಲಿ ಮೇರಾ ಯುವ ಭಾರತ ಕೊಪ್ಪಳ, ಯುವ ಧ್ವನಿ ಸಂಸ್ಥೆ ಮೋರನಹಳ್ಳಿ ಹಾಗೂ ಮಹಿಳಾ ಧ್ವನಿ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿದ ಜಿಲ್ಲಾ ಯುವ ಅಧಿಕಾರಿ ಮೇಘಾ ಜಿ.ಕೆ. ಮಾತನಾಡಿ, "ಜೂನ್ 26 ಅನ್ನು ವಿಶ್ವದಾದ್ಯಂತ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನವಾಗಿ ಆಚರಿಸಲಾಗುತ್ತದೆ. 2025ರ ಘಾಂಡಿಟಜ ಆಡಿಣಾಂ ಖಜಠಿಂಡಿಣ ಪ್ರಕಾರ, ಜಗತ್ತಿನಾದ್ಯಂತ ಸುಮಾರು 316 ಮಿಲಿಯನ್ ಜನರು (15–64 ವರ್ಷ ವಯಸ್ಸಿನವರಲ್ಲಿ ಸುಮಾರು 6 ಪ್ರತಿಶತ) ಕನಿಷ್ಠ ಒಂದು ಬಾರಿ ಮಾದಕ ದ್ರವ್ಯಗಳನ್ನು ಬಳಸಿದ್ದಾರೆ. ಇವರಲ್ಲಿ ಸುಮಾರು 64 ಮಿಲಿಯನ್ ಜನರು ಮಾದಕ ದ್ರವ್ಯ ಬಳಕೆಯಿಂದ ಉಂಟಾಗುವ ಅಸ್ವಸ್ಥತೆಗಳಿಂದ ಬಳಲುತ್ತಿದ್ದಾರೆ. ಈ ಅಂಕಿ–ಅಂಶಗಳು ವ್ಯಸನದ ವಿರುದ್ಧ ಜಾಗೃತಿ, ತಡೆಗಟ್ಟುವಿಕೆ ಮತ್ತು ಚಿಕಿತ್ಸೆಯ ಅಗತ್ಯವನ್ನು ಒತ್ತಿ ಹೇಳುತ್ತವೆ. 'ಮಾದಕ ದ್ರವ್ಯಗಳಿಗೆ ಇಲ್ಲ ಎನ್ನೋಣ–ವ್ಯಸನಮುಕ್ತ ಭಾರತ ನಿರ್ಮಿಸೋಣ' ಎಂಬ ಸಂಕಲ್ಪದೊಂದಿಗೆ ಪ್ರತಿಯೊಬ್ಬರೂ ಸಮಾಜದಲ್ಲಿ ಜಾಗೃತಿ ಮೂಡಿಸಲು ಕೈಜೋಡಿಸಬೇಕು" ಎಂದು ಕರೆ ನೀಡಿದರು.

ಬಿ.ಎನ್. ಹೊರಪೇಟಿ ಮಾತನಾಡಿ, "ವ್ಯಸನವು ವ್ಯಕ್ತಿಯ ಆರೋಗ್ಯ, ಕುಟುಂಬ ಹಾಗೂ ಸಮಾಜದ ಮೇಲೆ ಗಂಭೀರ ದುಷ್ಪರಿಣಾಮ ಬೀರುತ್ತದೆ. ಮಾದಕ ದ್ರವ್ಯಗಳಿಂದ ದೂರವಿದ್ದು ಆರೋಗ್ಯಕರ, ಶಿಸ್ತುಬದ್ಧ ಹಾಗೂ ಜವಾಬ್ದಾರಿಯುತ ಜೀವನ ನಡೆಸಬೇಕು. ಯುವಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ವ್ಯಸನಮುಕ್ತ ಭಾರತ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸೋಣ. ಇದೇ ಮಾದಕ ದ್ರವ್ಯ ವಿರೋಧಿ ದಿನದ ಸಂಕಲ್ಪವಾಗಲಿ" ಎಂದರು.

1098 ಜಿಲ್ಲಾ ಸಂಯೋಜಕ ಶರಣಪ್ಪ ಸಿಂಗನಾಳ ಮಾತನಾಡಿ, ವ್ಯಸನಕ್ಕೆ ಬಲಿಯಾದವರ ಕುಟುಂಬಗಳು ನೆಮ್ಮದಿ ಕಳೆದುಕೊಳ್ಳುವುದಲ್ಲದೆ, ಕುಟುಂಬ ಸದಸ್ಯರು ಹಾಗೂ ಮಕ್ಕಳು ಮಾನಸಿಕ ಒತ್ತಡಕ್ಕೆ ಒಳಗಾಗುತ್ತಾರೆ. ಆದ್ದರಿಂದ ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಬದುಕಿನತ್ತ ಹೆಜ್ಜೆ ಇಡುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಎಲ್ಲರೂ "ವ್ಯಸನ ಬೇಡ–ಆರೋಗ್ಯಕರ ಜೀವನವೇ ನಮ್ಮ ಗುರಿ. ಮಾದಕ ದ್ರವ್ಯಗಳಿಗೆ ಇಲ್ಲ ಎನ್ನೋಣ, ವ್ಯಸನಮುಕ್ತ ಭಾರತ ಕಟ್ಟೋಣ" ಎಂಬ ಘೋಷವಾಕ್ಯವನ್ನು ಕೂಗಿ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಕಿ ಗೀತಾಂಜಲಿ, ಕುಬೇಂದ್ರಾಚಾರ್, ಶಿವರಾಜ್ ಕಂಬಳಿ, ಶರಣು ವಿವೇಕಿ, ಚಿಕಿತ್ಸಕರು ಹಾಗೂ ಸಿಬ್ಬಂದಿ ವರ್ಗ ಇತರರು ಉಪಸ್ಥಿತರಿದ್ದರು.




# ವಿಶ್ವ ಯೋಗ: ಸದ್ಗುರು ದೀಪ ವಾವ್ ಕಿಡ್ಸ್ ಶಾಲೆಯಲ್ಲಿ ಯೋಗ ಜಾಗೃತಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ನಗರದ ಅಕ್ಕಮಹಾದೇವಿ ಬಡಾವಣೆಯಲ್ಲಿರುವ ಸದ್ಗುರು ದೀಪ ವಾವ್ ಕಿಡ್ಸ್ ಪಬ್ಲಿಕ್ ಶಾಲೆ ಹಾಗೂ ರೂಪಾ ಕಲೆ ಸಾಹಿತ್ಯ ಮತ್ತು ಸಾಂಸ್ಕೃತಿಕ ಟ್ರಸ್ಟ್ ಇವರ ಸಂಯುಕ್ತಾಶ್ರಯದಲ್ಲಿ 12ನೇ ವಿಶ್ವ ಯೋಗ ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮವನ್ನು ಯೋಗ ಗುರು ಹಾಗೂ ಪತಂಜಲಿ ಯೋಗ ಪೀಠ ಬೀದರ್ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ರೂಪಾ ಪಾಟೀಲ್ ಉದ್ಘಾಟಿಸಿ, ಶಾಲೆಯ ಪದಾಧಿಕಾರಿಗಳು, ಸಿಬ್ಬಂದಿ ಹಾಗೂ ಮಕ್ಕಳಿಗೆ ಯೋಗ ತರಬೇತಿ ನೀಡಿದರು. ಈ ಸಂದರ್ಭದಲ್ಲಿ ಯೋಗ ಮತ್ತು ಪ್ರಾಣಾಯಾಮವು ಮೆದುಳು, ಹೃದಯ, ಶ್ವಾಸಕೋಶ ಸೇರಿದಂತೆ ದೇಹದ ಪ್ರತಿಯೊಂದು ಅಂಗಾಂಗದ ಆರೋಗ್ಯಕ್ಕೆ ಅಗತ್ಯವಾಗಿದ್ದು, ಮಕ್ಕಳ ಬೆಳವಣಿಗೆ ಮತ್ತು ಜ್ಞಾಪಕಶಕ್ತಿ ವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು. ಪ್ರತಿಯೊಬ್ಬ ಮಗುವಿಗೂ ಬಾಲ್ಯದಲ್ಲಿಯೇ ಯೋಗದ ತರಬೇತಿ ನೀಡಬೇಕು. ತಾಡಾಸನ, ವೃಕ್ಷಾಸನ ಹಾಗೂ ಭ್ರಮರಿ ಪ್ರಾಣಾಯಾಮಗಳನ್ನು ಮಕ್ಕಳಿಗೆ ಅಭ್ಯಾಸ ಮಾಡಿಸುವುದು ಅಗತ್ಯ ಎಂದು ಅವರು ಹೇಳಿದರು. ಆರೋಗ್ಯಕರ ಆಹಾರ ಹಾಗೂ ಯೋಗಾಭ್ಯಾಸದ ಮೂಲಕ ಉತ್ತಮ ಜೀವನಶೈಲಿಯನ್ನು ರೂಢಿಸಿಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.

ಶಾಲೆಯ ಶಿಕ್ಷಕರಿಗೂ ವಿಶೇಷ ಯೋಗ ತರಬೇತಿ ನೀಡಿದ ರೂಪಾ ಪಾಟೀಲ್, ಮುಂದಿನ ದಿನಗಳಲ್ಲಿ ಪ್ರತಿ ವಾರ ಶಾಲೆಗೆ ಆಗಮಿಸಿ ಯೋಗಾಭ್ಯಾಸ ನಡೆಸಿಕೊಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಅಧ್ಯಕ್ಷ ಪ್ರದೀಪ್ ಗಾಜಲ್, ಪ್ರತಿವರ್ಷ ಯೋಗ ದಿನಾಚರಣೆಯಲ್ಲಿ ಭಾಗವಹಿಸಿ ಮಕ್ಕಳಿಗೆ ಮತ್ತು ಶಿಕ್ಷಕರಿಗೆ ಯೋಗದ ತರಬೇತಿ ನೀಡುತ್ತಿರುವ ರೂಪಾ ಪಾಟೀಲ್ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಮುಖ್ಯ ಅತಿಥಿ ಮಂಗಲಾ ಗಾಜಲ್ ಮಾತನಾಡಿ, ಯೋಗಗುರುಗಳ ಜೀವನಶೈಲಿ ಎಲ್ಲರಿಗೂ ಮಾದರಿಯಾಗಿದ್ದು, ಉತ್ತಮ ಆರೋಗ್ಯಕ್ಕಾಗಿ ಪ್ರತಿದಿನ ಯೋಗಾಭ್ಯಾಸ ಮಾಡುವುದು ಅಗತ್ಯ ಎಂದು ಹೇಳಿದರು. ಪ್ರಾಂಶುಪಾಲೆ ರಾಣಿ ಗಾಜಲ್ ಮಾತನಾಡಿ, ರೂಪಾ ಪಾಟೀಲ್ ಅವರ ಮಾರ್ಗದರ್ಶನದಲ್ಲಿ ಪ್ರತಿದಿನ ಯೋಗಾಭ್ಯಾಸ ಮಾಡುವುದನ್ನು ರೂಢಿಸಿಕೊಂಡಿದ್ದು, ಇದರಿಂದ ಆರೋಗ್ಯದಲ್ಲಿ ಉತ್ತಮ ಬದಲಾವಣೆ ಕಂಡುಬಂದಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಸಿಬ್ಬಂದಿಗಳಾದ ನಿಶಾ, ಅಶ್ವಿನಿ, ಅಂಬಿಕಾ, ಪ್ರೀತಿ ಸೇರಿದಂತೆ ಇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



# ರೈತರ ಸಂಕಷ್ಟಕ್ಕೀಡಾಗದಂತೆ ಸ್ಪಂದಿಸಿ: ಖಂಡ್ರೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಮಹಾತ್ಮಾ ಗಾಂಧೀ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಮನ್ರೇಗಾ)ಯನ್ನು ಜು.1ರಿಂದ ವಿಬಿಜಿ ರಾಮ್ ಜೀ ಎಂಬ ಹೊಸ ರೂಪದಲ್ಲಿ ಜಾರಿಗೊಳಿಸಲು ಸಜ್ಜಾಗುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿಂದು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ತುರ್ತು ಪರಿಶೀಲನಾ ಸಭೆ ನಡೆಸಿದ ಅವರು, ಬೀದರ್ ಜಿಲ್ಲೆಯಲ್ಲಿ ವಾಡಿಕೆಯ ಮುಂಗಾರು ಮಳೆ ಕೊರತೆ ಉಂಟಾಗಿದ್ದು, ಮನ್ರೇಗಾ ಅಡಿ ಉದ್ಯೋಗಕ್ಕೆ ಬೇಡಿಕೆ ಹೆಚ್ಚಾಗುತ್ತದೆ. ಜುಲೈ 1ರಿಂದ ಹೊಸ ಯೋಜನೆ ಜಾರಿ ಮಾಡಬೇಕಾಗಿದ್ದು, ಇದಕ್ಕೆ ಸನ್ನದ್ಧರಾಗುವಂತೆ ತಿಳಿಸಿದರು.

ಮೊದಲೇ ಮಳೆಯ ಕೊರತೆಯಿಂದ ಆಂತಕಕ್ಕೀಡಾಗಿರುವ ಅನ್ನದಾತರಿಗೆ ತೊಂದರೆ ಆಗದಂತೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ಪೂರೈಕೆಗೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತ ಮತ್ತು ಕೃಷಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕೃಷಿ ಅಧಿಕಾರಿಗಳು ರೈತರಿಗೆ ಮಳೆಯ ಕೊರತೆಯಾದಾಗ ಯಾವ ಬೆಳೆ ಬೆಳೆಯಬೇಕು ಎಂಬ ಮಾರ್ಗದರ್ಶನ ಮಾಡಬೇಕು, ರೈತರು ಕಚೇರಿಗೆ ಅಲೆದಾಡದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

**ಕುಡಿಯುವ ನೀರಿಗೆ ಹಣದ ಕೊರತೆ ಇಲ್ಲ:** ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿದ್ದು, ಖಾಸಗಿ ಬಾವಿಗಳು, ಕೊಳವೆ ಬಾವಿ ಸೇರಿದಂತೆ ಪರ್ಯಾಯ ಜಲ ಮೂಲಗಳನ್ನು ಗುರುತಿಸಿ, ಟ್ಯಾಂಕರ್ ಮಾಲೀಕರೊಂದಿಗೆ ಮಾತನಾಡಿ, ನೀರಿನ ಲಭ್ಯತೆ ಖಚಿತಪಡಿಸಿಕೊಂಡು, ನೀರಿನ ಗುಣಮಟ್ಟ ಪರೀಕ್ಷೆ ಮಾಡಿ ಬಾವಿಗಳ ಮಾಲೀಕರೊಂದಿಗೆ ಒಡಂಬಡಿಕೆ ಮಾಡಿಕೊಂಡು ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಲು ತಿಳಿಸಿದರು. ಜಿಲ್ಲೆಯಲ್ಲಿ ರೈತರ ಹಿತಾಸಕ್ತಿ, ಕುಡಿಯುವ ನೀರಿನ ಲಭ್ಯತೆ ಹಾಗೂ ಗ್ರಾಮೀಣ ಅಭಿವೃದ್ಧಿ ಯೋಜನೆಗಳ ಸಮರ್ಪಕ ಅನುಷ್ಠಾನವನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸೂಚಿಸಿದ ಬೀದರ್ ಮತ್ತು ಗದಗ ಜಿಲ್ಲಾ ಪ್ರಕೃತಿ ವಿಕೋಪ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಮಳೆ ಕೊರತೆಯ ಸಂಕಷ್ಟದ ಸಮಯದಲ್ಲಿ ರೈತರ ಮತ್ತು ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಪರಿಣಾಮಕಾರಿ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ದಿಲೀಪ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಮತ್ತಿತರರು ಪಾಲ್ಗೊಂಡಿದ್ದರು.





# ಸುಸ್ಥಿರ ಅಭಿವೃದ್ಧಿ ಮತ್ತು ಜೀವ ಸುರಕ್ಷತೆಗೆ ಸೂಕ್ಷ್ಮಜೀವ ವಿಜ್ಞಾನ ಸಹಕಾರಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ




ದೇಶದ ಸುಸ್ಥಿರ ಅಭಿವೃದ್ಧಿ ಮತ್ತು ಮಾನವನ ಜೀವದ ಸುರಕ್ಷತೆ ಕಾಪಾಡಲು ಸೂಕ್ಷ್ಮಜೀವ ವಿಜ್ಞಾನ ಮತ್ತು ತಂತ್ರಜ್ಞಾನ ಸಾಧನಗಳು ಸಹಕಾರಿಯಾಗಿವೆ. ಭವಿಷ್ಯದ ನಾಳೆಗಾಗಿ ಆರೋಗ್ಯಕರ ಪ್ರಪಂಚವನ್ನು ರೂಪಿಸಲು ಕೃಷಿ, ಪರಿಸರ, ವೈದ್ಯಕೀಯ, ಕೈಗಾರಿಕೆ ಮತ್ತು ಔಷಧ ಕ್ಷೇತ್ರಗಳ ಸಂಶೋಧನೆಗಳು ಜೀವ ಸಂಕುಲಗಳ ರಕ್ಷಣೆಗೆ ನೆರವಾಗಲಿವೆ ಎಂದು ಆಂಧ್ರಪ್ರದೇಶದ ಶಾಸಕ ಹಾಗೂ ಸೂಕ್ಷ್ಮಜೀವಶಾಸ್ತ್ರ ವಿಭಾಗದ ಅಲುಮ್ನಿ ಗದ್ದೆ ರಾಮಮೋಹನ್ ಹೇಳಿದರು.

ಗುಲಬರ್ಗಾ ವಿಶ್ವವಿದ್ಯಾಲಯದ ಸೂಕ್ಷ್ಮ ಜೀವಶಾಸ್ತ್ರ ವಿಭಾಗ ಹಾಗೂ ಹಳೆಯ ವಿದ್ಯಾರ್ಥಿಗಳ ಸಂಘದ ಸಹಯೋಗದಲ್ಲಿ ಪ್ಯಾಶ್ಚರ್ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ ಸುವರ್ಣ ಮಹೋತ್ಸವ ವರ್ಷಾಚರಣೆ ಮತ್ತು 'ಸೂಕ್ಷ್ಮಜೀವಿಗಳ ವ್ಯಾಪ್ತಿ: ಉತ್ತಮ ನಾಳೆಗಾಗಿ ತಂತ್ರಜ್ಞಾನ' ಕುರಿತು ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿ ಕೋವಿಡ್ ನಂತಹ ವಿಷಮ ಸ್ಥಿತಿಯ ಸಂದರ್ಭಗಳಲ್ಲಿ ಜಾಗತಿಕ ಆರೋಗ್ಯ ರಕ್ಷಣೆ ಸೂಕ್ಷ್ಮಜೀವ ವಿಜ್ಞಾನ, ಆಧುನಿಕ ತಂತ್ರಜ್ಞಾನ, ಸೋಂಕು ನಿಯಂತ್ರಣ ಮತ್ತು ವೈದ್ಯಕೀಯ ಕ್ಷೇತ್ರಗಳಿಗೆ ಜೀವ ರಕ್ಷಣೆ ಒಂದು ಸವಾಲಾಗಿ ಪರಿಣಮಿಸಿತ್ತು. ಮುಂದಿನ ಪೀಳಿಗೆಯ ಭವಿಷ್ಯ ಮತ್ತು ಆರೋಗ್ಯಕ್ಕಾಗಿ ರೋಗಗಳ ಸೋಂಕಿನ ಅರಿವು, ರೋಗದ ಮುನ್ನೆಚ್ಚರಿಕೆ, ರೋಗ ನಿಯಂತ್ರಣ, ಅಗತ್ಯ ಲಸಿಕೆ, ಪ್ರತಿರೋಧಕ ಔಷಧಗಳು ಮತ್ತು ಚಿಕಿತ್ಸೆ ಸುಧಾರಣೆ ಬಗ್ಗೆ ಮುಂಜಾಗ್ರತೆ ವಹಿಸುವುದು ಅಷ್ಟೇ ಮುಖ್ಯ. ತಂತ್ರಜ್ಞಾನ ಬೆಳದಂತೆ ವೈದ್ಯ ವಿಜ್ಞಾನದ ಮುಂದೆ ಹಲವು ಸವಾಲುಗಳು ಎದುರಾಗುತ್ತಿವೆ. ಆದರಿಂದ ಸೂಕ್ಷ್ಮಜೀವಶಾಸ್ತ್ರ ಮತ್ತು ಮುಂದುವರಿದ ತಂತ್ರಜ್ಞಾನದಲ್ಲಿನ ಇತ್ತೀಚಿನ ಪ್ರವೃತ್ತಿ ಮತ್ತು ಪ್ರಯೋಗಗಳ ಬಗ್ಗೆ ವಿದ್ಯಾರ್ಥಿಗಳು ಆಸಕ್ತಿವಹಿಸಬೇಕು ಎಂದರು.

ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ ಮುಖ್ಯ ಅತಿಥಿಯಾಗಿ ಮಾತನಾಡಿ ಸುವರ್ಣ ಮಹೋತ್ಸವ ಮತ್ತು ಸಮ್ಮೇಳನ ಆಯೋಜನೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಸ್ನೇಹ ಮತ್ತು ಬಾಂಧವ್ಯ ಬೆಸೆಯುವ ಕಾರ್ಯಕ್ರಮ. ವಿಭಾಗ ಆರಂಭದಿಂದ ಪ್ರಾಧ್ಯಾಪಕರು ವಿದ್ಯಾರ್ಥಿಗಳನ್ನು ಬೋಧನೆ ಕಡೆಗೆ ಸೆಳೆದು ಉತ್ತಮ ಪ್ರತಿಭೆಗಳನ್ನಾಗಿ ರೂಪಿಸಿದ್ದಾರೆ. ವಿಭಾಗದ ಉನ್ನತ ಸಾಧನೆಯಿಂದ ಈ ಸಮ್ಮೇಳನ ಜರುಗುತ್ತಿದೆ. ಇದರ ಭಾಗವಾಗಿ ಸೂಕ್ಷ್ಮ ಜೀವ ಮತ್ತು ಮಾನವನ ಅಂಗಗಳ ಸುರಕ್ಷತೆ, ಔಸಧೋಪಚಾರ, ವೈರಸ್‌ಗಳ ನಿಯಂತ್ರಣ, ಕೃಷಿ ಮತ್ತು ಕೈಗಾರಿಕೆಗಳ ಪ್ರಗತಿಯಲ್ಲಿ ನೂತನ ತಂತ್ರಜ್ಞಾನ ಬಹು ಉಪಯೋಗಕರವಾಗಿದೆ. ದಿನದಿಂದ ದಿನಕ್ಕೆ ಜನರಲ್ಲಿ ಆರೋಗ್ಯ ಕಾಳಜಿ, ಉತ್ತಮ ಆಹಾರ ಸೇವನೆ ಮತ್ತು ಸಾವಯವ ಪದಾರ್ಥಗಳ ಬಳಕೆ ಬಗ್ಗೆ ಅರಿವು ಮೂಡುತ್ತಿದೆ. ಸೋಂಕುಗಳ ಬಗ್ಗೆ ಎಚ್ಚರಿಕೆ ಮತ್ತು ಆರಾಮದಾಯಕ ಜೀವನ ಕಂಡುಕೊಳ್ಳಲು ಸೂಕ್ಷ್ಮ ವಿಜ್ಞಾನದಲ್ಲಿನ ಆಧುನಿಕ ಶೋಧನೆಗಳಿಂದ ಸಾಧ್ಯವಾಗಿದೆ ಎಂದರು.

ಗುಲಬರ್ಗಾ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ದಯಾನಂದ ಅಗಸರ ಮಾತನಾಡಿ ಪ್ರಸ್ತುತ ದಿನಗಳಲ್ಲಿ ಮಾನವ ಜೀವರಕ್ಷಣೆ ಮತ್ತು ಭವಿಷ್ಯದ ನಾಳೆಗಾಗಿ ಆಲೋಚಿಸುವ ಅಗತ್ಯವಿದೆ. ಆಧುನಿಕತೆಯ ಜೀವನ ಶೈಲಿಯಿಂದ ಜೀವ ಸಂಕುಲವನ್ನು ಅನೇಕ ಅಪಾಯಕಾರಿ ಬ್ಯಾಕ್ಟೀರಿಯಾ ಮತ್ತು ವೈರಾಣುಗಳು ಜನಸಾಮಾನ್ಯರನ್ನು ಬಾದಿಸುತ್ತಿವೆ. ಅವುಗಳ ಉಪಕ್ರಮ ಮತ್ತು ಪರಿಹಾರಕ್ಕೆ ಒತ್ತು ನೀಡಬೇಕು. ಸೂಕ್ಷ್ಮ ಜೀವಶಾಸ್ತ್ರ ವಿಭಾಗದ ಏಳಿಗೆಗೆ ಶ್ರಮಿಸಿರುವ ಎಲ್ಲಾ ಪ್ರಾಧ್ಯಾಪಕರನ್ನು ನಾವಿಂದು ಸ್ಮರಿಸಿಕೊಳ್ಳಬೇಕು. ಅಲ್ಲದೆ, ರಾಜ್ಯ, ರಾಷ್ಟ್ರ ಮತ್ತು ಅಂತರ ರಾಷ್ಟ್ರೀಯ ಮಟ್ಟದಲ್ಲಿ ಸೂಕ್ಷ್ಮಜೀವ ಶಾಸ್ತ್ರಜ್ಞರ ಕೊಡುಗೆ ಕೂಡ ಅಪಾರವಾಗಿದೆ. ಅವರೆಲ್ಲರನ್ನೂ ನಾವಿಂದು ಅಭಿಮಾನದಿಂದ ನೆನಪಿಸಿಕೊಳ್ಳಬೇಕಿದೆ ಎಂದರು.

ವಿಭಾಗದ ಮುಖ್ಯಸ್ಥೆ ಹಾಗೂ ಸಂಯೋಜಕಿ ಪ್ರೊ. ಎಂ.ಬಿ. ಸುಲೋಚನಾ ಅಧ್ಯಕ್ಷತೆ ವಹಿಸಿ ಮಾತನಾಡಿ ವಿಭಾಗದ ಸುವರ್ಣ ಸಂಭ್ರಮ ಮತ್ತು ಸಮ್ಮೇಳನದಲ್ಲಿ ಭಾವಹಿಸುವ ಮೂಲಕ ವಿದ್ಯಾರ್ಥಿಗಳಲ್ಲಿ ಕಲಿಕೆ ಉತ್ಸಾಹ, ಸಂಶೋಧನೆಯಲ್ಲಿನ ಹೊಸ ಪರಿಕಲ್ಪನೆ, ನಾವೀನ್ಯ ಬೆಳವಣಿಗೆ ಮತ್ತು ಇತ್ತೀಚಿನ ತಂತ್ರಜ್ಞಾನದ ಅರಿವಿನ ಗ್ರಹಿಕೆ ಸಾಧ್ಯವಾಗಲಿದೆ. ಅದರ ಭಾಗವಾಗಿ ಸಮ್ಮೇಳನದಲ್ಲಿನ ವಿದ್ವಾಂಸರ ಉಪನ್ಯಾಸಗಳು ವಿದ್ಯಾರ್ಥಿಗಳು ಮತ್ತು ಕಿರಿಯ ಸಂಶೋಧಕರಿಗೆ ಉಪಯುಕ್ತವಾಗಲಿದೆ ಎಂದರು.

ಹಳೆಯ ವಿದ್ಯಾರ್ಥಿಗಳ ಸಂಘದ ಕಾರ್ಯದರ್ಶಿ ಪ್ರೊ. ಚಂದ್ರಕಾಂತ ಕೆಳಮನಿ ಅತಿಥಿ ಗಣ್ಯರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ ಸೂಕ್ಷ್ಮಜೀವಸಾಶ್ತ್ರ ವಿಭಾಗ ಐವತ್ತು ವರ್ಷಗಳಲ್ಲಿ ಶೈಕ್ಷಣಿಕ ಚಟುವಟಿಕೆ ಮತ್ತು ಸಂಶೋಧನೆಯಲ್ಲಿ ಹಲವು ಪ್ರಥಮಗಳನ್ನು ಸಾಧಿಸಿದೆ. ವಿಭಾಗದ ವಿದ್ಯಾರ್ಥಿಗಳು ದೇಶ ಮತ್ತು ವಿದೇಶಗಳ ಪ್ರಸಿದ್ಧ ಸಂಸ್ಥೆಗಳಲ್ಲಿ ಬೋಧಕರಾಗಿ, ಸಂಶೊಧಕರಾಗಿ, ಕೈಗಾರಿಕೋದ್ಯಮಿಗಳಾಗಿ, ಉದ್ಯಮಿಗಳಾಗಿ, ಔಷಧ ತಯಾರಿಕೆ ಕಂಪನಿಗಳಲ್ಲಿ ವಿಜ್ಞಾನಿಗಳಾಗಿ ಗುರುತಿಸಿಕೊಂಡಿದ್ದಾರೆ. ದಕ್ಷಿಣ ಭಾರತದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಒಂದಾಗಿರುವ ವಿಭಾಗ ಉತ್ಕೃಷ್ಟ ಸಂಶೊಧನೆ ಮತ್ತು ಶ್ರೇಷ್ಠ ಪ್ರಕಟಣೆಗಳನ್ನು ತಂದಿದೆ. ಸುವರ್ಣ ಸಂಭ್ರಮಾಚರಣೆಯಲ್ಲಿ ವಿಭಾಗದ ಪ್ರಾಧ್ಯಾಪಕರು, ವಿದ್ವಾಂಸರು, ಸಂಶೋಧಕರು ಹಾಗೂ ಹಳೆಯ ವಿದ್ಯಾರ್ಥಿಗಳು ಪಾಲ್ಗೊಂಡಿರುವುದು ಹೆಮ್ಮೆ ಎನಿಸಿದೆ ಎಂದು ವಿಭಾಗದ ಸಾಧನೆಯ ಮೈಲಿಗಲ್ಲುಗಳನ್ನು ವಿವರಿಸಿದರು.

ಧಾರವಾಡ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಸೂಕ್ಷ್ಮಜೀವಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕ ಡಾ. ವಿಜಯಕುಮಾರ್ ಸಾವಳಗಿ, ಶ್ರೀಮತಿ ಅನುರಾಧ ಗದ್ದೆ, ಕುಲಸಚಿವ ರಮೇಶ್ ಲಂಡನಕರ್, ಸಿಂಡಿ-ಕೇಟ್ ಸದಸ್ಯ ಪೀರಜಾದೆ ಫಹೀಮುದ್ದೀನ್, ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಕೆ. ಲಿಂಗಪ್ಪ ಗೌರವ ಅತಿಥಿಗಳಾಗಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸಮ್ಮೇಳನದ ಸ್ಮರಣ ಸಂಚಿಕೆಯನ್ನು ಅತಿಥಿ ಗಣ್ಯರು ಬಿಡುಗಡೆ ಮಾಡಿದರು, ಡಾ. ಯಶವಂತ ಮೆಂಜಿ, ಹಾಗೂ ಡಾ. ಮಹೇಶ್ ದಿವಟರ್ ಅತಿಥಿಗಳನ್ನು ಪರಿಚಯಿಸಿದರು.

ಕಾರ್ಯಕ್ರಮದಲ್ಲಿ ಸೂಕ್ಷ್ಮಜೀವಶಾಸ್ತ್ರ ಹಾಗೂ ಜೀವವಿಜ್ಞಾನ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಸಂಶೋಧನಾ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು, ಹಳೆಯ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿಗಳು ಭಾಗವಹಿಸಿದ್ದರು. ಸಂಗೀತ ವಿಭಾಗದ ಅತಿಥಿ ಉಪನ್ಯಾಸಕರು ರಾಷ್ಟ್ರೀಯಗೀತೆ ಮತ್ತು ನಾಡಗೀತೆ ಹಾಡಿದರು. ನರ್ಮದಾ ತಳ್ಳೊಳ್ಳಿ ವಂದಿಸಿದರು. ಹಜ್ಮಾ ಮತ್ತು ಹುಸ್ನಾ ಕಾರ್ಯಕ್ರಮ ನಿರ್ವಹಿಸಿದರು.



ಬಸವಕಲ್ಯಾಣ:- ತಾಲೂಕಿನ ಸುಕ್ಷೇತ್ರ ಹಾರಕೂಡ ಗ್ರಾಮದಲ್ಲಿ ಮೊಹರಂ ಹಬ್ಬದ ನಿಮಿತ್ಯ ಶ್ರೀ ಮಠಕ್ಕೆ ಆಗಮಿಸಿದ ಪೀರ ದೇವರನ್ನು ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಶಾಲು ಹೊದಿಸಿ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಲಾಲ್ ಅಹ್ಮದ ಬಾವಾ, ಗುಲಾಬಸಾಬ ಪಾಠಣ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)


# ಬಹುಜನ ಸಮಾಜ ಪಕ್ಷಕ್ಕೆ ಸೇರ್ಪಡೆ



• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ಇಲ್ಲಿನ ಬಹುಜನ ಸಮಾಜ ಪಾರ್ಟಿಯ ಪದಾಧಿಕಾರಿಗಳ ಸಭೆಯಲ್ಲಿ ತಾಲೂಕ ಅಧ್ಯಕ್ಷರಾದ ಶಂಕರ ಫುಲೆ ಯವರು ನೇತೃತ್ವದಲ್ಲಿ ಇಲ್ಲಿನ (ಕೆ.ಬಿ.ಐ.ಬಿ. ಯಲ್ಲಿ ಪಕ್ಷಕ್ಕೆ ಸೇರ್ಪಡೆ ಯಾದವರಿಗೆ ಸನ್ಮಾನಿಸಿ ಮಾತನಾಡಿ ಮಾನ್ಯವರ್ ಸಾಹಾಬ ಕಾನ್ಸಿರಾಮ ಜೀ ರವರ ಸಮಾಜದ ಏಳಿಗೆಗಾಗಿ ಮಾಡಿದ ತ್ಯಾಗ ಬಲಿದಾನ ದಿಂದ ಬಹುಜನ ಸಮಾಜ ಪಕ್ಷ ಕಟ್ಟಿ ದೇಶದ ಎಸ್ಸಿ ಎಸ್ಟಿ ಓಬಿಸಿ ಅಲ್ಪಸಂಖ್ಯಾತ ಅತಿ ಬಡ ಜನರು ಕುಡಾ ದೇಶ ಆಳಬೇಕು ಎಂಬ ಕನಸು ಇತ್ತು ಈ ವೇಳೆ . ಶೇಕ ಮುಜಫರ್. ಮೋಹಮದ ಇಸ್ಮೈಲ್ ಖಾನ್. ಅಮರ ಚನ್ನೋಳೆ ಕಿಟ್ಟಾ ಪಕ್ಷಕ್ಕೆ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ತಾಲೂಕಾ ಸಂಯೋಜಕರಾದ ದತ್ತು ಸುಂಟಾಣೆ. ಸಂಯೋಜಕರಾದ ಮಕ್ಬುಲ್ ಉಪಾಧ್ಯಕ್ಷರಾದ ರಮೇಶ್ ರಾಥೋಡ್. ಪ್ರಧಾನ ಕಾರ್ಯದರ್ಶಿಗಳಾದ ರವಿ ಉದಾತೆ. ಕಾರ್ಯದರ್ಶಿಗಳಾದ ಮಹಾದೇವ ಗಾಯಕವಾಡ. ಚಂದ್ರಕಾಂತ್ ಅಂಗಡಿ. ರಾಹುಲ. ದೀಲಿಪ ಶಿರೋಳೆ. ಮಾರುತಿ ಮೇಕಲೆ. ಪ್ರಶಾಂತ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ನನ್ನ ವಿರುದ್ಧ ಸುಳ್ಳು ಆಧಾರರಹಿತ ಆರೋಪ
# ಹೆಸ್ಕಾಂ ಇಇ ಸಿದ್ದರಾಮ ಬಿರಾದಾರ



• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಜೂ 24ರಂದು ಕರವೇ ಅಶೋಕ ಹಾರಿವಾಳ ಅವರು ಯಾವುದೇ ದಾಖಲೆ ಹಾಗೂ ಸಾಕ್ಷಾಧಾರಗಳಿಲ್ಲದೇ ನನ್ನ ವಿರುದ್ಧ ಸುಳ್ಳು ಆಧಾರ ರಹಿತ ಹಾಗೂ ಮಾನಹಾನಿಕರ ಆರೋಪಗಳನ್ನು ಪೇಸಬುಕ್ ಲೈವ್ ಮೂಲಕ ಮಾಡಿ ಪತ್ರ ಬಿಡುಗಡೆ ಮಾಡಿದ್ದಾರೆ ಎಂದು ಹೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರಾದ ಸಿದ್ಧರಾಮ ಬಿರಾದಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.ಹೆಸ್ಕಾಂ ನಿಯಮಗಳು, ಮಾರ್ಗಸೂಚಿಗಳು ಹಾಗೂ ಸರಕಾರದ ಆದೇಶಗಳಿಗೆ ಅನುಗುಣವಾಗಿ ಕರ್ತವ್ಯವನ್ನು ಪ್ರಾಮಾಣಿಕವಾಗಿ ಜವಾಬ್ಧಾರಿಯಿಂದ ನಿರ್ವಹಿಸುತ್ತಿದ್ದೇನೆ.

ಹಾನಿಗೊಳಗಾದ ವಿದ್ಯುತ್ ಪರಿವರ್ತಕಗಳನ್ನು ಆಧ್ಯತೆಯ ಮೇರೆಗೆ ಸಾಧ್ಯವಾದಷ್ಟು ಶೀಘ್ರವಾಗಿ ಬದಲಾಯಿಸಿ ರೈತರಿಗೆ ಹಾಗೂ ಸಾರ್ವಜನಿಕರಿಗೆ ನಿರಂತರ ವಿದ್ಯುತ್ ಪೊರೈಕೆ ಒದಗಿಸಲು ಶ್ರಮಿಸುತ್ತಿರುವೆ.ಸದರಿ ಪತ್ರದಲ್ಲಿನ ಆರೋಪಗಳು ವಾಸ್ತವಕ್ಕೆ ದೂರವಾಗಿದ್ದು. ನನ್ನ ವೈಯಕ್ತಿಕ ಗೌರವಕ್ಕೆ ಧಕ್ಕೆ ಉಂಟು ಮಾಡುವ ಹಾಗೂ ಸರ್ಕಾರಿ ಆಧಿಕಾರಿಯಾಗಿ ನನ್ನ ಪ್ರತಿಷ್ಟತೆಯನ್ನು ಕುಗ್ಗಿಸುವ ಉದ್ದೇಶದಿಂದ ಮಾಡಲ್ಪಟ್ಟಿವೆ.

ಅವರು ಬಿಡುಗಡೆ ಮಾಡಿರುವ ಪತ್ರದ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಬೇಕು.ಆರೋಪಗಳು ಸತ್ಯಾಸತ್ಯತೆಯನ್ನು ಪರಿಶೀಲಿಸಬೇಕು,.

ಈ ಕುರಿತಾಗಿ ನನಗೆ ಹಾಗೂ ಹೆಸ್ಕಾಂ ಇಲಾಖೆಗೆ ಉಂಟಾಗಿರುವ ಮಾನಹಾನಿ ಮತ್ತು ಪ್ರತಿಷ್ಠಾಹಾನಿಯನ್ನು ಪರಿಗಣಿಸಿ ಕಾನೂನುಬದ್ಧವಾಗಿ ನ್ಯಾಯ ಒದಗಿಸಬೇಕೆಂದು ದೂರು ದಾಖಲಿಸುವೆ ಎಂದರು.

ಕಳೆದ ಮಾರ್ಚದಿಂದ ಜೂನ್ 25ರವರೆಗೆ 1500 ವಿದ್ಯುತ್ ಪರಿವರ್ತಕಗಳು ಗಾಳಿ, ಸಿಡಿಲು, ಮಳೆ ಹಾಗೂ ಮಳೆ ಇಲ್ಲದ ಪರಸ್ಥಿತಿಯಲ್ಲಿ ಅತೀ ಹೆಚ್ಚು ಟಿಸಿಗಳು ಈ ಬಾರಿ ವಿಫಲವಾಗಿವೆ. ನಿತ್ಯ 30ರಿಂದ 40 ಟಿಸಿಗಳು ವಿಫಲವಾಗುತ್ತಿವೆ.48ರಿಂದ 72 ಗಂಟೆ ಒಳಗಡೆ ಪೊರೈಸಲು ಸಾಧ್ಯವಾಗುತ್ತಿಲ್ಲ. ಈಗಾಗಲೇ 182 ಬಫಲ್ ಸ್ಟಾಕನಲ್ಲಿ ಟಿಸಿಗಳು ಇದ್ದು. ಅಭಾವವಿದ್ದಾಗ ಮಾತ್ರ ಪೊರೈಸಲಾಗುವುದು. ಇನ್ನೂ 120 ಟಿಸಿಗಳನ್ನು 4-5 ದಿನಗಳಲ್ಲಿ ಪೊರೈಸುವೆ. ನಿಗದಿತ ಅವಧಿಯಲ್ಲಿ ಪೊರೈಸುವುದು ಆಗುತ್ತಿಲ್ಲ. 10-15 ದಿನಗಳಲ್ಲಿ ಪಾಳೆ ಪ್ರಕಾರ ಟಿಸಿ ವಿತರಿಸುವೆ. ಟಿಸಿ ರಿಪೇರಿಗೆ 3ರಿಂದ 4 ದಿನಗಳು ಬೇಕು. ಎಂದರು.

# ಬಸವಜನ್ಮಭೂಮಿಯಲ್ಲಿ ಶೀಘ್ರದಲ್ಲಿಯೇ ಗುರುಭವನಕ್ಕೆ ಭೂಮಿಪೂಜೆ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ



ಪಟ್ಟಣದಲ್ಲಿ ಗುರು ಭವನ ನಿರ್ಮಿಸುವಂತೆ ಶಾಸಕ ಶಿವಾನಂದ ಎಸ್ ಪಾಟೀಲ ಅವರನ್ನು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾ ಘಟಕದ ಪದಾಧಿಕಾರಿಗಳು ಹಾಗೂ ಶಿಕ್ಷಕರು ಶುಕ್ರವಾರ ಶಾಸಕರ ನಿವಾಸಕ್ಕೆ ತೆರಳಿ ಗುರುಭವನ ನಿರ್ಮಾಣ ಹಾಗೂ ಶಿಕ್ಷಕರ ಸಮಸ್ಯೆಗಳ ಕುರಿತು ಚರ್ಚಿಸಿ, ನಂತರ ಶಿಕ್ಷಕರ ಬೇಡಿಕೆಗಳ ಕುರಿತಾಗಿ ಮನವಿ ಸಲ್ಲಿಸಲಾಯಿತು.

ಶಾಸಕರು ಸಂಘದ ಮನವಿ ಸ್ವೀಕರಿಸಿ ಕೆಲವೇ ದಿನಗಳಲ್ಲಿ ಗುರು ಭವನ ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸುವುದಾಗಿ ಭರವಸೆ ನೀಡಿದರು. ನೂತನವಾಗಿ ಆಯ್ಕೆಯಾದ ಸಂಘದ ಪದಾಧಿಕಾರಿಗಳು ಶಾಸಕರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಆದರ್ಶ ಶಿಕ್ಷಕರ ವೇದಿಕೆ ಜಿಲ್ಲಾಧ್ಯಕ್ಷ ಉಮೇಶ ಕೌಲಗಿ, ಸಂಘದ ಅಧ್ಯಕ್ಷರಾದ ಎಚ್.ಬಿ ಬಾರಿಕಾಯಿ, ಪ್ರ ಕಾರ್ಯದರ್ಶಿ ಎಚ್ ಎಚ್ ಕುರಣದ, ಕೋಶಾಧ್ಯಕ್ಷ ಸಿಜಿ ಹೂಗಾರ, ನಿರ್ದೇಶಕರಾದ ಭೀಮರಾಯ ವ್ಹಿ ಚಕ್ರಮನಿ,ಎಸ್.ಬಿ ಮಾದರ, ಶಿಕ್ಷಕರಾದ ಎಸ್.ಬಿ ಮುತ್ತಗಿ, ಹೊನ್ನಪ್ಪ ಗೋಳಸಂಗಿ, ಎಂಬಿ ಜೋಗಿ, ಎಂ.ವಿ ಗಬ್ಬೂರ, ಎಸ್.ಎಂ ದಳವಾಯಿ, ಎಸ್ ಎಸ್ ಬಾಗೇವಾಡಿ, ಸೋಸೈಟಿ ನಿರ್ದೇಶಕರಾದ ಶಿವು ಮಡಿಕೇಶ್ವರ, ಬಿಬಿ ಚಿಂಚೊಳ್ಳಿ, ಜಗದೀಶ ಚಿಕ್ಕಮಠ, ಎಸ್ ಎನ್ ಬಿರಾದಾರ ಅಮರೇಶ ಚಿಮ್ಮಲಗಿ, ಎಂ ಎಸ್ ಅವಟಿ, ಇಸಾಕ್ ನಾಯ್ಕೋಡಿ, ರಿಯಾಜ ಹತ್ತರಕಿಹಾಳ, ಎಸ್.ವಿ ಗೋಕಾವಿ, ಪಿ.ಎಸ್ ಬಾಗೇವಾಡಿ, ಇಸಾಕ್ ಅಜ್ಮಿ, ಎಂಎಂ ರಾಜನಾಳ ಸೇರಿದಂತೆ ಅನೇಕ ಗುರುವೃಂದದವರು ಹಾಜರಿದ್ದರು.

# ನಾಮಧಾರಿ ಸಮಾಜದ ಪ್ರತಿಭೆಗಳಿಗೆ ಪ್ರೋತ್ಸಾಹದ ಅಗತ್ಯ : ನಾಯ್ಕ



• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ನಾಮಧಾರಿ ಸಮಾಜದಲ್ಲಿ ಸಾಕಷ್ಟು ಪ್ರತಿಭಾನ್ವಿತರಿದ್ದು, ಅವರಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಕೈಜೋಡಿಸಬೇಕಾಗಿದೆ. ಪ್ರತಿಯೊಂದು ಸಮಾಜದಲ್ಲಿ ಬಡವರು ಶ್ರೀಮಂತರು ಇರುತ್ತಾರೆ. ಆದರೆ ಕಲಿಕೆಗೆ ಬಡತನ ಅಡ್ಡಿಯಾಗದಂತೆ ಪಾಲಕರು ಕೂಡ ಕಾಳಜಿ ವಹಿಸಬೇಕು. ಹಾಗೇ ಸುಸಂಸ್ಕೃತರಾಗಿ ಸಮಾಜದ ಮುಖ್ಯವಾಹಿನಿಯಲ್ಲಿ ಗುರುತಿಸಿಕೊಳ್ಳುವಂತಾಗಬೇಕು ಎಂದು ಶ್ರೀ ವನದುರ್ಗಾ ದೇವಿ ದೇವಸ್ಥಾನದ ಧರ್ಮದರ್ಶಿ ಎಚ್.ಆರ್.ನಾಯ್ಕ ಹೇಳಿದರು.

ನಾಮಧಾರಿ ಪ್ರತಿಷ್ಠಾನ ಕುಮಟಾ ಇವರು ಕೋನಳ್ಳಿಯಲ್ಲಿ ಹಮ್ಮಿಕೊಂಡ 2 ನೇ ವಾರ್ಷಿಕ ಸಂಚಿಕೆ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜವನ್ನು ಕಟ್ಟಲು ಸಾಕಷ್ಟು ಕೈಗಳು ಬೇಕಾಗುತ್ತವೆ. ಪ್ರತಿಯೊಬ್ಬರು ಸಮಾಜದ ಬಗ್ಗೆ ಕಳಕಳಿ ಹೊಂದಿರಬೇಕು ಎಂದರು.

ಹೈಕೋರ್ಟ್ ಹಿರಿಯ ವಕೀಲರಾದ ನಾಗೇಂದ್ರ ನಾಯ್ಕ ಮಾತನಾಡಿ, ನಮ್ಮ ಸಮಾಜದ ವತಿಯಿಂದ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸುವ ಅಗತ್ಯವಿದೆ. ಇದಕ್ಕೆ ಕುಮಟಾ ಕೇಂದ್ರಸ್ಥಾನವಾಗಿದ್ದು, ಪ್ರತಿ ತಾಲೂಕಿನಿಂದಲೂ ಒಂದಿಷ್ಟು ಜನರನ್ನು ಆಯ್ಕೆ ಮಾಡಿಕೊಂಡು ಮುಂದುವರೆದರೆ ಯಶಸ್ಸು ಖಂಡಿತ ಸಾಧ್ಯವಿದೆ. ಇದರ ನೇತೃತ್ವವನ್ನು ಸೂರಜ ನಾಯ್ಕ ಸೋನಿ ಅವರು ಊಹಿಸಿಕೊಳ್ಳಬೇಕು ಎಂದರು.


ಸಾಮಾಜಿಕಧುರೀಣ ಎಂ.ಎಲ್.ನಾಯ್ಕ ಮಾತನಾಡಿ, ಕೋನಳ್ಳಿಯಂತಹ ಹಳ್ಳಿಯಲ್ಲಿಯೂ ಕೂಡ ಭವ್ಯವಾದ ಸಭಾಭವನ ನಿರ್ಮಿಸುವುದರ ಜತೆಗೆ ಇಂತಹ ಮಹತ್ವದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಅವಕಾಶ ನೀಡುವುದು ಇತರರಿಗೂ ಸ್ಫೂರ್ತಿದಾಯಕವಾಗಲಿದೆ. ಹಾಗೇ ಶಿಕ್ಷಣ ಸಂಸ್ಥೆ ಸ್ಥಾಪಿಸುವುದಾದರೆ ಅದಕ್ಕೆ ಎಲ್ಲ ಸಹಕಾರವಿದೆ ಎಂದರು.

ಸಾಮಾಜಿಕ ಧುರೀಣ ಸೂರಜ ನಾಯ್ಕ ಸೋನಿ ಮಾತನಾಡಿ, ಪ್ರತಿಯೊಬ್ಬರು ಸಮಾಜದ ಬಗ್ಗೆ ಕಳಕಳಿಯಿದ್ದರೆ ಎಲ್ಲವನ್ನು ಸಾಧಿಸಬಹುದು. ಹಾಗೇ ಇತರೆ ಸಮಾಜವನ್ನು ಕೂಡ ಅಷ್ಟೇ ಪ್ರೀತಿಯಿಂದ ಕಾಣಬೇಕು ಎಂದರು. ನಿವೃತ್ತ ಪ್ರಾಚಾರ್ಯ ರಾಜೀವ ನಾಯ್ಕ, ಪ್ರೆಸಿಡೆಂಟ್ ವಿಜಯಾ ಟ್ರಸ್ಟ್ ದೀಪಾ ನಾಯ್ಕ ಇತರರು ಮಾತನಾಡಿದರು. ನಿವೃತ್ತ ನ್ಯಾಯಮೂರ್ತಿ ರವಿ ನಾಯ್ಕ ಅಧ್ಯಕ್ಷತೆ ವಹಿಸಿದ್ದರು.

ಸನ್ಮಾನ : ಎಸ್‌ಎಸ್‌ಎಲ್‌ಸಿಯಲ್ಲಿ ರಾಜ್ಯಕ್ಕೆ ದ್ವಿತೀಯ ಸ್ಥಾನ ಪಡೆದ ದಿಶಾಂತ ದಯಾನಂದ ನಾಯ್ಕ, ಎಚ್.ಆರ್.ನಾಯ್ಕ, ಎಂ.ಎಲ್.ನಾಯ್ಕ, ಪಿ.ಆರ್.ನಾಯ್ಕ, ಗೌರಿ ನಾಗಪ್ಪನಾಯ್ಕ, ಗಜಾನನ ಎಸ್. ನಾಯ್ಕ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಬಿಂದು ನಾಯ್ಕ ಸಂಗಡಿಗರು ಪ್ರಾರ್ಥಿಸಿದರು. ನಾಮಧಾರಿ ಪ್ರತಿಷ್ಠಾನದ ಅಧ್ಯಕ್ಷ ರಾಮಚಂದ್ರ ನಾಯ್ಕ ಸ್ವಾಗತಿಸಿದರು. ಮಂಜುನಾಥ ನಾಯ್ಕ ನಿರೂಪಿಸಿದರು. ಪ್ರಮೋದ ನಾಯ್ಕ ವಂದಿಸಿದರು.

# ಕಮಲನಗರ ವಲಯದಲ್ಲಿ ಮಧ್ಯವರ್ಜನ ಶಿಬಿರದ ಪೂರ್ವಭಾವಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಪಟ್ಟಣದ ನಗೋಬಾ ದೇವಾಲಯದಲ್ಲಿ ಕಮಲನಗರ ವಲಯದಲ್ಲಿ ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಜನಜಾಗೃತಿ ವೇದಿಕೆ ಆಶ್ರಯದಲ್ಲಿ ಹಮ್ಮಿಕೊಳ್ಳಲಿರುವ ಮದ್ಯವರ್ಜನ ಶಿಬಿರದ ಪೂರ್ವಭಾವಿ ಸಭೆಗೆ ದೀಪ ಬೆಳಗಿಸುವ ಮೂಲಕ ಅಧಿಕೃತ ಚಾಲನೆ ನೀಡಲಾಯಿತು.


ಈ ವೇಳೆ ಮಾತನಾಡಿದ ಜಿಲ್ಲಾ ನಿರ್ದೇಶಕರಾದ ಮುರಳಿಧರ್ ಹೆಚ್. ಎಲ್. ಅವರು, "ಪ್ರತಿಯೊಬ್ಬರೂ ಸ್ವಾವಲಂಬಿ ಜೀವನ ನಡೆಸಲು ಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಕೊಡುಗೆ ಅಪಾರವಾಗಿದೆ. ಮದ್ಯವರ್ಜನ ಶಿಬಿರಗಳ ಮೂಲಕ ಮನೆ ಮನ ಬೆಳಗುವ ಕಾರ್ಯವನ್ನು ಅವರು ನಿರಂತರವಾಗಿ ಮಾಡುತ್ತಿದ್ದಾರೆ" ಎಂದು ತಿಳಿಸಿದರು.

ನೂತನ ಸಮಿತಿ ರಚನೆ: ಜನಜಾಗೃತಿ ವೇದಿಕೆಯ ಯೋಜನಾಧಿಕಾರಿ ರಾಜೇಶ್ ಅವರ ನೇತೃತ್ವದಲ್ಲಿ ಶಿಬಿರದ ಯಶಸ್ಸಿಗಾಗಿ ನೂತನ ಸಮಿತಿಯನ್ನು ರಚಿಸಲಾಯಿತು. ಸಮಿತಿಯ ನೂತನ ಅಧ್ಯಕ್ಷರಾಗಿ ಸುರೇಶ್ ಸೊಲ್ಲಾಪುರ ಹಾಗೂ ಕೋಶಾಧಿಕಾರಿಯಾಗಿ ಶಿವಕುಮಾರ ಜುಲ್ಫೇ ಅವರು ಸರ್ವಾನುಮತದಿಂದ ಆಯ್ಕೆಯಾದರು.

ಈ ಸಂದರ್ಭದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರಾದ ಮಡಿವಾಳಪ್ಪ ಮೂರ್ಕೆ, ಹಿರಿಯ ಪತ್ರಕರ್ತರಾದ ಎಸ್. ಎಸ್. ಮೈನಾಳ್, ಮಹಾದೇವ ಬಿರಾದಾರ, ದೇವೇಂದ್ರ ಪಾಟೀಲ, ವಿವಿಧ ಕಾರ್ಯಕ್ಷೇತ್ರದ ಒಕ್ಕೂಟ-ದ ಅಧ್ಯಕ್ಷರುಗಳು, ವಲಯ ಮೇಲ್ವಿಚಾರಕರಾದ ಶರಣು, ಜ್ಞಾನವಿಕಾಸ ಸಮನ್ವಯಾಧಿಕಾರಿ ಸಂಗೀತ, ಹಾಗೂ ಸೇವಾ ಪ್ರತಿನಿಧಿಗಳಾದ ಕವಿತಾ, ಸುನಿತಾ, ಕಾಂಚನ, ಶಿವಲೀಲಾ, ಲಕ್ಷ್ಮೀಬಾಯಿ, ಶಿವಾನಂದ, ಆಶಾ, ಅಂಬಿಕಾ ಮತ್ತು ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಡಾ. ಫ.ಗು ಹಳಕಟ್ಟಿ-ಲಿಂಗಾನಂದ ಸ್ವಾಮೀಜಿಯವರ ಸ್ಮರಣೋತ್ಸವ ಹಾಗೂ ಬಸವ ತತ್ವ ಸಮ್ಮೇಳನ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ



ವಚನ ಪಿತಾಮಹ ಡಾ. ಫ.ಗು ಹಳಕಟ್ಟಿಯವರ ಸ್ಮರಣೊತ್ಸವ ಹಾಗೂ ಬಸವ ತತ್ವಸಮ್ಮೇಳನವನ್ನು ತಾಲೂಕಿನ ಮನಗೂಳಿಯ ವಿರಕ್ತಮಠದಲ್ಲಿ ಜೂ 29 ಹಾಗೂ 30ರಂದು ಆಯೋಜಿಸಲಾಗಿದೆ ಎಂದು ವಿರಕ್ತಮಠದ ವಿರತೀಶಾನಂದ ಸ್ವಾಮೀಜಿ ತಿಳಿಸಿದ್ದಾರೆ.ಜೂ 29ರಂದು ಸೋಮವಾರ ಸಂಜೆ ಡಾ.ಫ.ಗು ಹಳಕಟ್ಟಿಯವರ ಸ್ಮರಣೋತ್ಸವವ ಹಾಗೂ ಉದ್ಘಾಟನೆ, ಷಟಸ್ಥಲ ಧ್ವಜಾರೋಹಣ, ಭಾವಚಿತ್ರಗಳಿಗೆ ಪುಷ್ಪವೃಷ್ಟಿ ,ಪ್ರಾರ್ಥನೆ ಹಾಗೂ ಶಿವಾನುಭವ ಗೋಷ್ಠಿ ಜರುಗುವುದು.

ಜೂ. 30ರಂದು ಮಂಗಳವಾರ ಬೆಳಿಗ್ಗೆ ಶ್ರೀ ಲಿಂಗಾನಂದ ಸ್ವಾಮೀಜಿಯವರ ಸ್ಮರಣೋತ್ಸವ ಹಾಗೂ ಬಸವತತ್ವ ಸಮ್ಮೇಳನ ಸಾಮೂಹಿಕ ಇಷ್ಟಲಿಂಗ ಪೂಜೆ, ಪ್ರಾರ್ಥನೆ, ಕೃತಿ ಬಿಡುಗಡೆ, ಸಾಮೂಹಿಕ ವಚನ ಪಠಣ, ಶಿವಾನುಭವ ಗೋಷ್ಠಿ ಜರುಗಲಿದೆ ಎಂದು ಅವರು ತಿಳಿಸಿದ್ದಾರೆ.

# ಎಸ್ ಪಿ ಬಾಲದಂಡಿ ನೇತೃತ್ವದಲ್ಲಿ ಜನಸಂಪರ್ಕ ಸಭೆ



• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ನಗರದ ಅಂಬೇಡ್ಕರ್ ಭವನದಲ್ಲಿ ಎಸ್.ಪಿ ಯವರ ಅದ್ಯಕ್ಷತೆಯಲ್ಲಿ ನಡೆದ ಎಸ್.ಪಿ ಮಲ್ಲಿಕಾರ್ಜುನ್ ಬಾಲದಂಡಿ ಸಂಪರ್ಕ ಸಭೆಯ ನಡೆಯಿತು

ಕ್ರೀಸ್ಚಿಯನ್ ಸಮುದಾಯದ ಯುವ ಮುಖಂಡ ಡೆವಿಡ್ ಮಾತನಾಡಿ ಗ್ರಾಮೀಣ ಬಾಗದಲ್ಲಿ ಮನೆ ಮನೆ ಯಲ್ಲಿ ಮದ್ಯ ಮಾರಾಟವಾಗುತ್ತಿದ್ದು ರೈತಾಪಿ ಜನರು ಬೆಳಿಗ್ಗೆನೆ ಕುಡಿದು ತಮ್ಮ ನಿತ್ಯ ಕರ್ತವ್ಯಗಳನ್ನು ಮರೆಯುತ್ತಿದ್ದಾರೆ ಈ ರೀತಿ ಮನೆ ಮನೆ ಮದ್ಯ ಮಾಟಕ್ಕೆ ಅಬಕಾರಿ ಇಲಾಖೆಯೆ ಕಾರಣವಾಗಿದ್ದು ಬಾರ್ ನವರು ನಮ್ಮಲಿರುವ ಮದ್ಯವನ್ನು ಹಳಿಗಳ ಮನೆ ಮನೆಗೆ ತಲುಪಿಸಿ ತಮ್ಮ ಮಾರಾಟವನ್ನು ಹೆಚ್ಚಿಸಿಕೊಳ್ಳುತ್ತಿದ್ದಾರೆ ಇದಕ್ಕೆ ಅಬಕಾರಿ ಅಧಿಕಾರಿಗಳೆ ಕಾರಣರಾಗಿದ್ದು ಜನರ ಬದುಕು ಬಿದಿಪಾಲಾಗುತ್ತಿದೆ ಇಧ್ಧಕ್ಕೆ ತಾವು ಕಡಿವಾನ ಹಾಕಬೆಕು ಎಂದು ತಿಳಿಸಿದರು.

ಬಲೆನಹಳ್ಳಿ ಕೆಂಪರಾಜು ಮಾತನಾಡಿ ನಗರ ವ್ಯಾಪ್ತಿಯಲ್ಲಿ ಅಪ್ರಾಪ್ತರ ವಾಹನ ಚಾಲನೆ ಹೆಚ್ಚಾಗಿದ್ದು ಅಪಘಾತಗಳು ಹೆಚ್ಚುತ್ತಿವೆ ಹಾಗೂ ಶಾಲಾ ಕಾಲೆಜುಗಳ ಬಳಿ ಪುಂಡ ಯುವಕರ ಬೈಕ್ ವಿಲ್ಹೀಂಗ್ ಹೆಚ್ಚಾಗಿದ್ದು ಕಾಲೆಜು ಬೀಡುವ ಸಮಯದಲ್ಲಿ ಪೋಲಿಸರು ಗಮನ ಹರಿಸಿದರೆಈ ಪುಂಡರನ್ನು ಹಿಡಿದು ಬುದ್ದಿ ಕಲಿಸಿದರೆ ಹೇಣ್ಣು ಮಕ್ಕಳಿಗೆ ಅಗುತ್ತಿರುವ ಕಿರಿ ಕಿರಿ ತಪು ??ತ್ತದೆ ಎಂದರು.

ಎಲ್ಲಾ ಪೋಲಿಸ್ ಠಾಣೆಗಳಲ್ಲಿ ಬಹುತೇಕ ಎಸ್.ಸಿ ಎಸ್.ಟಿ ಸಮುದಾಯದವರ ಮೇಲೆ ಪೋಸ್ಕೋ ಪ್ರಕರಣಗಳು ದಾಖಲಾಗುತ್ತಿವೆ ಬೇರೆ ಸಮದಾಯದವರಲ್ಲಿ ಅಗುತ್ತಿಲವೇ ಥಾಣೆಯಲ್ಲಿಯು ಏಕೆ ತಾರತಮ್ಯ ನಡೆಯುತ್ತಿದೆ ಬೇರೆ ಸಮುದಾಯದವರನ್ನು ಭವಿಷ್ಯದ ದೃಷ್ಠಿಯಿಂದ ರಾಜಿ ಮಾಡಿ ಕಳುಹಿಸುವ ಪೋಲಿಸರು ಎಸ್.ಸಿ ಎಸ್.ಟಿ ಸಮುದಾಯದವರ ಭವಿಷ್ಯದ ದೃಷ್ಠಿಯಿಂದ ರಾಜಿ ಮಾಡಿ ಕಳುಹಿಸುವ ಕೆಲಸ ಯಾಕೆ ಮಾಡುತ್ತಿಲ್ಲ ಇಕ್ಕಿಯು ಎಕೆ ತಾರತಮ್ಯ ಇದನ್ನು ಸರಿಪಡಿಸಿ ಎಂದು

ಅದಿ ಜಾಂಬವ ಸಮುದಾಯದ ಮುಖಂಡ ಡಿ.ಕುಮಾರು ಎಸ್.ಪಿ ಯವರಿಗೆ ಮನವಿ ಮಾಡಿದರು.

ಗಿರಿಜನ ಅಭಿವೃದ್ದಿ ಸಂಸ್ಥೆಯ ಮುಖ್ಯಾಸ್ಥೆ ಮಹದೇವಮ್ಮ ಮಾತನಾಡಿ ತೆಕ್ಕಲಹಾಡಿ ಗ್ರಾಮದಲ್ಲಿ ನಮ್ಮ ಜಮೀನಿನ ವಿಚಾರವಾಗಿ ಸವರ್ಣಿಯರು ಗಲಾತೆ ಮಾಡಿ ನನ್ನ ಮತ್ತು ನನ್ನ ಮಗಳ ಮೇಲೆ ದೌರ್ಜನ್ಯ ವೆಸಗಿದ್ದು ಈ ಬಗ್ಗೆ ಪೋಲಿಸ್ ಠ್ಣಾಣೆಯಲ್ಲಿ ಪ್ರಕರಣ ದಾಖಲಾಗಿ ಅನೆಕ ವರ್ಷಗಳೆ ಅದರೂ ಯಾವುದೆ ಕ್ರ ಅಗಿಲ್ಲ ಹಾಗೂ ನಮ್ಮ ಮೆಲೆ ನಿರಂತರವಾಗಿ ದೌರ್ಜನ್ಯಗಳು ನಡೆಯುತ್ತಿದ್ದರು ಪೋಲಿಸರು ನಿರ್ಲಕ್ಷ ?? ವಹಿಸಿ ಅಸಹಾಯಕರಾದ ನಮಗೆ ರಕ್ಷಣೆ ನಿಡದೆ ಸವರ್ಣಿಯರ ಪರವಾಗಿ ನಿಲ್ಲುತ್ತಿದ್ದಾರೆ ಎಂದು ತಮ್ಮ ನೋವನ್ನು ತೋಡಿಕೊಂಡರು

ಅಲ್ಲದೆ ಮಹದೇವಪುರ ಹಾಡಿಯಲ್ಲಿನ ಗಿರಿಜನ ಮಕ್ಕಳಿಗೆ ಶಾಲೆಗೆ ಹೋಗಲು ಇಷ್ಟವಿದ್ದರು ಶಾಲೆ ತುಂಬಾದುರವಿರುವುದರಿಂದ ಮಕ್ಕಳು ಶಾಲೆಗೆ ಹೋಗದೆ ಅನ್ಯ ಮಾರ್ಗಗಳನ್ನು ಹಿಡಿಯುತ್ತಿದ್ದಾರೆ ಮಕ್ಕಳ ವಿದ್ಯಾನ್ಯಾಸಕ್ಕಾಗಿ ಮಹದೇವಪುರದಲ್ಲಿ ಒಂದು ಶಾಲೆಯನ್ನು ತೆರೆಯಬೇಕೆಂದು

ತಾವು ಶಿಕ್ಷಣ ಇಲಾಖೆಗೆ ಸೂಚಿಸಬೆಕೆಂದು ಕೇಳಿಕೊಳ್ಳುತ್ತೇನೆ ಎಂದರು.

ಇದೆ ರೀತಿ ಅನೇಕ ಜನರು ತಮ್ಮ ತಮ್ಮ ಸಮಸ್ಯೆಗಳನ್ನು ಸಭೆಯಲ್ಲಿ ತಿಳಿಸಿದರು ಎಲ್ಲ ಸಮಸ್ಯೆಗಲನ್ನು ಹಾಲಿಸಿದ ಮಾತನಾಡಿ ನಿಮ್ಮೆಲ್ಲರ ಸಮಸ್ಯೆಗಳನ್ನು ಕೆಳಿದ್ದೇನೆ ಈ ಬಗ್ಗೆ ನಮ್ಮ ಇಲಾಖಾ ಅಧಿಕಾರಿಗಲಿಗೆ ಹಾಗೂ ಸಂಬಂದ ಪಟ್ಟ ಇಲಾಖ ಅಧಿಕಾರಿಗಳಿಗೆ ಸೂಚಿಸಿ ಸಮಸ್ಯೆಗಲನ್ನು ಪರಿಹರಿಸಲು ತಿಳಿಸುತ್ತೇನೆ ಎಂದರು

ಸಭೆಯಲ್ಲಿ ಡಿವೈಎಸ್ಪಿ ರವಿ, ಬಿಳಿಕೆರೆ ಠಾಣಾ ಪುನೀತ್, ಗ್ರಾಮಾಂತರ ಠಾಣಾ ಸಂತೋಷ ಕಶ್ಯಪ್, ನಗರ ಠಾಣ ಶಿವಮಾದಯ್ಯ, ದಲಿತ ಮುಖಂಡ ನಿಂಗರಾಜ್ ಮಲ್ಲಾಡಿ ತಾಲೂಕು ಸಂಚಾಲಕಾ ಕೊಳಗಟ್ಟಕೃಷ್ಣಮಹಿಳಾ ಸಂಚಾಲಕಿ ಮಹದೇವಮ್ಮ ಹಾಗೂ ಇನ್ನಿತರ ಹಾಜರಿದ್ದರು

# ಆಡೂರ ಗ್ರಾಮದಲ್ಲಿ ಭಾವೈಕ್ಯತೆಯ ಮೊಹರಂ

• **ಮಲ್ಲಮ್ಮ ನುಡಿ ವಾರ್ತೆ ಕುಕನೂರ**



ತಾಲೂಕಿನ ಆಡೂರ ಗ್ರಾಮದಲ್ಲಿ ಮೋರಂ ಹಬ್ಬ ಅದ್ದೂರಿಯಾಗಿ ನೆಡೆಯುತ್ತದೆ.

ಯಾವುದೇ ಜಗಳ ತೊಂದರೆ ಇಲ್ಲದೆ ಪ್ರತಿ ವರ್ಷ ಭಾವೈಕ್ಯವಾಗಿ ಮೊಹರಂ ಹಬ್ಬ ಆಚರಿಸಲು ಸಾಕ್ಷಿಯಾದ ಆಡೂರ ಗ್ರಾಮವಾಗಿದೆ

ಹಜರತ್ ಇಮಾಮ್ ಹುಸೇನ್ ಅವರ ತ್ಯಾಗ ಮತ್ತು ಬಲಿದಾನದ ನೆನಪಿಗಾಗಿ ಆಚರಿಸಲಾಗುವ ಈ ಹಬ್ಬದಲ್ಲಿ ಹಿಂದೂ ಮುಸ್ಲಿಮರ ಜೊತೆ-ಗೂಡಿ ಅಲಾಯಿ ಹಬ್ಬದ 9 ದಿನಗಳ ಕಾಲ 'ಅಲಾಯಿ ಕುಣಿತ', ಡೋರು ಬಾರಿಸುವುದು ಹೆಜ್ಜೆ ಹಾಕುವದು ಭಕ್ತರು ದೇವರ ರೂಪದಲ್ಲಿ ಕಾಣುತ್ತಾ ತಮ್ಮ ಮನೆತನವು ಕುರಿತು ಹೊತ್ತುಕೊಂಡ ಹರಕೆಯನ್ನು ವಿವಿಧ ರೂಪದಲ್ಲಿ ಹರಕೆಯನ್ನು ಕತಲ ರಾತ್ರಿ ದಿನ ಮುಟ್ಟಿಸುವ ಪದ್ಧತಿ ರೂಡಿಗತವಾಗಿದೆ ಆಡೂರ ಗ್ರಾಮದಲ್ಲಿ ಅಲಾಯಿ ದೇವರಿಗೆ ಬೇಡಿಕೊಂಡ ಬೇಡಿಕೆಗಳು ಎಲ್ಲಾರಿಗೂ ಹಿಡೇರಿಸದ ನಂತರ ನೂರಾರು ಭಕ್ತರು ಹರಕೇ ಮುಟ್ಟಿಸುತ್ತಾರೆ.

ಕೇವಲ ಮುಸ್ಲಿಮರ ಹೊಸ ವರ್ಷದ ಆಚರಣೆಯಷ್ಟೇ ಅಲ್ಲ, ಇದು ಉತ್ತರ ಕರ್ನಾಟಕದ ಭಾಗದಲ್ಲಿ ಹಿಂದೂ ಮತ್ತು ಮುಸ್ಲಿಂ ಸಮುದಾಯಗಳ ಭಾವೈಕ್ಯತೆ ಮತ್ತು ಧರ್ಮ ಸಹಿಷ್ಣುತೆಯ ಪ್ರತೀಕವಾಗಿದೆ. ವಿಶೇಷವಾಗಿ ನಮ್ಮ ಕೊಪ್ಪಳ ಜಿಲ್ಲೆಯಲ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಈ ಹಬ್ಬವನ್ನು ಧರ್ಮಭೇದವಿಲ್ಲದೆ ಅದ್ದೂರಿಯಾಗಿ ಆಚರಿಸಲಾಗುತ್ತದೆ

ಇದೆ ರೀತಿ ತಾಲೂಕಿನಲ್ಲಿ ಹಲವು ಗ್ರಾಮಗಳಾದ ರಾಜೂರ, ದ್ಯಾಂಪುರ, ಕುದುರಿಮೋತಿ, ಚನ್ನಪ್ಪನಹಳ್ಳಿ, ಬಂಡಿ, ತಾಲೂಕಿ ಎಲ್ಲಾ ಗ್ರಾಮಗಳಲ್ಲಿ ಹಿಂದೂ ಮುಸ್ಲಿಂ ಸಮುದಾಯದವರು ಪ್ರತಿ ವರ್ಷವೂ ಅತ್ಯಂತ ವಿಜೃಂಭಣೆಯಿಂದ ಆಚರಿಸುತ್ತಿದ್ದಾರೆ .

ಗ್ರಾಮದಲ್ಲಿ ಇಂದಿಗೂ ಹಿಂದೂ ಮತ್ತು ಮುಸ್ಲಿಂ ಸಮುದಾಯದವರು ಜಾತಿ ಧರ್ಮ ಎನ್ನದೆ ಎಲ್ಲರೂ ಸಮಾನರು ಎನ್ನುವ ಭಾವದಿಂದ ಸಹೋದರರಂತೆ ಸೌಹಾರ್ದಯುತ ಬದುಕು ನಡೆಸುತ್ತಿದ್ದಾರೆ. ಹೀಗಾಗಿ ಮೊಹರಂ ಹಬ್ಬವನ್ನು ಗ್ರಾಮಗಳಲ್ಲಿ ಮುಸ್ಲಿಂ ಸಮುದಾಯದವರ ಜತೆಯಲ್ಲಿ ಹಿಂದೂಗಳು ಹೆಚ್ಚಿನ ಸಂಖ್ಯೆಯಲ್ಲಿ ಆಚರಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಹಿಂದೂ ಮುಸ್ಲಿಂ ಬಾಂಧವರು ಗ್ರಾಮದ ಗುರು ಹಿರಿಯರು ಯುವಕ ಮಿತ್ರರು ಪಾಲ್ಗೊಂಡಿದ್ದರು.

# ದರ್ಶನಾಪುರಗೆ ಉನ್ನತ ಸ್ಥಾನ ಕೊಡಲು ಜ್ಯೋತಿ.ಬಿ.ಕುಲಕರ್ಣಿ ಮನವಿ

**ಮಲ್ಲಮ್ಮ ನುಡಿ ವಾರ್ತೆ ಗೋಗಿ ಕೆ:**



ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿರುವ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಶಹಾಪೂರ ವಿಧಾನಸಭಾ ಕ್ಷೇತ್ರದ ಐದು ಬಾರಿ ಶಾಸಕರಾಗಿರುವ ಶ್ರೀ ಸಚಿವ ಸಂಪುಟದಲ್ಲಿ ಶರಣಬಸಪ್ಪಗೌಡ ದರ್ಶನಾಪೂರ ಅವರಿಗೆ ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ಉನ್ನತ ಸಚಿವ ಸ್ಥಾನ ನೀಡಬೇಕು ಎಂದು ಶಹಾಪೂರ ತಾಲೂಕಿನ ಗೋಗಿ ಕೆ ಗ್ರಾಮದ ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಹಾಗೂ ಮೇಧ ಅಲೆಮಾರಿ ಸಮಾಜದ ಮುಖಂಡರಾದ ಜ್ಯೋತಿ ಬಿ ಕುಲಕರ್ಣಿ ಆಗ್ರಹಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ದರ್ಶನಾಪೂರ ಅವರು ಮೂರು ಬಾರಿ ರಾಜ್ಯ ಸರ್ಕಾರದ ಸಚಿವರಾಗಿ ಸೇವೆ ಸಲ್ಲಿಸಿದ್ದು, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸಚಿವರಾಗಿ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾಗಿ ನಿರ್ವಹಿಸಿದ ಕಾರ್ಯಗಳು ಜನಮನ್ನಣೆ ಪಡೆದಿದ್ದಾರೆ ಅವರು

ಸರ್ವ ಸಮುದಾಯದ ಜನರೊಂದಿಗೆ ಆತ್ಮೀಯ ಬಾಂಧವ್ಯ ಹೊಂದಿರುವ ದರ್ಶನಾಪೂರ ಅವರು ಜನರ ಕಷ್ಟ-ಸುಖಗಳಲ್ಲಿ ಸದಾ ಭಾಗವಹಿಸುವ ಜನನಾಯಕರು. ಯಾದಗಿರಿ ಜಿಲ್ಲೆಯಲ್ಲಿ ಶಿಕ್ಷಣ, ಆರೋಗ್ಯ, ಮೂಲಸೌಕರ್ಯ, ಕುಡಿಯುವ ನೀರು ಹಾಗೂ ಗ್ರಾಮೀಣಾಭಿವೃದ್ಧಿ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ವಿಶೇಷ ಕೊಡುಗೆ ನೀಡಿದ್ದಾರೆ ಎಂದು ಅವರು ಶ್ಲಾಘಿಸಿದ್ದಾರೆ.

ಅಭಿವೃದ್ಧಿ ಪರ ದೂರದೃಷ್ಟಿ, ಆಡಳಿತಾತ್ಮಕ ಅನುಭವ ಹಾಗೂ ಸರ್ಕಾರದ ಯೋಜನೆಗಳನ್ನು ಜನರಿಗೆ ನೇರವಾಗಿ ತಲುಪಿಸುವ ಸಾಮರ್ಥ್ಯ ಹೊಂದಿರುವ ದರ್ಶನಾಪೂರ

ಕಲ್ಯಾಣ ಕರ್ನಾಟಕ ಭಾಗದ ಆಶೋತ್ತರಗಳಿಗೆ ಸ್ಪಂದಿಸುವ ನಾಯಕರಾಗಿದ್ದಾರೆ ರಾಜ್ಯದ ಅಭಿವೃದ್ಧಿಗೆ ಅವರ ಅನುಭವ ಮತ್ತು ನಾಯಕತ್ವದ ಅಗತ್ಯವಿದ್ದು, ಸಚಿವ ಸಂಪುಟ ವಿಸ್ತರಣೆಯಲ್ಲಿ ಅವರಿಗೆ ಮಹತ್ವದ ಹಾಗೂ ಉನ್ನತ ಖಾತೆಯನ್ನು ನೀಡುವ ಮೂಲಕ ಅವರ ಸೇವೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.ಕಾಂಗ್ರೆಸ್ ಪಕ್ಷದ ವರಿಷ್ಠರು ಹಾಗೂ ರಾಜ್ಯ ನಾಯಕತ್ವವು ದರ್ಶನಾಪೂರ ಅವರ ದೀರ್ಘ ರಾಜಕೀಯ ಅನುಭವ, ಜನಪರ ಸೇವೆ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಪರಿಗಣಿಸಿ ಅವರಿಗೆ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ನೀಡಬೇಕು ಎಂದು ಮನವಿ ಮಾಡಿದ್ದಾರೆ.

# ಗೋಗಿ ಗ್ರಾಮದಲ್ಲಿ ಹಿಂದೂ ಮುಸ್ಲಿಂ ಭಾವೈಕ್ಯತೆಯ ಮೋಹರಂ ಭಕ್ತರಿಂದ ಅಲಾಯಿ ಕುಣಿತ



**ಮಲ್ಲಮ್ಮ ನುಡಿ ವಾರ್ತೆ ಗೋಗಿ**

ಶಹಾಪುರ ತಾಲೂಕಿನ ಗೋಗಿ ಗ್ರಾಮದದಲ್ಲಿ ಕರ್ನಾಟಕ ಭಾಗದಲ್ಲಿ ಮೊಹರಂ ಹಬ್ಬವನ್ನು ಹಿಂದೂ ಮತ್ತು ಮುಸ್ಲಿಂ ಬಾಂಧವರು ಯಾವುದೇ ಭೇದಭಾವವಿಲ್ಲದೆ ಅತ್ಯಂತ ಸಡಗರ ಮತ್ತು ಸೌಹಾರ್ದತೆಯಿಂದ ಆಚರಿಸುತ್ತಾರೆ. ಪಂಜಾ (ದೇವರು) ಸ್ಥಾಪನೆ, ಅಲಾಯಿ ಕುಣಿತ ಹಾಗೂ ವಿಶೇಷ ಜಾನಪದ ಹಾಡುಗಳನ್ನು ಹಾಡುವುದು ಇಲ್ಲಿನ ಪ್ರಮುಖ ವಿಶೇಷತೆಯಾಗಿದೆ.

ಮೊಹರಂ ಇಸ್ಲಾಮಿಕ್ ಕ್ಯಾಲೆಂಡರ್‌ನ ಮೊದಲ ತಿಂಗಳು ಮತ್ತು ಅತ್ಯಂತ ಪವಿತ್ರವಾದ ಸಮಯವಾಗಿದೆ. ಇದು ಕೇವಲ ಹೊಸ ವರ್ಷದ ಆರಂಭವನ್ನು ಸೂಚಿಸುವುದಿಲ್ಲ, ಬದಲಿಗೆ ತ್ಯಾಗ, ನ್ಯಾಯಕ್ಕಾಗಿ ಹೋರಾಟ ಮತ್ತು ಧರ್ಮದ ರಕ್ಷಣೆಗಾಗಿ ಪ್ರವಾದಿ ಮೊಹಮ್ಮದ್ ಅವರ ಮೊಮ್ಮಗ ಇಮಾಮ್ ಹುಸೇನ್ ಅವರು ನೀಡಿದ ಬಲಿದಾನದ ನೆನ ಮಹತ್ವವನ್ನು ಸಾರುತ್ತದೆ.

ಮೊಹರಂ ಹಬ್ಬದ ಪ್ರಮುಖ ಮಹತ್ವಗಳು ಮತ್ತು ಹಿನ್ನೆಲೆ ಈ ಕೆಳಗಿನಂತಿವೆ:1. ಕರ್ಬಲಾ ಯುದ್ಧದ ಸ್ಮರಣೆ (ತ್ಯಾಗ ಮತ್ತು ಬಲಿದಾನ):ಮೊಹರಂ ತಿಂಗಳ ಹತ್ತನೇ ದಿನವನ್ನು 'ಅಶುರಾ' ಎಂದು ಕರೆಯಲಾಗುತ್ತದೆ. ಈ ದಿನದಂದು ಪ್ರವಾದಿ ಮೊಹಮ್ಮದ್ ಅವರ ಮೊಮ್ಮಗ ಇಮಾಮ್ ಹುಸೇನ್ ಮತ್ತು ಅವರ ಕುಟುಂಬದವರು ಕರ್ಬಲಾ ಮೈದಾನದಲ್ಲಿ ನಡೆದ ಯುದ್ಧದಲ್ಲಿ ಅನ್ಯಾಯ ಮತ್ತು ದಬ್ಬಾಳಿಕೆಯ ವಿರುದ್ಧ ಹೋರಾಡಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದರು.

ಈ ದಿನವು ಧೈರ್ಯ, ಸತ್ಯ ಮತ್ತು ಅನ್ಯಾಯದ ವಿರುದ್ಧ ನಿಲ್ಲುವ ಸಂದೇಶವನ್ನು ನೀಡುತ್ತದೆ.2. ಹೊಸ ವರ್ಷದ ಆರಂಭ:ಮೊಹರಂ ಇಸ್ಲಾಮಿಕ್ ಚಂದ್ರಮಾನ ಕ್ಯಾಲೆಂಡರ್‌ನ ಮೊದಲ ತಿಂಗಳು. ಈ ತಿಂಗಳ ಮೊದಲ ದಿನದಿಂದ ಹೊಸ ಇಸ್ಲಾಮಿಕ್ ವರ್ಷ (ಹಿಜ್ರಿ ವರ್ಷ) ಆರಂಭವಾಗುತ್ತದೆ.

ಪ್ರವಾದಿ ಮೂಸಾ (ಮೋಸೆಸ್) ಅವರ ಪಾರುಗಾಣಿಕಾ:ಸುನ್ನಿ ಮುಸ್ಲಿಮರ ನಂಬಿಕೆಯ ಪ್ರಕಾರ, ಮೊಹರಂ ತಿಂಗಳ ಹತ್ತನೇ ದಿನದಂದು (ಅಶುರಾ) ಪ್ರವಾದಿ ಮೂಸಾ ಮತ್ತು ಅವರ ಅನುಯಾಯಿಗಳು ಫೇರೋನ (ಫಿರಾನ್) ದಾಸ್ಯದಿಂದ ಬಿಡುಗಡೆ ಹೊಂದಿ, ಕೆಂಪು ಸಮುದ್ರವನ್ನು ದಾಟಿ ಸುರಕ್ಷಿತವಾಗಿ ಪಾರಾಗಿದ್ದರು.

ಪ್ರಾರ್ಥನೆ ಮತ್ತು ಉಪವಾಸ: ಮುಸ್ಲಿಮರು ಈ ತಿಂಗಳಲ್ಲಿ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸುತ್ತಾರೆ. ವಿಶೇಷವಾಗಿ ಅಶುರಾ ದಿನದಂದು (10ನೇ ಮೊಹರಂ) ಉಪವಾಸ (ರೋಜಾ) ಆಚರಿಸುವುದು ಅತ್ಯಂತ ಪುಣ್ಯವೆಂದು ಪರಿಗಣಿಸಲಾಗಿದೆ ಶಿಯಾ ಮುಸ್ಲಿಮರು ಮೊಹರಂನ ಮೊದಲ ಹತ್ತು ದಿನಗಳನ್ನು ಇಮಾಮ್ ಹುಸೇನ್ ಮತ್ತು ಅವರ ಕುಟುಂಬದವರ ತ್ಯಾಗದ ನೆನಪಿಗಾಗಿ ಶೋಕಾಚರಣೆಯಾಗಿ (ಮುಹರಂ ಆಚರಣೆ) ಕಳೆಯುತ್ತಾರೆ.

ಈ ಸಂದರ್ಭದಲ್ಲಿ ಊರಿನ ಎಲ್ಲಾ ಸಮುದಾಯದ ಗುರು – ಹಿರಿಯರ ಹಿಂದೂ ಮುಸ್ಲಿಂ ಭಾವೈಕ್ಯತೆಯ ಸಂದೇಶ ಅತ್ಯಂತ ಬಾಜಿ ಭಜಂತ್ರಿಗಳಿಂದ ಕುಣಿತಾ ಗಮನ ಸೆಳೆಯಿತು ವಿಜೃಂಭಣೆಯಿಂದ ಆಚರಿಸಲಾಯಿತು.

# ವಡಗೇರಾ ತಾಲೂಕಿನಾದ್ಯಂತ ಭಾವೈಕ್ಯತೆಯ ಮೊಹರಂ ದೇವರಿಗೆ ನೈವೇದ್ಯ,ಕಾಯಿ ಕರ್ಪೂರ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**



ಗ್ರಾಮೀಣಭಾಗದಲ್ಲಿಹಿಂದೂಮುಸ್ಲಿಂರಭಾವೈಕ್ಯತೆಯಮೊಹರಂ ಹಬ್ಬವನ್ನುತಾಲೂಕು ಹಾಗೂ ಪಟ್ಟಣಸೇರಿದಂತೆಗ್ರಾಮೀಣ ಪ್ರದೇಶದಲ್ಲಿ ಮೊಹರಂ ಹಬ್ಬವು ಅತ್ಯಂತ ಸಂಭ್ರಮ ಸಡಗರದಿಂದ ಆಚರಣೆಮಾಡಲಾಗುತ್ತಿದೆ.ಈ ಹಬ್ಬದ ನಿಮಿತ್ಯ ದಿನಾಲೂಸಾಯಂಕಾಲ ಯುವಕರುಅಲಾಯಿ ಕುಣಿಯ ಸುತ್ತಲು ಬೋಸಾಯಿ ಕುಣಿತ ಜರುಗುವುದುತದ ನಂತರ ಅಲಾಯಿ ಫೀರಾ ಪೂಜಾರಿಗಳು ಮುಲ್ಲಾನೂರ ಅಗ್ನಿ ಪ್ರವೇಶ ಮಾಡುವರು ಹಿಂದೂ ಮುಸ್ಲಿಂ ಎಂಬ ಭೇದವಿಲ್ಲದೆ ಎಲ್ಲರೂ ದೇವರಿಗೆ ನೈವೇದ್ಯ ಸಕ್ಕರೆ ಕಾಯಿ ಕರ್ಪೂರ ನೀಡುವ ಮೂಲಕ ಹರಿಕೆ ತೀರಿಸುವರು ಗ್ರಾಮೀಣ ಪ್ರದೇಶದ ಅನೇಕ ಗ್ರಾಮಗಳಲ್ಲಿ ದೇವರುಗಳ ಮೂರ್ತಿ ಸ್ಥಾಪಿಸಿ ದಿನನಿತ್ಯ ಪೂಜಾ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗುತ್ತವೆ.ತಾಲೂಕಿನಲ್ಲಿ ಮೊಹರಂ ಹಬ್ಬವನ್ನು ಪ್ರತಿಯೊಬ್ಬರು ಅತ್ಯಂತ ಶ್ರದ್ಧಾ ಭಕ್ತಿಯಿಂದ ಆಚರಣೆ ಮಾಡುತ್ತಾರೆ ಗ್ರಾಮೀಣ ಪ್ರದೇಶದಲ್ಲಿ ಈ ಹಬ್ಬವು ಅತ್ಯಂತ ವಿಶೇಷತೆಯಿಂದ ಕೂಡಿದೆ ಈ ಮೊಹರಂ ಹಬ್ಬದಲಿ ಅತಿ ಹೆಚ್ಚು ಸಂಖ್ಯೆಯಲ್ಲಿ ಹಿಂದೂಗಳು ಭಾಗಿಯಾಗಿ ಎಲ್ಲಾ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಂಡು ಭಕ್ತಿ ಮೆರೆಯುತ್ತಾರೆ ದೇವರುಗಳಿಗೆ ಅಲಂಕರಿಸಿ ಅವುಗಳ ಸವಾರಿ ನೋಡುವುದೇ ಒಂದು ರೋಮಾಂಚನ ಮತ್ತು ಅದ್ಭುತ ಯುವಕರು ಬಗೆ ಬಗೆಯ ಉಡುಪುಗಳನ್ನು ಧರಿಸಿ ಕಾಲಿಗೆ ಗೆಜ್ಜೆ ಕಟ್ಟಿಕೊಂಡು ಬೋಸಯಿ ಕುಣಿಯುತ್ತಾ ಮೊಹರಂ ಪದಗಳನ್ನು ಹಾಡುತ್ತಾರೆ.ಶುಕ್ರವಾರದಂದು ಸಾಯಂಕಾಲ ಮೊಹರಂ ಹಬ್ಬದ ಕೊನೆ ದಿನವಾಗಿದ್ದು ಸಂಜೆ ಸೈಯದ ಕಾಸಿಂ ದೇವರ ಮೆರವಣಿಗೆ ಹಾಗೂ ದಫನ ಕಾರ್ಯ ಜರುಗಿದ ನಂತರ ಮೊಹರಂ ಹಬ್ಬವು ಸಂಪನ್ನಗೊಳ್ಳಲಿದೆ ಎನ್ನುತ್ತಾರೆ.ಫೀರಾಗಳು ಈ ಮೊಹರಂ ಹಬ್ಬದಲ್ಲಿ ಹಿರಿಯರು ಕಿರಿಯರು ಎನ್ನದೆ ಜಾತಿಭೇದ ಮರೆತು ಮೊಹರಂ ಹಬ್ಬದಲಿ ಪಾಲ್ಗೊಂಡು ಭಾವೈಕ್ಯತೆಗೆ ಸಾಕ್ಷಿಯಾಗುತ್ತಾರೆ.ಮೊಹರಂ ಹಬ್ಬದ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಗ್ರಾಮಸ್ಥರು ಪಟ್ಟಣದ ಮುಖಂಡರು ರೈತರು ಮಹಿಳೆಯರು ಯುವಕರು ಭಾಗವಹಿಸಿದ್ದರು.

# ಲಾಯನ್ಸ್ ಕ್ಲಬ್ ಅಂಕೋಲಾ ಕರಾವಳಿ ವತಿಯಿಂದ ಧ್ವನಿವರ್ಧಕ, ಬ್ಯಾಗ್ ವಿತರಣೆ




• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ಪಟ್ಟಣದ ಪುರಲಕ್ಕಿಬೇಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಲಾಯನ್ಸ್ ಕ್ಲಬ್ ಅಂಕೋಲಾ ಕರಾವಳಿ ಹಾಗೂ ದಿನಕರ ವೇದಿಕೆ ಅಂಕೋಲಾ ವತಿಯಿಂದ ಶಾಲೆಗೆ ಅಗತ್ಯವಿದ್ದ ಧ್ವನಿವರ್ಧಕ ಹಾಗೂ ವಿದ್ಯಾರ್ಥಿಗಳಿಗೆ ಸ್ಕೂಲ್ ಬ್ಯಾಗ್ ವಿತರಿಸಿದರು.

ದಿನಕರ ವೇದಿಕೆಯ ಅಧ್ಯಕ್ಷ ರವೀಂದ್ರ ಕೇಣಿ ಮಾತನಾಡಿ, ಸಂಘಸಂಸ್ಥೆಗಳು ಹುಟ್ಟಿಕೊಂಡರೆ ಸಾಲದು. ಅದು ಜೀವಂತಿಕೆ ಇರುವುದು ನಿರಂತರ ಚಟುವಟಿಕೆಯಲ್ಲಿದ್ದು, ನಮ್ಮ ಕೈಲಾದ ನೆರವನ್ನು ಇತರರಿಗೆ ನೀಡುವುದು. ಹಾಗಾದಾಗ ಮಾತ್ರ ಸಂಘ ಸಂಸ್ಥೆಗಳಿಗೆ ಸಮಾಜದಲ್ಲಿ ಮನ್ನಣೆ ಸಿಗುತ್ತದೆ. ಹಾಗೇ ದೇಣಿಗೆ ನೀಡಿರುವುದನ್ನು ಶಾಲೆಯವರು ಮತ್ತು ವಿದ್ಯಾರ್ಥಿಗಳು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಲಾಯನ್ಸನ ಹಿರಿಯ ಸದಸ್ಯ ಮಹಾಂತೇಶ ರೇವಡಿ ಪ್ರಾಸ್ತವಿಕವಾಗಿ ಮಾತನಾಡಿದರು. ಕೊಡುಗೆಯ ಪ್ರಾಯೋಜ-ಕರಾದ ಡಾ. ಕರುಣಾಕರ ಎಂ. ನಾಯ್ಕ ಮಾತನಾಡಿ, ಆತ್ಮತೃಪ್ತಿಗಾಗಿ ತಾನು ಈ ಕೊಡುಗೆ ನೀಡುತ್ತಿದ್ದೇನೆ ಎಂದರು. ಎಸ್‌ಡಿಎಂಸಿ ಅಧ್ಯಕ್ಷ ಕಮಲಾಕರ ಆಗೇರ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಖ್ಯಾಧ್ಯಾಪಕಿ ಚಂದ್ರಭಾಗಿ ನಾಯಕ ಸ್ವಾಗತಿಸಿದರು. ಶಿಕ್ಷಕಿ ವಿದ್ಯಾ ನಾಯ್ಕ ನಿರೂಪಿಸಿದರು. ಶಿಕ್ಷಕ ಪ್ರಕಾಶ ನಾಯ್ಕ ವಂದಿಸಿದರು. ಲಾಯನ್ಸ್ ಅಧ್ಯಕ್ಷ ರಮೇಶ ಪರಮಾರ, ಲಾಯನ್ಸ್‌ನ ಸದಸ್ಯರಾದ ಕೆ.ಎಂ.ಗೌಡ, ಓಂ ಪ್ರಕಾಶ ಪಟೇಲ್, ಚಂದನ್ ಸಿಂಗ್, ದಿನಕರ ವೇದಿಕೆಯ ವಸಂತ ನಾಯ್ಕ, ಕಮಲಾಕರ ಬೋರಕರ, ಸಂತೋಷ ನಾಯ್ಕ ಉಪಸ್ಥಿತರಿದ್ದರು.

# ಮಹಿಳೆಯರ ಸ್ವಾವಲಂಬಿ ಜೀವನಕ್ಕೆ ಕೌಶಲ್ಯಾಭಿವೃದ್ಧಿ ತರಬೇತಿ ಅಗತ್ಯ : ರಾಜೇಂದ್ರ ಶೆಟ್ಟಿ

• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**




ಕೌಶಲ್ಯಾಭಿವೃದ್ಧಿ ತರಬೇತಿಗಳ ಉಪಯೋಗವನ್ನು ಸಾರ್ವಜನಿಕರು ಹೆಚ್ಚು ಹೆಚ್ಚು ಪಡೆದು ಸ್ವಾಲಂಭಿಗಳಾಗಬೇಕು. ಈ ಮೂಲಕ ಸ್ವಯಂ ಉದ್ಯೋಗವನ್ನು ಮಾಡಲು ಸಾಧ್ಯವಾಗುತ್ತದೆ. ಅದರಲ್ಲಿಯೂ ಮಹಿಳೆಯರ ಪಾತ್ರ ಮಹತ್ವದ್ದು ಎಂದು ಅಂಕೋಲಾ ಅರ್ಬನ್ ಬ್ಯಾಂಕ್ ಅಧ್ಯಕ್ಷ ರಾಜೇಂದ್ರ ಶಾಂಬಾ ಶೆಟ್ಟಿ ಹೇಳಿದರು.

ಪಟ್ಟಣದ ಅರ್ಬನ್ ಬ್ಯಾಂಕ್ ಮಹಡಿಯಲ್ಲಿ ಭಾರತೀಯ ವಿಕಾಸ ಟ್ರಸ್ಟ್ ಮಣಿಪಾಲ್, ಸಂಗಮ ಸೇವಾ ಸಂಸ್ಥೆ ಅಂಕೋಲಾ ಶ್ರೀ ಶಾರದಾಂಬಾ ಮಹಿಳಾ ಮಂಡಳ ಇವರ ಸಹಯೋಗದಲ್ಲಿ ನಡೆದ ಏಳು ದಿನಗಳ ಬ್ಯೂಟಿ ಪಾರ್ಲರ್ ಹಾಗೂ ಸಾರಿಬಾಕ್ಸ್ ಫೋಲ್ಡರ್ ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತೀಯ ವಿಕಾಸ ಟ್ರಸ್ಟ್ ನ ರಾಘವೇಂದ್ರ ಆಚಾರ್ಯ, ಶ್ರೀ ಶಾರದಾಂಬಾ ಮಹಿಳಾ ಮಂಡಳಿಯ ಅಧ್ಯಕ್ಷೆ ಸುಧಾ ಜಿ. ಶೆಟ್ಟಿ, ಸಂಗಮ ಸೇವಾ ಸಂಸ್ಥೆಯ ಜಯಾ ಗೌಡ ಮಾತನಾಡಿದರು.

ವರ್ಷಿಣಿ ಶೆಟ್ಟಿ ಪ್ರಾರ್ಥಿಸಿದರು. ಯೋಗಿತಾ ಎಸ್. ಶೆಟ್ಟಿ ಸ್ವಾಗತಿಸಿದರು. ಸುಧಾ ಪ್ರಶಾಂತ ಶೆಟ್ಟಿ, ಪೂಜಾ ಮುಂತಾದವರು ಶಿಬಿರಾರ್ಥಿಗಳ ಪರವಾಗಿ ಅನಿಸಿಕೆಗಳನ್ನು ಹಂಚಿಕೊಂಡರು. ತರಬೇತಿದಾರರಾದ ಮಾಯಾ ಕೆ. ಶೆಟ್ಟಿ ಉಪಸ್ಥಿತರಿದ್ದರು. ಶಾರದಾಂಬಾ ಮಹಿಳಾ ಮಂಡಳದ ಕಾರ್ಯದರ್ಶಿ ಜ್ಯೋತಿ ಕೆ. ಬಾಳೆಹಿತ್ತಲ್ ನಿರೂಪಿಸಿದರು. ಸ್ನೇಹಾ ಕೇಣಿ ವಂದಿಸಿದರು.

# ನಕಲಿ ದಾಖಲೆ ಸೃಷ್ಟಿಸಿ ಜಾಗ ಮಾರಾಟ ಮಾಡಿದವರ ಜಾಲ ಪತ್ತೆ ಹಚ್ಚುವಂತೆ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ತಾಲೂಕಿನ ಬೊಗ್ರಿಬೈಲ್ ವ್ಯಾಪ್ತಿಯ ಸರ್ವೆ ನಂ.25 ಹಿಸ್ಸಾ 1 ರ ಜಮೀನನ್ನು ಅಕ್ರಮವಾಗಿ ಮಾರಾಟ ಮಾಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಅಲಗೇರಿ ಗ್ರಾ.ಪಂ. ವ್ಯಾಪ್ತಿಯ ಬೊಗ್ರಿಬೈಲ್, ಶಿರಕುಳಿ, ಬಾಳೆಗುಳಿ ಸಾರ್ವಜನಿಕರು ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸರ್ವೆ ನಂ.25 ಹಿಸ್ಸಾ 1 ರ ನಂಬರಿನಲ್ಲಿರುವ 7 ಎಕರೆ 26 ಗುಂಟೆ ಜಾಗ ಶಿವಮೊಗ್ಗ ಮೂಲದ ಶಿವಕುಮಾರ ಮುರುಗೇಶ ರಾಮಸ್ವಾಮಿ ಎಂಬುವವರಿಗೆ ಮಾರಾಟ ಮಾಡಲಾಗಿದೆ. ಈ ಜಮೀನಿನ ಮಾರಾಟದ ಕ್ರಮದ ಹಿಂದೆ ದೊಡ್ಡ ಜಾಲವಿರುವ ಶಂಕೆಯಿದೆ ಎಂದು ಅವರು ಸಲ್ಲಿಸಿದ ಮನವಿಯಲ್ಲಿ ತಿಳಿಸಿದ್ದಾರೆ.

ಪ್ರಮುಖರಾದ ಗೋವಿಂದ ಗೌಡ ಮಾತನಾಡಿ, ಈ ಪ್ರಕರಣದಲ್ಲಿ ನಕಲಿ ದಾಖಲೆ ಸೃಷ್ಟಿಸಿ 40 ವರ್ಷದ ಹಿಂದೆ ಮೃತರಾದ ವ್ಯಕ್ತಿಯ ಹೆಸರಿನಲ್ಲಿ ದಾಖಲೆ ಸೃಷ್ಟಿಸಿ ಯಾರದೋ ಜಾಗವನ್ನು ಇನ್ಯಾರಿಗೋ ಮಾರಾಟ ಮಾಡಿದ್ದಾರೆ ಈ ವಿಷಯ ಬೆಳಕಿಗೆ ಬರುತ್ತಿದ್ದಂತೆ-ಯೇ ನೊಂದಣಾಧಿಕಾರಿ ಕಚೇರಿಯಲ್ಲಿ ತಿರಸ್ಕರಿಸಿ ಮೂಲ ಮಾಲೀಕನ ಹೆಸರಿಗೆ ಜಾಗ ವಾಪಾಸ್ಸಾಗಿದೆ. ಆದರೆ ಸ್ಥಳೀಯರೇ ಈ ನಕಲಿ ದಾಖಲೆ ಸೃಷ್ಟಿಸಿ ಮಾರಾಟ ಮಾಡಿದ್ದಾರೆ. ಹೀಗಾಗಿ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಇದರ ಹಿಂದೆ ಯಾವ ಹುಳಗಳಿವೆ ಎನ್ನುವುದನ್ನು ಪತ್ತೆಹಚ್ಚಬೇಕಾಗಿದೆ ಎಂದರು.

# ಸಮಾಜ ಸೇವಕ ಶೈಲೇಂದ್ರ ಪೊಲೀಸ್ ಪಾಟೀಲ್ ರಿಗೆ ರಾಷ್ಟ್ರೀಯ ಆರ್ಯಭಟ ಪ್ರಶಸ್ತಿ ಪ್ರದಾನ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಸಾಮಾಜಿಕ ಸೇವಾ ಕ್ಷೇತ್ರದಲ್ಲಿ ಶೈಲೇಂದ್ರ ಪೊಲೀಸ್ ಪಾಟೀಲ್ ಅವರು ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ತಾಲ್ಲೂಕಿನ ನಿರ್ಣಾ ಗ್ರಾಮದ ಸಮಾಜ ಸೇವಕ ಶೈಲೇಂದ್ರ ಪೊಲೀಸ್ ಪಾಟೀಲ್ ಅವರಿಗೆ ಆರ್ಯಭಟ ರಾಷ್ಟ್ರೀಯ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಧಾರವಾಡದ ಚೇತನ ಪ್ರತಿಷ್ಠಾನ ಹಾಗೂ ಆರ್ಯಭಟ ಎಜುಕೇಶನಲ್ ಟ್ರಸ್ಟ್‌ಗಳ ಸಹಯೋಗದಲ್ಲಿ ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಅಕ್ಕಮಹಾದೇವಿ ಸಭಾಂಗಣದಲ್ಲಿ ಭಾನುವಾರ ಜರುಗಿದ ಅಖಿಲ ಕರ್ನಾಟಕ ಶಿಕ್ಷಕರ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿಕ್ಷಣ, ಸಾಹಿತ್ಯ, ಸಮಾಜ ಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಸಮ್ಮೇಳನದಲ್ಲಿ ಗೌರವಿಸಲಾಯಿತು. ಸಾಮಾಜಿಕ ಸೇವಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಶೈಲೇಂದ್ರ ಪೊಲೀಸ್ ಪಾಟೀಲ್ ಅವರ ಸೇವೆಯನ್ನು ಪರಿಗಣಿಸಿ ಆರ್ಯಭಟ




ರಾಷ್ಟ್ರೀಯ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಸಮ್ಮೇಳನಾಧ್ಯಕ್ಷ ಎಂ.ಆರ್.

ಮಲ್ಲಿಕಾರ್ಜುನಯ್ಯ, ಉದ್ಘಾಟಕ ಡಾ. ಚಿಕ್ಕಹೆಜ್ಜಾಜಿ ಮಹದೇವ್, ಚೇತನ ಫೌಂಡೇಷನ್ ಅಧ್ಯಕ್ಷ ಡಾ.ಚಂದ್ರಶೇಖರ ಮಾಡಲಗೇರಿ, ಶಿವರಾಜ್ ನೀಲಾ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಆರ್ಯಭಟ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಶೈಲೇಂದ್ರ ಪೊಲೀಸ್ ಪಾಟೀಲ್ ಮಾತನಾಡಿ, ನಾನು ಸಮಾಜದಲ್ಲಿ ಮಾಡುತ್ತಿರುವ ಸಾಮಾಜಿಕ ಸೇವೆಯನ್ನು ಗುರುತಿಸಿ ನನಗೆ ಪ್ರಶಸ್ತಿಗಳು ದೊರೆಯುತ್ತಿವೆ. ಇತ್ತೀಚೆಗೆ.... ಪ್ರಶಸ್ತಿ ಕೂಡ ಲಭಿಸಿದೆ. ಆರ್ಯಭಟ ರಾಷ್ಟ್ರೀಯ ಪ್ರಶಸ್ತಿಯಿಂದ. ಸಮಾಜ ಸೇವೆಯ ಜವಾಬ್ದಾರಿಯನ್ನು ಹೆಚ್ಚಿಸಿದೆ, ಎಲ್ಲರ ಪ್ರೀತಿ, ವಿಶ್ವಾಸ,

ಸಹಕಾರದಿಂದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯವನ್ನು ಮುಂದುವರಿಸುತ್ತೇನೆ ಎಂದು ತಿಳಿಸಿದರು.

## ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ತಾಲೂಕಾಧ್ಯಕ್ಷರಾಗಿ ಮಲ್ಲಪ್ಪ ಸೊನ್ನದ, ಉಪಾಧ್ಯಕ್ಷರಾಗಿ ಬಸವರಾಜ ಗುಗ್ಗರಿ, ಸವಿತಾ ಎಲ್. ಭಯ್ಯಾ, ಗೌರವಾಧ್ಯಕ್ಷರಾಗಿ ವಿಜಕುಮಾರ್ ಎಲ್. ಚಾಂಗಲೇರಾ, ಕೋಶಾಧ್ಯಕ್ಷರಾಗಿ ಸುಶಾಂತಕುಮಾರ್ ಜಿ. ಭಾತಾಂಬ್ರಾ, ಸಂಘಟನಾ ಕಾರ್ಯದರ್ಶಿಗಳಾಗಿ ಸಂತೋಷಕುಮಾರ್ ಚೀಲಾ, ಅಶ್ವಿನಿ ಆರ್. ಬರ್ಮಾ, ಸಾಂಸ್ಕೃತಿಕ ಕಾರ್ಯದರ್ಶಿಗಳಾಗಿ ಸಂಧ್ಯಾರಾಣಿ ಎ. ಧುಮಾಳೆ, ರಾಜಕುಮಾರ್ ಪಂಚಾಳ, ಪ್ರಧಾನ ಕಾರ್ಯದರ್ಶಿಯಾಗಿ ಅಮೃತರಾವ ಮರಕಲೆ, ಕಾರ್ಯಾಧ್ಯಕ್ಷರಾಗಿ ಹಣಮಂತಪ್ಪ ಕಡಕೋಳ, ಕ್ರೀಡಾ ಕಾರ್ಯದರ್ಶಿಯಾಗಿ ಪ್ರವೀಣ ಮಠಪತಿ, ಕಾನೂನು ಸಲಹೆಗಾರರಾಗಿ ಜಗದೀಶಕುಮಾರ್ ಮಮದಾಪುರೆ ಇವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಭಾಗ್ಯಜ್ಯೋತಿ ಎ. ಬೆಳ್ಳೂರೆ ತಿಳಿಸಿದ್ದಾರೆ. ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಕಾರ್ಯನಿರ್ವಾಹಕ ಅಧಿಕಾರಿ ಲಿಂಗರಾಜ ಪಾಟೀಲ್ ಸನ್ಮಾನಿಸಿ ಶುಭಕೋರಿದರು. ಈ ಸಂದರ್ಭದಲ್ಲಿ ಉದ್ಯೋಗ ಖಾತ್ರಿ ಸಹಾಯಕ ನಿರ್ದೇಶಕ ಸುದೇಶಕುಮಾರ್ ಗೋಡೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ದ್ವಿದಳ ಧಾನ್ಯಗಳ ಉತ್ಪಾದನೆ ಹೆಚ್ಚಿಸಲು ಆತ್ಮನಿರ್ಭರ ಅಭಿಯಾನದ ಯಶಸ್ವಿ ಅನುಷ್ಠಾನ: ಕೃಷಿ ಅಧಿಕಾರಿ ಶತ್ರುಘ್ನ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ದ್ವಿದಳ ಧಾನ್ಯಗಳ ಉತ್ಪಾದನೆ ಹೆಚ್ಚಿಸುವ ಹಾಗೂ ಈ ಕ್ಷೇತ್ರದಲ್ಲಿ ರಾಜ್ಯವನ್ನು ಸ್ವಾವಲಂಬಿಯನ್ನಾಗಿಸುವ ಮಹತ್ತರ ಉದ್ದೇಶದಿಂದ ಈ ಆತ್ಮನಿರ್ಭರ ಅಭಿಯಾನ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಕೃಷಿ ಅಧಿಕಾರಿ ಶತ್ರುಘ್ನ ಎಸ್. ಅವರ ಹೇಳಿದರು.

ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿಶೇಷ ಕಾರ್ಯಕ್ರಮದಲ್ಲಿ 2026-27ನೇ ಸಾಲಿನ ದ್ವಿದಳ ಧಾನ್ಯಗಳ 'ಆತ್ಮನಿರ್ಭರ ಅಭಿಯಾನ ಯೋಜನೆ'ಯಡಿ ಬಾಲೂರು ಹಾಗೂ ಮುರ್ಗಾ(ಕೆ) ಗ್ರಾಮದ ರೈತರಿಗೆ ಉಚಿತ ತೊಗರಿ ಮತ್ತು ಸೋಯಾಬಿನ್ ಬಿತ್ತನೆ ಬೀಜಗಳ ಕಿರುಚೀಲ (ಮಿನಿಕಿಟ್) ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ವತಿಯಿಂದ ರೈತರಿಗೆ ಉತ್ತಮ ಗುಣಮಟ್ಟದ ತೊಗರಿ ಮತ್ತು ಸೋಯಾಬಿನ್ ಬೀಜಗಳನ್ನು ಒದಗಿಸಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು," ಎಂದು ತಿಳಿಸಿದರು.

ಕೃಷಿ ಸಮಾಜದ ತಾಲೂಕು ಘಟಕದ ಅಧ್ಯಕ್ಷರಾದ ಉಮಾಕಾಂತ್ ಮಾಶೆಟ್ಟಿ (ಮಾಳಕರ) ಅವರು



ಉಚಿತ ಬೀಜಗಳನ್ನು ವಿತರಿಸಿ ಮಾತನಾಡಿ, "ಕೃಷಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರವು ಹತ್ತಾರು ಜನಪರ ಯೋಜನೆಗಳನ್ನು ಜಾರಿಗೆ ತರುತ್ತಿದೆ. ರೈತರು ಇವುಗಳನ್ನು ಬಳಸಿಕೊಂಡು ತಮ್ಮ ಕೃಷಿ ಉತ್ಪಾದನೆಯನ್ನು ಹೆಚ್ಚಿಸಿಕೊಳ್ಳಬೇಕು," ಎಂದು ಕರೆ ನೀಡಿದರು.

?ಈ ಸಂದರ್ಭದಲ್ಲಿ ರೈತ ಸಂಘಟನೆಯ ತಾಲೂಕು ಘಟಕದ ಅಧ್ಯಕ್ಷ ಪ್ರವೀಣಕುಲಕರ್ಣಿ, ಉಪಾಧ್ಯಕ್ಷ ವಿಠಲರಾವ ಪಾಟೀಲ, ಪಟ್ಟಣ ಘಟಕದ ಅಧ್ಯಕ್ಷ ರಾಮೇಶ್ವರ ಶಿವಣಕರ, ಪ್ರಶಾಂತ್ ಖಾನಾಪುರೆ, ಗುಂಡಪ್ಪ ದಾನಾ, ಕಾರ್ಯದರ್ಶಿ ಬಾಲಾಜಿ ದೇಶಮುಖ, ಪ್ರಭು ಕಾಂಬಳೆ, ಸುನೀಲ ಮೋರ್ಗೆ, ಸೂರ್ಯಕಾಂತ ಬಿರಾದಾರ, ಪಂಡರಿನಾಥ ಬಾಳಪ್ಪ, ಸಾಗರ ರಾಠೋಡ, ಎಂ.ಎಸ್. ಹಿರೇಮಠ ಸೇರಿದಂತೆ ಕೃಷಿ ಇಲಾಖೆಯ ಸಿಬ್ಬಂದಿ ಹಾಗೂ ಸ್ಥಳೀಯ ರೈತರು ಉಪಸ್ಥಿತರಿದ್ದರು.

## ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಭಾಗವಹಿಸಲು ಶಾಸಕ ಪ್ರಭು ಚವ್ಹಾಣ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ದೇಶದ ಹೆಮ್ಮೆಯ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರ ಜನಪ್ರಿಯ ಮನ್ ಕಿ ಬಾತ್ ಕಾರ್ಯಕ್ರಮದ ನೇರ ಪ್ರಸಾರವನ್ನು ವೀಕ್ಷಿಸಲು ಜೂನ್ 28 ರಂದು ಬೆಳಿಗ್ಗೆ 10 ಗಂಟೆಗೆ ಕಮಲನಗರ ಪಟ್ಟಣದ ಎಂ.ಎ ಫಂಕ್ಷನ್ ಹಾಲ್‌ನಲ್ಲಿ ವಿಶೇಷ ವ್ಯವಸ್ಥೆ ಮಾಡಲಾಗಿದೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದೇಶವು ಅನೇಕ ಪ್ರಧಾನ ಮಂತ್ರಿಗಳನ್ನು ಕಂಡಿದೆ. ಆದರೆ ದೇಶದ ಸಾಮಾನ್ಯ ನಾಗರಿಕರೊಂದಿಗೆ ಪ್ರತೀ ತಿಂಗಳು ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ ನಿರಂತರವಾಗಿ ನೇರ ಸಂವಾದ ನಡೆಸುವ ಪರಂಪರೆಯನ್ನು ಆರಂಭಿಸಿದ ಏಕೈಕ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರಾಗಿದ್ದಾರೆ.

ಈ ಕಾರ್ಯಕ್ರಮದ ಮೂಲಕ ದೇಶದ ವಿವಿಧ ಭಾಗಗಳಲ್ಲಿನ ಸಾಧಕರನ್ನು ಗುರುತಿಸಿ ಪ್ರೋತ್ಸಾಹಿಸುವುದರ ಜೊತೆಗೆ ಪರಿಸರ ಸಂರಕ್ಷಣೆ, ಸ್ವಚ್ಛ ಭಾರತ, ಮಹಿಳಾ ಸಬಲೀಕರಣ, ಆತ್ಮನಿರ್ಭರ ಭಾರತ, ಶಿಕ್ಷಣ, ಆರೋಗ್ಯ, ಕೃಷಿ, ಯುವಶಕ್ತಿ, ನವೋದ್ಯಮ ಹಾಗೂ ರಾಷ್ಟ್ರ ನಿರ್ಮಾಣದಲ್ಲಿ ನಾಗರಿಕರ ಪಾಲ್ಗೊಳ್ಳುವಿಕೆಯಂತಹ ಅನೇಕ ಮಹತ್ವದ ವಿಷಯಗಳ ಕುರಿತು ಜನಜಾಗೃತಿ ಮೂಡಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಕಳೆದ 11 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತವು ವಿಶ್ವದಲ್ಲಿ



ತನ್ನ ಪ್ರತಿಷ್ಠೆಯನ್ನು ಮತ್ತಷ್ಟು ಹೆಚ್ಚಿಸಿಕೊಂಡಿದ್ದು, ಭಯೋತ್ಪಾದನೆ ವಿರುದ್ಧ ಕಠಿಣ ನಿಲುವು, ರಾಷ್ಟ್ರದ ಭದ್ರತೆ ಬಲಪಡಿಸುವುದು, ಗಡಿಭಾಗಗಳ ಅಭಿವೃದ್ಧಿ ಹಾಗೂ ಪಾಕಿಸ್ತಾನ ಪ್ರೇರಿತ ಉಗ್ರ ಚಟುವಟಿಕೆಗಳಿಗೆ ತಕ್ಕ ಪ್ರತಿಕ್ರಿಯೆ ನೀಡುವ ಮೂಲಕ ದೇಶದ ಸುರಕ್ಷತೆ ಮತ್ತು ಸ್ವಾಭಿಮಾನವನ್ನು ಬಲಪಡಿಸಿರುವುದು ಪ್ರತಿಯೊಬ್ಬ ಭಾರತೀಯನಿಗೂ ಹೆಮ್ಮೆಯ ವಿಷಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಪ್ರಧಾನಿಯವರ ಮಹತ್ವದ ಕಾರ್ಯಕ್ರಮದಲ್ಲಿ ಭಾರತೀಯ ಜನತಾ ಪಕ್ಷದ ಜಿಲ್ಲಾ, ಮಂಡಲದ ಎಲ್ಲಾ ಮುಖಂಡರು, ಪದಾಧಿಕಾರಿಗಳು, ಜನಪ್ರತಿನಿಧಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಮನ್ ಕಿ ಬಾತ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

## ವಿಪತ್ತು ನಿರ್ವಹಣಾ ಸಮಿತಿಯ ತುರ್ತು ಸಭೆಗೆ ಬಿ.ಆರ್ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ದೇಶದಲ್ಲಿ ಒಂದು ದಶಕಗಳ ನಂತರ ಎಲ್ ನಿನೋ ಕಾರಣದಿಂದಾಗಿ ಭೀಕರ ಬರಗಾಲ ಆವರಿಸಿಕೊಂಡಿದೆ. ಕೇಂದ್ರ ಸಚಿವರ ಹೇಳಿಕೆಯಂತೆ 360ಕ್ಕಿಂತ ಹೆಚ್ಚು ಜಿಲ್ಲೆಗಳಲ್ಲಿ ಬರ ಸಂಭವಿಸುವ ಮುನ್ಸೂಚನೆ ನೀಡಿದ್ದಾರೆ. ಹವಾಮಾನ ವರದಿಯ ಪ್ರಕಾರ ಮಳೆ ಕೊರತ 40%ರಷ್ಟು ಆಗಬಹುದೆಂದು ಇಲಾಖೆ ವರದಿಗಳು ಹೇಳಿವೆ. ಇದು ಗಂಭೀರವಾದ ವಿಷಯವಾಗಿದ್ದು, ಈ ಬಗ್ಗೆ ರಾಜ್ಯ ಸರ್ಕಾರ ಮುಂದಾಲೋಚನೆಯಿಂದ ತ್ವರಿತ ಕ್ರಮಗಳನ್ನು ಕೈಗೊಳ್ಳಲು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು. ಅದಕ್ಕಾಗಿ ರಾಜ್ಯ ವಿಪತ್ತು ನಿರ್ವಹಣಾ ಸಮಿತಿಯ ತುರ್ತು ಸಭೆ ಕರೆಯಬೇಕು ಎಂದು ರಾಜ್ಯದ ಯೋಜನಾ ಮತ್ತು ನೀತಿ ಆಯೋಗದ ಉಪಾಧ್ಯಕ್ಷ ಮತ್ತು ಆಳಂದ್ ಶಾಸಕ ಬಿ.ಆರ್. ಪಾಟೀಲ್ ಅವರು ಆಗ್ರಹಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿರುವ ಅವರು, ವಾಡಿಕೆಯಂತೆ ಜೂನ್ ತಿಂಗಳಲ್ಲಿ ಮಳೆ ಬಿದ್ದು ಇಲ್ಲಿಯವರೆಗೆ ಮುಂಗಾರು ಬಿತ್ತನೆ ಪ್ರಾರಂಭವಾಗಬೇಕಿತ್ತು, ಆದರೆ ಮಳೆಯ ಕೊರತೆ ಕಾರಣದಿಂದಾಗಿ ಅಲ್ಲಿ-ಇಲ್ಲಿ, ಅಲ್ಪ-ಸ್ವಲ್ಪ ಮಳೆ ಬಿದ್ದು ಕೇವಲ 12% ರಷ್ಟು ಮಾತ್ರ ರೈತರು ಬಿತ್ತನೆ ಮಾಡಿದ್ದಾರೆ. ಒಟ್ಟು ಸರಾಸರಿ ಇಲ್ಲಿಯವರೆಗೆ ಶೇಕಡಾ 50ರಷ್ಟು ಬಿತ್ತನೆ ಕಾರ್ಯ ಪೂರ್ಣಗೊಳ್ಳಬೇಕಾಗಿತ್ತು. ಆದರೆ ಮಳೆ ಕೈಕೊಟ್ಟ ಕಾರಣ ರೈತರೆಲ್ಲರೂ ಅಸಹಾಯಕರಾಗಿ ಕೈಚೆಲ್ಲಿ ಕುಳಿತ್ತಿದ್ದು ತೀರಾ ನೋವಿನ ಸಂಗತಿ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.



ಈ ಹಿನ್ನೆಲೆಯಲ್ಲಿ ವೈಜ್ಞಾನಿಕವಾಗಿ ಬೆಳೆ ವಿಮೆ ಮಾಡಿಸುವಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು. ಕಳದ ವರ್ಷ ಬೆಳೆ ವಿಮೆ ನಮ್ಮ ಜಿಲ್ಲೆಗೆ 780 ಕೋಟಿ ಮಂಜೂರಾಗಿದ್ದು, ಅದರ ಮಧ್ಯಂತರ ಪರಿಹಾರ 240 ಕೋಟಿ ಬಿಡುಗಡೆ ಮಾಡಿದ್ದಾರೆ, ಬಾಕಿ ಉಳಿದ 340 ಕೋಟಿ ಬೆಳೆ ವಿಮೆ ತಕ್ಷಣ ರೈತರಿಗೆ ಪಾವತಿ ಮಾಡಿಸಬೇಕೆಂದು ಎಂದು ಅವರು ಒತ್ತಾಯಿಸಿದ್ದಾರೆ.

ಬರ ಪ್ರದೇಶವಾದ ಈ ಭಾಗದಲ್ಲಿ ಪ್ರತಿ ವರ್ಷ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಾಗುತ್ತಿದ್ದಾಗಲೆಲ್ಲಾ, ಅದಕ್ಕೆ ಸರಕಾರ ಕೇವಲ ತಾತ್ಕಾಲಿಕ ಪರಿಹಾರ ನೀಡುತ್ತಾ ಬಂದಿದೆಯೇ ಹೊರತು, ಅದನ್ನು ಶಾಶ್ವತವಾಗಿ ಬಗೆಹರಿಸುವಲ್ಲಿ ಪ್ರಯತ್ನಿಸಿಲ್ಲ. ಈ ಕಾರಣಕ್ಕಾಗಿ ಇವತ್ತಿಗೂ ಕೂಡ ಕುಡಿಯುವ ನೀರಿನ ಸಮಸ್ಯೆ ಸಮಸ್ಯೆಯಾಗಿಯೇ ಉಳಿದಿದೆ. ಅಂತರ್ಜಲ ಮಟ್ಟ 50% ರಷ್ಟು ಮೇಲ್ಪಟ್ಟು ಕುಸಿದು ಹೋಗಿದ್ದು ಬಾವಿ- ಬೋರ್ ವೆಲ್, ಹಳ್ಳ ಕೊಳ್ಳಗಳೆಲ್ಲಾ ಬತ್ತಿ ಹೋಗಿವೆ. ಮುಂದಿನ ವಾರ ಮಳೆ ಬಾರದೆ ಇದ್ದರೆ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಳ್ಳುವ ಸಾಧ್ಯತೆ ಇದೆ ಎಂದು ಅವರು ಆತಂಕ ಹೊರಹಾಕಿದ್ದಾರೆ. ಈ ವಿಷಯಕ್ಕೆ ಸಂಭದಿಸಿದಂತೆ ಶಾಶ್ವತವಾಗಿ ಅಂತರ್ಜಲ ಹೆಚ್ಚಿಸುಲು ಕೇಂದ್ರದ ನೆರವಿನಿಂದ ರಾಜ್ಯದಲ್ಲಿ ಅಂತರ್ಜಲ ಹೆಚ್ಚಿಸುವ ಮಹಾರಾಷ್ಟ್ರ ಮಾದರಿಯನ್ನು ಅಳವಡಿಸಕೊಳ್ಳುವುದು ಏಕೈಕ ಸೂಕ್ತ ಮಾರ್ಗವಾಗಿದೆ. ಈ ವಿಷಯವನ್ನ ನಾನು ಪ್ರತಿ ವರ್ಷ ಪ್ರತಿಪಾದಿಸುತ್ತಲೇ ಬಂದಿದ್ದೇನೆ. ಆದರೂ ಪೂರ್ಣ ಪ್ರಮಾಣದ ಶಾಶ್ವತ ಕೆಲಸವಾಗುತ್ತಿಲ್ಲ ಎಂಬ ಕೊರಗು ಇವತ್ತಿಗೂ ನನ್ನನು ಕಾಡುತ್ತಿದೆ ಎಂದು ಅವರು ಬೇಸರ ಹೊರಹಾಕಿದ್ದಾರೆ.

ಈಗಾಗಲೇ ಶಾಸಕರು ತ್ವರಿತ ಕಾರ್ಯಪಡೆ ಸಭೆಗಳನ್ನ ನೆಡೆಸಿ ಅವರವರ ತಾಲ್ಲೂಕಿಗಳಿಗೆ ಬೇಕಾದಷ್ಟು ನೀಡಬೇಕಾದ ಬೇಡಿಕೆಗಳನ್ನ ಜಿಲ್ಲಾಧಿಕಾರಿಗಳ ಮುಖಾಂತರ ಸಲ್ಲಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಸಚಿವರ ಹೇಳಿಕೆಯಂತೆ ಜಿಲ್ಲಾಧಿಕಾರಿಗಳ ಖಾತೆಯಲ್ಲಿ 175 ಕೋಟಿ ಹಣ ಲಭ್ಯವಿದೆ ಎಂದು ತಿಳಿಸಿರುತ್ತಾರೆ. ಆದರೆ ಸರ್ಕಾರ ಬರ ಘೋಷಣೆ ಮಾಡಿದ ನಂತರವೇ ಈ ನಿಧಿಯನ್ನ ಬಳಸುವುದಕ್ಕೆ ಸಾಧ್ಯವಿರುತ್ತದೆ ಎಂದು ತಿಳಿಸಿದ ಅವರು, ನನ್ನ ಕ್ಷೇತ್ರದ ಕಾರ್ಯಪಡೆ ವತಿಯಿಂದ ಕುಡಿಯುವ ನೀರಿಗಾಗಿ 4 ಕೋಟಿ 40 ಲಕ್ಷದ ಕ್ರಿಯಾ ಯೋಜನೆ ರೂಪಿಸಿ ಕಳುಹಿಸಿ ಕೊಟ್ಟಿದ್ದರು, ಕೇವಲ 45 ಲಕ್ಷಗಳು ಮಾತ್ರ ನನ್ನ ಕ್ಷೇತ್ರಕ್ಕೆ ಬಿಡುಗಡೆಗೊಳಿಸಿದ್ದಾರೆ ಎಂದು ನಿದರ್ಶನವೊಂದನ್ನು ನೀಡಿದ್ದಾರೆ.

ಬಹುತೇಕ ಗ್ರಾಮ ಪಂಚಾಯತಿಗಳಲ್ಲಿ ದಿನ ನಿತ್ಯದ ಕುಡಿಯುವ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಹಣವೇ ಇಲ್ಲ. ಪ್ರತಿ ಪಂಚಾಯಿತಿಗಳಿಗೆ ಕುಡಿಯುವ ನೀರಿನ ನಿರ್ವಹಣೆ ಮಾಡಲು ಕನಿಷ್ಠ 5 ಲಕ್ಷ ನೀಡದಿದ್ದರೆ ಸಮಸ್ಯೆ ಇನ್ನಷ್ಟು ಹೆಚ್ಚಾಗಿ ಪಂಚಾಯಿತಿ ಪಿಡಿಓಗಳು ಜನರಿಗೆ ಉತ್ತರ ನೀಡಲು ಹರಸಾಹಸ ಪಡಬಹುದು ಹಾಗೂ ನಮ್ಮಂತಹ ಶಾಸಕರಿಗೂ ಕೂಡ ಸಮರ್ಪಕವಾಗಿ ಉತ್ತರಿಸಲು ಅಸಾಧ್ಯವಾಗಬಹುದೇನೋ?, ಕುಡಿಯುವ ನೀರಿನ ಜೊತೆಜೊತೆಗೆ ಜಾನುವಾರಗಳ ಮೇವು ಲಭ್ಯತೆಯನ್ನ ಖಚಿತಪಡಿಸಿಕೊಂಡು ಪರ್ಯಾಯ ಮಾರ್ಗಗಳನ್ನ ಹುಡಿಕಿಕೊಳ್ಳಬೇಕು. ಕೇಂದ್ರ ಸರ್ಕಾರ ಉದ್ಯೋಗ ಖಾತ್ರಿ ಯೋಜನೆಯನ್ನು ತಿದ್ದುಪಡಿಮಾಡಿ ರಾಜ್ಯ ಸರ್ಕಾರದ ಪಾಲುದಾರಿಕೆಯನ್ನ ಶೇಕಡಾ 300ರಷ್ಟು ಹೆಚ್ಚಿಸಿದಕ್ಕೆ ಅದ-ಕ್ಕೆ ಬೇಕಾಗುವ ಸಂಪನ್ಮೂಲವನ್ನು ಒದಗಿಸಿಕೊಡಬೇಕು. ನಿರುದ್ಯೋಗಿ ಕೃಷಿ ಕಾರ್ಮಿಕರಿಗೆ ಕೆಲಸ ಕೊಟ್ಟು ಅವರು ವಲಸೆ ಹೋಗುವದನ್ನ ತಡೆಯಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ನಾರಾಯಣಪುರ ಅಣೆಕಟ್ಟಿನಿಂದ ಈಗಾಗಲೇ 1 ಟಿಎಂಸಿ ನೀರು ಬಿಡಲಾಗಿದ್ದು, ಭೀಮಾ ಅಚ್ಚುಕಟ್ಟು ಪ್ರದೇಶ ಹಾಗು ಕಲಬುರಗಿ ಮಹಾನಗರಕ್ಕೆ ಒದಗಿಸುವ ನೀರನ್ನು ಪೂರೈಸಲು ಇನ್ನು 3 ಟಿಎಂಸಿ ನೀರನ್ನು ತುರ್ತಾಗಿ ಅದೇ ನಾರಾಯಣಪುರ ಅಣೆಕಟ್ಟನಿಂದಲೇ ಬಿಡುಗಡೆಗೊಳಿಸಬೇಕು. ಪ್ರಯುಕ್ತ ಈ ಎಲ್ಲ ಕಾರಣಕ್ಕಾಗಿ ಸಂಪುಟದ ಉಪಸಮಿತಿಯನ್ನು ರಚಿಸಿ ತಜ್ಞರ ಅಭಿಪ್ರಾಯ ಪಡೆದು ತಕ್ಷಣ ಕಾರ್ಯ ಪ್ರವೃತ್ತರಾಗಬೇಕು ಹಾಗೂ ರಾಜ್ಯ ಮಟ್ಟದ ಬರ ಎದುರಿಸಲು ರಾಜ್ಯ ವಿಪತ್ತು ನಿರ್ವಹಣಾ ಸಮಿತಿಯ ತುರ್ತು ಸಭೆ ಕರೆಯಬೇಕು ಎಂದು ಅವರು ಆಗ್ರಹಿಸಿದ್ದಾರೆ.

## ನಿಧನ ವಾರ್ತೆ ನಾಗೇಶ ಬೆಂಬುಳಗೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಚಿಕಲಿ(ಯು) ಗ್ರಾಮದ ನಾಗೇಶ ಪಂಚಯ್ಯ ಬೆಂಬುಳಗೆ (40) ಅವರು ಶುಕ್ರವಾರ ಬೆಳಿಗ್ಗೆ ಅನಾರೋಗ್ಯದ ಕಾರಣ ನಿಧನರಾದರು. ಅವರಿಗೆ ತಂದೆ-ತಾಯಿ, ಪತ್ನಿ, ಮೂವರು ಪುತ್ರಿಯರು, ಇಬ್ಬರೂ ಸಹೋದರರು ಸೇರಿದಂತೆ ಅಪಾರ ಬಂಧು ಬಳಗದಿಂದ ಅಗಲಿದ್ದಾರೆ. ಚಿಕಲಿ(ಯು) ಸ್ವ ಗ್ರಾಮದಲ್ಲಿ 6:36 ಗಂಟೆಗೆ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬ ಮೂಲದವರು ತಿಳಿಸಿದ್ದಾರೆ.

## ಅಲಂ ದರ್ಶನಕ್ಕಾಗಿ ವ್ಯವಸ್ಥಾಪಕ ಲಕ್ಷ್ಮಣ ಸಂಡೂರ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಐತಿಹಾಸಿಕ ಮೊಹರಂ ಹಬ್ಬ ಆಚರಣೆ ನಿಮಿತ್ಯ ಹಸನ್-ಹುಸೇನ್ ದರ್ಗಾಗಳಿಗೆ ಲಿಂಗಸಗೂರು ಕೆಎಸ್ ಆರ್‌ಟಿಸಿ ಘಟಕ ವ್ಯವಸ್ಥಾಪಕ ಲಕ್ಷ್ಮಣ ಸಂಡೂರ ಶುಕ್ರವಾರ ಭೇಟಿ ನೀಡಿ ದರ್ಶನ ಪಡೆದರು.

ಮೊಹರಂ ಹಬ್ಬದ ನಿಮಿತ್ಯ ಪಟ್ಟಣದ ಸಾರಿಗೆ ಬಸ್ ನಿಲ್ದಾಣದಲ್ಲಿ ಸಾರ್ವಜನಿಕರ ಸುಗಮ ಸಂಚಾರದ ವ್ಯವಸ್ಥೆಯನ್ನು ಪರಿಶೀಲನೆ ಮಾಡಿದರು. ಬಳಿಕ ದೇವರ ದರ್ಶನಕ್ಕಾಗಿ ಮೇಗಳ ಮೇಟೆ ಹಸನ್ ಅಲಂ ಹಾಗೂ ಕಿಲ್ಲಾ ಹುಸೇನಿ ಅಲಂ ದರ್ಗಾಗಳಿಗೆ ತೆರಳಿ ದರ್ಶನ ಪಡೆದರು. ಕಿಲ್ಲಾ ಹುಸೇನಿ ಆಲಂ ಆಶೂರ್ ಖಾನ ಕಮಿಟಿಯಿಂದ ಲಿಂಗಸಗೂರು ಕೆಎಸ್‌ಆರ್‌ಟಿಸಿ ಘಟಕ ವ್ಯವಸ್ಥಾಪಕ ಲಕ್ಷ್ಮಣ ಸಂಡೂರ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಹುಸೇನಿ ಆಲಂ ದರ್ಗಾ ಕಮಿಟಿ ಅಧ್ಯಕ್ಷ ಅಮೀರ್ ಬೇಗ್ ಉಸ್ತಾದ, ಉಪಾಧ್ಯಕ್ಷ ಮಸೂಮ್



ಷರೀಫ್, ಕಾರ್ಯದರ್ಶಿ ಮೊಹಮ್ಮದ್ ಸಾಧಿಕಲಿ, ಖಜಾಂಚಿ ಗಾಯಸುದ್ದಿನ್, ಸದಸ್ಯರಾದ ಖಾಜಾಸಾಬ್ ಮಂಡಿ, ಮಿರುಷಾ, ಶಂಶಾಲಾಂ ಹಳೆಪೇಟೆ, ಸದಸ್ಯ ಮೌಲಾಸಾಬ್ ಆನೆಮೂಡ್, ರಹಿಮಾನ ಸಾಬ್ ಅರಬ್ಬ ಸೇರಿದಂತೆ ಸ್ಥಳೀಯ ಕೆಎಸ್‌ಆರ್‌ಟಿಸಿ ಕಂಟ್ರೋಲರ್ ಜಾಫರ್ ಸಾಬ್, ಚಂದ್ರಶೇಖರ, ಸಿಬ್ಬಂದಿಗಳು ರಾಜಸಾಬ್, ಸಂಜಯ ಇದ್ದರು.

## 72,186 ಹುದ್ದೆಗಳ ಭರ್ತಿ: ರಾಜ್ಯ ಸರ್ಕಾರದ ಕ್ರಮಕ್ಕೆ ಎಐಡಿಎಸ್‌ಓ ಸ್ವಾಗತ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ರಾಜ್ಯ ಸರ್ಕಾರ 72,186 ಹುದ್ದೆಗಳ ಭರ್ತಿಗೆ ಮುಂದಾಗಿದ್ದು, 6 ತಿಂಗಳ ನಿಗದಿತ ಕಾಲಮಿತಿಯೊಳಗೆ ನೇಮಕಾತಿಗಳನ್ನು ಪೂರ್ಣಗೊಳಿಸಲು ಹಾಗೂ ಇದರ ಉಸ್ತುವಾರಿಗೆ ರಾಜ್ಯಮಟ್ಟದ ಅಧಿಕಾರಿಗಳನ್ನು ನೇಮಿಸಿರುವುದನ್ನು ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯಿಂದ ಸ್ವಾಗತಿಸುತ್ತೇವೆ.



ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯ (ಎಂಖಅ) ನೇತೃತ್ವದಲ್ಲಿ ಕಳೆದ ಸೆಪ್ಟೆಂಬರ್ ತಿಂಗಳಿನಿಂದ ಧಾರವಾಡದಿಂದ ಆರಂಭವಾದ ಹೋರಾಟ ರಾಜ್ಯವ್ಯಾಪಿ ವಿಸ್ತರಿಸಿ ಬಲಿಷ್ಠವಾಗಿ ರೂಪುಗೊಂಡ ಪ್ರತಿಫಲವಾಗಿ ಸರ್ಕಾರ ಹುದ್ದೆಗಳ ಭರ್ತಿಗೆ ಮುಂದಾಗಿದೆ ಎಂದು ಎಐಡಿಎಸ್‌ಓ ಜಿಲ್ಲಾಧ್ಯಕ್ಷ ಜಗನ್ನಾಥ ಎಸ್.ಹೆಚ್. ಅವರು ಸಂತೋಷ ವ್ಯಕ್ತಪಡಿಸಿದ್ದಾರೆ.

ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯ ಸಲಹೆಗಾರರಾದ ಮಾಜಿ ಲೋಕಾಯುಕ್ತರಾದ ಜಸ್ಟಿಸ್ ಸಂತೋಷ್ ಹೆಗ್ಡೆ, ಹಿರಿಯ ಸಾಮಾಜಿಕ ಹೋರಾಟಗಾರರಾದ ಎಸ್. ಆರ್. ಹಿರೇಮಠ್, ರಾಮಾಂಜನಪ್ಪ ಆಲ್ದಳ್ಳಿ, ಡಾ. ಜಿ. ಶಶಿಕುಮಾರ್ ಅವರ ಮಾರ್ಗದರ್ಶನದಲ್ಲಿ ಈ ಹೋರಾಟ ಗಟ್ಟಿ ವೈಚಾರಿಕ ತಳಹದಿಯ ಮೇಲೆ ರೂಪುಗೊಂಡಿತ್ತು. ಈ ಹೋರಾಟದ ಸಂದರ್ಭದಲ್ಲಿ ಸರ್ಕಾರ ಪೊಲೀಸರ ಮೂಲಕ ಹೋರಾಟಗಳನ್ನು ಹತ್ತಿಕ್ಕಲು ಪ್ರಯತ್ನಿಸಿದಾಗಲೂ ಉದ್ಯೋಗಾಕಾಂಕ್ಷಿಗಳು ಹೋರಾಟ ಸಮಿತಿಯ ನೇತೃತ್ವದಲ್ಲಿ ಸಮರಶೀಲ ಹೋರಾಟಗಳನ್ನು ನಡೆಸಿದ್ದರು. ಪೊಲೀಸರು ಹೋರಾಟ ಸಮಿತಿಯ ನಾಯಕರನ್ನು ಹಲವು ಸಲ ಬಂಧಿಸಿದ್ದರು, ಪ್ರಕರಣಗಳನ್ನೂ ದಾಖಲಿಸಿದ್ದರು. ವಿಜಯಪುರ, ಬೆಳಗಾವಿ, ಕಲಬುರ್ಗಿ, ರಾಯಚೂರು, ಯಾದಗಿರಿ, ಕೊಪ್ಪಳ, ವಿಜಯನಗರ, ಬಳ್ಳಾರಿ, ಮೈಸೂರು, ಹಾಸನ, ಮಂಡ್ಯ, ಚಾಮರಾಜನಗರ ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ನಿರಂತರವಾಗಿ ನಡೆದ ಹೋರಾಟಗಳು ಸರ್ಕಾರದ ಮೇಲೆ ತೀವ್ರ ಒತ್ತಡವನ್ನು ಸೃಷ್ಟಿಮಾಡಿವೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಈಗ ರಾಜ್ಯಸರ್ಕಾರ ಮತ್ತೆ ಯಾವುದೇ ಕುಂಟು ನೆಪಗಳನ್ನು ನೀಡದೇ ಕೂಡಲೇ ಈ ಎಲ್ಲಾ ಹುದ್ದೆಗಳಿಗೆ ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸಬೇಕು, ಎಲ್ಲಾ ರೀತಿಯ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಿ, ಪಾರದರ್ಶಕ ನೇಮಕಾತಿಗಾಗಿ ಕೆಪಿಎಸ್ಸಿಯನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಲು ಪಿ.ಸಿ. ಹೋಟಾ ಸಮಿತಿಯ ವರದಿಯನ್ನು ತಕ್ಷಣವೇ ಜಾರಿಗೊಳಿಸಬೇಕು. ಈಗ ಅರ್ಜಿ ಕರೆದಿರುವ ಪೊಲೀಸ್ ನೇಮಕಾತಿ ಸೇರಿದಂತೆ ಎಲ್ಲಾ ನೇಮಕಾತಿಗಳ ದುಬಾರಿ ಅರ್ಜಿ ಶುಲ್ಕವನ್ನು ಕೈಬಿಡಬೇಕು ಹಾಗೂ ನೇಮಕಾತಿ ಪರೀ-ಕ್ಷೆ ಸಂದರ್ಭದಲ್ಲಿ ಅಭ್ಯರ್ಥಿಗಳಿಗೆ ಉಚಿತ ಸಾರಿಗೆ ಒದಗಿಸಬೇಕು ಎಂದು ಈ ಮೂಲಕ ಅಗ್ರಹಿಸುತ್ತೇವೆ. ಅದೇರೀತಿ ಸರ್ಕಾರವು ಅನುಮೋದನೆ ನೀಡಿದ ಎಲ್ಲಾ ಹುದ್ದೆಗಳಿಗೂ ಅಧಿಸೂಚನೆ ಹೊರಡಿಸುವವರೆಗೂ ಉದ್ಯೋಗಾಕಾಂಕ್ಷಿಗಳು ಎಚ್ಚರದಿಂದಿರಬೇಕು ಹಾಗೂ ರಾಜ್ಯಸರ್ಕಾರ ನುಡಿದಂತೆ ನಡೆದುಕೊಳ್ಳದಿದ್ದರೆ ಉದ್ಯೋಗಾಕಾಂಕ್ಷಿಗಳು ಮತ್ತೆ ಸಂಘಟಿತ ಹೋರಾಟಕ್ಕೆ ಸಜ್ಜಾಗಬೇಕು ಎಂದು ಅವರು ಎಚ್ಚರಿಕೆಯನ್ನೂ ಸಹ ನೀಡಿದ್ದಾರೆ.



## ಮಂಜಗುಣಿಯಲ್ಲಿ ತಾರಿಜಟಕ ದೇವರ ಅವಾರಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ತಾಲೂಕಿನ ಮಂಜಗುಣಿಯ ಶ್ರೀ ತಾರಿಜಟಕ ದೇವರ ಅವಾರಿಯು ಜುಲೈ 7 ರಂದು ನಡೆಯಲಿದೆ. ಜೂನ್ ಕೊನೆಯಲ್ಲಿ ಅಥವಾ ಜುಲೈ ಮೊದಲ ವಾರದಲ್ಲಿ ಪ್ರತಿವರ್ಷ ಅವಾರಿ ನಡೆಯುವುದು ವಾಡಿಕೆಯಾಗಿದೆ. ಅದರಂತೆ ಈ ಬಾರಿ ಜು. 7 ರಂದು ಅವಾರಿ ಹಮ್ಮಿಕೊಂಡಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಹರಕೆ ತೀರಿಸಬೇಕಾಗಿ ದೇವಸ್ಥಾನದ ಆಡಳಿತ ಮಂಡಳಿಯವರು ವಿನಂತಿಸಿದ್ದಾರೆ.

# ಸಂಸದ ಈ. ತುಕಾರಾಂಗೆ ಜನ್ಮದಿನದ ಶುಭಾಶಯ ಕೋರಿದ ಮಾಧ್ಯಮ ವಕ್ತಾರ ವೆಂಕಟೇಶ್ ಹೆಗಡೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ–ವಿಜಯನಗರ ಲೋಕಸಭಾ ಕ್ಷೇತ್ರದ ಸಂಸದ ಈ.ತುಕಾರಾಂ ಅವರ ಜನ್ಮದಿನದ ಅಂಗವಾಗಿ ಮಾಧ್ಯಮ ವಕ್ತಾರ ವೆಂಕಟೇಶ್ ಹೆಗಡೆ ಅವರು ಹೃತ್ಪೂರ್ವಕ ಶುಭಾಶಯಗಳನ್ನು ಕೋರಿದರು.



ಈ ಸಂದರ್ಭದಲ್ಲಿ ಮಾತನಾಡಿದ ವೆಂಕಟೇಶ್ ಹೆಗಡೆ, "ಸಂಸದ ಈ. ತುಕಾರಾಂ ಅವರು ಜನಪರ ಕಾಳಜಿ, ಸರಳತೆ ಮತ್ತು ಅಭಿವೃದ್ಧಿಪರ ಚಿಂತನೆಯ ಮೂಲಕ ಕ್ಷೇತ್ರದ ಜನರ ವಿಶ್ವಾಸವನ್ನು ಗಳಿಸಿದ್ದಾರೆ. ಅವರ ನೇತೃತ್ವದಲ್ಲಿ ಬಳ್ಳಾರಿ–ವಿಜಯನಗರ ಭಾಗ ಇನ್ನಷ್ಟು ಅಭಿವೃದ್ಧಿಯತ್ತ ಸಾಗಲಿ. ಅವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ಜನಸೇವೆಗೆ ಇನ್ನಷ್ಟು ಶಕ್ತಿ ದೊರೆಯಲಿ" ಎಂದು ಹಾರೈಸಿದರು.

ಸಂಸದರ ಜನ್ಮದಿನದ ಅಂಗವಾಗಿ ಅವರ ಅಭಿಮಾನಿಗಳು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಶುಭಾಶಯಗಳನ್ನು ಸಲ್ಲಿಸಿ, ಅವರ ಸಾರ್ವಜನಿಕ ಸೇವೆಯನ್ನು ಸ್ಮರಿಸಿದರು.

# ವಿನಾಯಕನಗರದಲ್ಲಿ ಅದ್ದೂರಿಯಾಗಿ ನಡೆದ ಮೊಹರಂ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ 33 ವಾರ್ಡು ವಿನಾಯಕನಗರದಲ್ಲಿ ಮೊಹರಂ ಹಬ್ಬವನ್ನು ಭಕ್ತಿಭಾವ, ಶಾಂತಿ ಮತ್ತು ಸೌಹಾರ್ದತೆಯ ವಾತಾವರಣದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು. ಮೊಹರಂ ಅಂಗವಾಗಿ ಸ್ಥಳೀಯ ಅಶೂರ್ ಖಾನೆ ಹಾಗೂ ಧಾರ್ಮಿಕ ಕೇಂದ್ರಗಳಲ್ಲಿ ವಿಶೇಷ ಪ್ರಾರ್ಥನೆ, ದುಆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಹಬ್ಬದ ಅಂಗವಾಗಿ ಇಮಾಮ್ ಹುಸೇನ್ ಅವರ ತ್ಯಾಗ, ಸತ್ಯ, ನ್ಯಾಯ ಮತ್ತು ಮಾನವೀಯ ಮೌಲ್ಯಗಳನ್ನು ಸ್ಮರಿಸಲಾಯಿತು. ಧಾರ್ಮಿಕ ಮುಖಂಡರು ಮೊಹರಂ ಹಬ್ಬದ ಮಹತ್ವವನ್ನು ವಿವರಿಸಿ, ಸಮಾಜದಲ್ಲಿ ಶಾಂತಿ, ಸಹೋದರತ್ವ ಹಾಗೂ ಪರಸ್ಪರ ಗೌರವದ ಸಂದೇಶವನ್ನು ಸಾರಿದರು.ರಾತ್ರಿ ವೇಳೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಧಾರ್ಮಿಕ ವಿಧಿವಿಧಾನಗಳಲ್ಲಿ ಪಾಲ್ಗೊಂಡರು. ವಿವಿಧ ಪ್ರದೇಶಗಳಿಂದ ಆಗಮಿಸಿದ ಭಕ್ತರು ಪ್ರಾರ್ಥನೆ ಸಲ್ಲಿಸಿ, ಸಮಾಜದ ಸುಖ–ಶಾಂತಿ ಹಾಗೂ ಸಮೃದ್ಧಿಗಾಗಿ ದೇವರಲ್ಲಿ ಬೇಡಿಕೊಂಡರು. ತಾಜಿಯಾ ಮೆರವಣಿಗೆಗೆ ಅಗತ್ಯ ಸಿದ್ಧತೆಗಳನ್ನು ಸಹ ಕೈಗೊಳ್ಳಲಾಗಿತ್ತು.

ಹಬ್ಬದ ಹಿನ್ನೆಲೆಯಲ್ಲಿ ಸ್ಥಳೀಯ ಯುವಕರು ಹಾಗೂ ಸಂಘಟನೆಗಳು ಕುಡಿಯುವ ನೀರು, ಶರಬತ್ ಮತ್ತು ಅಗತ್ಯ ಸೇವೆಗಳ ವ್ಯವಸ್ಥೆ ಮಾಡಿದ್ದು, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿದರು. ಕಾರ್ಯಕ್ರಮದಲ್ಲಿ ವಿವಿಧ ಸಮುದಾಯಗಳ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿ, ಸಾಮರಸ್ಯ ಮತ್ತು ಐಕ್ಯತೆಯ ಸಂದೇಶವನ್ನು ಬಲಪಡಿಸಿದರು.

ಹಬ್ಬವು ಯಾವುದೇ ಅಹಿತಕರ ಘಟನೆಗಳಿಲ್ಲದೆ ಶಾಂತಿಯುತವಾಗಿ ನೆರವೇರಿತು. ಸ್ಥಳೀಯ ಆಡಳಿತ ಹಾಗೂ ಪೊಲೀಸ್ ಇಲಾಖೆ ಅಗತ್ಯ ಭದ್ರತಾ ಕ್ರಮಗಳನ್ನು ಕೈಗೊಂಡಿದ್ದು, ಸಾರ್ವಜನಿಕರು ಸಹ ಉತ್ತಮ ಸಹಕಾರ ನೀಡಿದರು. ಒಟ್ಟಾರೆ ವಿನಾಯಕ ನಗರದಲ್ಲಿ ಮೊಹರಂ ಹಬ್ಬವು ಧಾರ್ಮಿಕ ಭಕ್ತಿ, ಸಾಮಾಜಿಕ ಸಾಮರಸ್ಯ ಮತ್ತು ಸಹೋದರತ್ವದ ಸಂಕೇತವಾಗಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

# ಬಳ್ಳಾರಿ: ಸಿದ್ಧ ಉಡುಪು ಸಂಶೋಧನೆ ತರಬೇತಿ ವಿನ್ಯಾಸ ಮತ್ತು ಅಭಿವೃದ್ಧಿ ಕೇಂದ್ರದಲ್ಲಿ ಬಿ.ಎಸ್ಸಿ ಪದವಿ ಕೋರ್ಸ್ ಪ್ರವೇಶಾತಿ ಆರಂಭ

ಮಲ್ಲಮ್ಮನುಡಿವಾರ್ತೆ ಬಳ್ಳಾರಿ

ಕರ್ನಾಟಕ ಸರ್ಕಾರದ ಕೈಮಗ್ಗ ಮತ್ತು ಜವಳಿ ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಳ್ಳಾರಿಯ 'ಸಿದ್ಧ ಉಡುಪು ಸಂಶೋಧನೆ ತರಬೇತಿ ವಿನ್ಯಾಸ ಮತ್ತು ಅಭಿವೃದ್ಧಿ ಕೇಂದ್ರ' (ಜಿ.ಆರ್.ಟಿ.ಡಿ.ಸಿ) ಸಂಸ್ಥೆಯಲ್ಲಿ 2026–27ನೇ ಸಾಲಿನ ಪ್ರಥಮ ವರ್ಷದ ಬಿ.ಎಸ್ಸಿ (ಗಾರ್ಮೆಂಟ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಾಲಜಿ) ವೃತ್ತಿಪರ ಪದವಿ ಕೋರ್ಸ್‌ಗಳ ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭವಾಗಿದೆ ಎಂದು ಸಂಸ್ಥೆಯ ಪ್ರಾಂಶುಪಾಲರು ತಿಳಿಸಿದ್ದಾರೆ.

ಈ ಸಂಸ್ಥೆಯು 2009ರಲ್ಲಿ ಪ್ರಾರಂಭವಾಗಿದ್ದು, 2011 ರಿಂದ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಮಾನ್ಯತೆ ಪಡೆದಿದೆ. ಇಲ್ಲಿ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು ರಾಜ್ಯದ ಪ್ರತಿಷ್ಠಿತ ಗಾರ್ಮೆಂಟ್ಸ್ ಕಂಪನಿಗಳಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ಹಾಗೂ ಉನ್ನತ ಶಿಕ್ಷಣವನ್ನು ಪಡೆದುಕೊಂಡಿರುತ್ತಾರೆ.

*ಪ್ರವೇಶಾತಿಯ ಅರ್ಹತೆಗಳು:*

ದ್ವಿತೀಯ ಪಿ.ಯು.ಸಿ (ಕಲೆ, ವಾಣಿಜ್ಯ, ವಿಜ್ಞಾನ, ಶಿಕ್ಷಣ) ಅಥವಾ ಯಾವುದೇ ಡಿಪ್ಲೋಮಾ ವಿಭಾಗದಲ್ಲಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳು ಪ್ರಥಮ ವರ್ಷದ ಬಿ.ಎಸ್ಸಿ ಪದವಿ ಕೋರ್ಸ್‌ಗೆ ಸೇರಲು ಅರ್ಹರಾಗಿರುತ್ತಾರೆ.

ಡಿಪ್ಲೋಮಾ ಇನ್ ಫ್ಯಾಷನ್ ಡಿಸೈನಿಂಗ್, ಡಿಪ್ಲೋಮಾ ಇನ್ ಟೆಕ್ಸ್‌ಟೈಲ್ಸ್, ಡಿಪ್ಲೋಮಾ ಇನ್ ಎ.ಡಿ.ಎಫ್.ಟಿ ವಿಭಾಗದಲ್ಲಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳು ನೇರವಾಗಿ ಎರಡನೇ ವರ್ಷದ ಬಿ.ಎಸ್ಸಿ ಪದವಿ ಕೋರ್ಸ್‌ಗೆ ಪ್ರವೇಶ ಪಡೆಯಬಹುದು.

ಆಸಕ್ತ ವಿದ್ಯಾರ್ಥಿಗಳು ಯು.ಯು.ಸಿ.ಎಂ.ಎಸ್ ಪೋರ್ಟಲ್‌ನ ಅಧಿಕೃತ ಲಿಂಕ್: https://uucms.karnataka.gov.in/Login/OnlineStudentRegistrationForm ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

*ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:*

ಪ್ರಾಂಶುಪಾಲರು, ಜಿ.ಆರ್.ಟಿ.ಡಿ.ಸಿ ಕಾಲೇಜು, ಜಿಲ್ಲಾ ಕ್ರೀಡಾಂಗಣ ಮೈದಾನ ರಸ್ತೆ, ಮೊದಲನೇ ರೈಲ್ವೆ ಗೇಟ್ ಹತ್ತಿರ, ನಲ್ಲಚೆರುವು, ಬಳ್ಳಾರಿ.

ಬೋಧಕ ಸಿಬ್ಬಂದಿಗಳ ಫೋನ್ ಸಂಖ್ಯೆ: 9741264655, 9844862576, 9844474235, 8123126127 ಕ್ಕೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬಲ್ಡೋಟ ಸ್ಥಾಪಿಸಿ ಸರ್ಕಾರಿ ನೌಕರಿ ಕೊಡಿ ಸಿಎಂ ಗೆ ಶಿವಕುಮಾರ್ ಹಾಲವರ್ತಿ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಪಟ್ಟಣದಲ್ಲಿ ಬಲ್ಡೋಟ ಸ್ಟೀಲ್ ಪವರ ಲಿಮಿಟೆಡ್ ಕಂಪನಿಯ ಉಕ್ಕಿನ ಕಾರ್ಖಾನೆ ಸ್ಥಾಪನೆ ಮಾಡಬೇಕೆಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಮುನಿರಾಬಾದ್ ನಲ್ಲಿ ನಡೆದ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟ್ ಉದ್ಘಾಟನೆ ಕಾರ್ಯಕ್ರಮದಲ್ಲಿ ಮನವಿ ಸಲ್ಲಿಸಲಾಯಿತು. ಕೊಪ್ಪಳ ಜಿಲ್ಲೆ ಹಿಂದುಳಿದ ಜಿಲ್ಲೆಯಾಗಿದ್ದು ಈಗ ತಾನೇ ಉದ್ಯೋಗಿಕರಣದತ್ತ ದಾಪುಗಾಲುಡುತ್ತಿದ್ದು ಹಾಗೂ ಇದ–ರಿಂದ ಜಿಲ್ಲೆಯ ಅಭಿವೃದ್ಧಿಯಾಗುತ್ತಿದ್ದು ಇಂತಹ ಕಾರ್ಖಾನೆಗಳು ನಮ್ಮ ಕೊಪ್ಪಳ ಜಿಲ್ಲೆಗೆ ಬರುವುದರಿಂದ ವಾಣಿಜ್ಯ ಉದ್ಯಮಿಗಳ ವ್ಯವಾಟುಗಳು ನಿರುದ್ಯೋಗಿಗಳಿಗೆ ಉದ್ಯೋಗ ಶಾಲಾ–ಕಾಲೇಜುಗಳಿಗೆ ಅಭಿವೃದ್ಧಿ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಆರ್ಥಿಕವಾಗಿ ಮತ್ತು ಶೈಕ್ಷಣಿಕ ಬೆಳವಣಿಗೆ ಹಾಗುವುದರಲ್ಲಿ ಸಂದೇಹವಿಲ್ಲ ಎಂದು ಹೇಳಿದರು.



ಈಗಾಗಲೇ ಬೊಲ್ಡೋಟ ಸಮೂಹದ ಅಂಗ ಸಂಸ್ಥೆಯಾಗಿರುವ ಎಂ ಎಸ್ ಪಿ ಎಲ್ ಲಿಮಿಟೆಡ್ ಕಂಪನಿಯು 1.20 ಎಮ್ ಟಿ.ಪಿ.ಎ ಐರನ್ ಒರ್ ಬೆನಿಫಿಕೇಷನ್ ಮತ್ತು ಪ್ಲೆಲೇಟೇಷನ್ ಅನ್ನು ಸದರಿ ಕೊಪ್ಪಳ ಜಿಲ್ಲೆಯಲ್ಲಿ ತಯಾರಿಸುತ್ತಿದ್ದು ಈಗ ಅಗತ್ಯವಿರುವ ಮಾಲಿನ್ಯ ನಿಯಂತ್ರಣ ಉಪಕರಣಗಳನ್ನು ಅಳವಡಿಸಿದ್ದು ಈ ಸಂಸ್ಥೆಯಿಂದ ಧೂಳು ಮತ್ತು ಪರಿಸರ ಮಾಲಿನ್ಯ ಹತೋಟಿಯಲ್ಲಿರುತ್ತದೆ. ಇದಲ್ಲದೆ ಎಂ ಎಸ್ ಪಿ ಎಲ್ ಸಂಸ್ಥೆ ಬಹಳಷ್ಟು ಜನ ಉಪಯೋಗಿ ಕಾರ್ಯಕ್ರಮಗಳನ್ನು ತಮ್ಮ ಕಂಪನಿಯು ಸಿಎಸ್‌ಆರ್ ಇಲಾಖೆಯ ಮುಖಾಂತರ ಫಲಾನುಭವಿಗಳಿಗೆ ತಲುಪುವಂತೆ ಮಾಡುತ್ತಿದ್ದು ವಿಶೇಷವಾಗಿ ಈ ಕೆಳಗೆ ಕಾಣಿಸಿದ ಕಂಪನಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳೆಂದರೆ ವಿದ್ಯಾಭ್ಯಾಸ, ಮಹಿಳಾ ಸಬಲೀಕರಣ ಸಸಿ ನೆಡುವುದು, ಶೌಚಾಲಯ ನಿರ್ಮಾಣ, ಕೌಶಲ್ಯ ಅಭಿವೃದ್ಧಿ, ಮುಂದುವರೆದಿದ್ದು ಈ ಸಂಸ್ಥೆಯು ಜಾತ್ರಾ ಮತ್ತು ಸಾಮಾಜಿಕ ಕಾರ್ಯಕ್ರಮಗಳಿಗೆ ವಿವಿಧ ಗ್ರಾಮಗಳಿಗೆ ನೀರನ್ನು ತಮ್ಮ ಸ್ವಂತ ಖರ್ಚಿನಿಂದ ಒದಗಿಸುತ್ತಾ ಬಂದಿದ್ದು ಕೊಪ್ಪಳ ಜಿಲ್ಲೆಯಲ್ಲಿರುವ ರೈತರ ಜಮೀನನ್ನು ಸದರಿ ಕಂಪನಿಯು ಉಕ್ಕಿನ ಕಾರ್ಖಾನೆ ನಿರ್ಮಿಸಲು ಕೆ.ಐ.ಎ.ಡಿ.ಬಿ ಮೂಲಕ ಗ್ರಾಮಸ್ಥರ ಒಪ್ಪಿಗೆ ಪಡೆದು ಭೂ ಸ್ವಾದಿನ ಪಡಿಸಿಕೊಂಡು ಕಳೆದ ಹತ್ತು ವರ್ಷಗಳಲ್ಲಿ ರೈತರ ಮಕ್ಕಳು ವಿದ್ಯಾಭ್ಯಾಸ ಮುಗಿಸಿ ಪದವೀಧರರಾಗಿದ್ದು ಸುತ್ತಮುತ್ತಲಿನ ಗ್ರಾಮದ ಜನರು ಈ ಉಕ್ಕಿನ ಕಾರ್ಖಾನೆ ಸುದಿನಕ್ಕಾಗಿ ಕಾಯುತ್ತಿದ್ದಾರೆ. ಬಲ್ಡೋಟ ಕಂಪನಿಯು ಈ ತಿಂಗಳಲ್ಲಿ ನಡೆದ ಕರ್ನಾಟಕ ಸರ್ಕಾರದ ಬಂಡವಾಳ ಶಾಹಿಗಳ ಸಭೆಯಲ್ಲಿ ಹುಕ್ಕು ಕಾರ್ಖಾನೆ ಸ್ಥಾಪಿಸಲು 54,000 ಕೋಟಿ ರೂಪಾಯಿಗಳ ಬಂಡವಾಳ ಹೂಡಿಕೆ ಮತ್ತು 15,000 ಜನರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸುವ ತಮ್ಮ ನಿರ್ಧಾರವನ್ನು ಕಂಪನಿಯು ನಿರ್ಧಾರ ಪ್ರಕಟಿಸಿದೆ ಎಂದು ಸ್ವಾಮಿ ಹಾಲವರ್ತಿ ಪತ್ರಿಕೆಗೆ ತಿಳಿಸಿದ್ದಾರೆ.

# ಈಚನಾಳದಲ್ಲಿ ಶಾಂತಿ ಸೌಹಾರ್ದ ಸಂಕೇತ ಮೊಹರಂ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಜೂ. 26.– ಹಿಂದೂ ಮುಸ್ಲಿಮರು ಸೇರಿ ಜಾತಿ ಭೇದ ಭಾವವಿಲ್ಲದೆ ಭಾವೈಕ್ಯತೆಯ ಶಾಂತಿ ಸೌಹಾರ್ದತೆಯಿಂದ ಆಚರಿಸಲ್ಪಡುವ ಮೊಹರಂ ಹಬ್ಬವನ್ನು ತಾಲೂಕಿನ ಈಚನಾಳ ಗ್ರಾಮದಲ್ಲಿ ಹಿಂದೂ ಮುಸ್ಲಿಮರು ಸೇರಿ ಶ್ರದ್ಧಾ ಭಕ್ತಿಯಿಂದ ಮೊಹರಂ ಹಬ್ಬವನ್ನು ಆಚರಣೆ ಮಾಡಿದರು.



ಗ್ರಾಮದಲ್ಲಿ ಗುರುವಾರ ಆಲಂ ಪೀರಾಗಳಾದ ಹಸನ್ ಹುಸೇನ ಪೀರಾಗಳಿಗೆ ಭಕ್ತರು ಶ್ರದ್ಧಾ ಭಕ್ತಿ ಭಾವದಿಂದ ಪೀರಾಗಳಿಗೆ ದಟ್ಟಿ ಹೂವು ಉತ್ತತ್ತಿ ಕೊಬ್ಬರಿ ಸರಗಳನ್ನು ಹಾಕಿ ವಿವಿಧ ರೀತಿಯಲ್ಲಿ ಅಲಂಕರಿಸಿ ಹರಕೆ ಹೊತ್ತವರು ಬೆಳ್ಳಿಯ ಕುದುರೆ, ಛತ್ರಿ, ಅರ್ಪಿಸಿ ತಮ್ಮ ಹರಕೆ ತೀರಿಸಿದರೆ ಕೆಲವರು ಕಂದೂರಿ ಮಾಡಿ ನೈವೇದ್ಯ ಅರ್ಪಿಸಿ ಭಕ್ತಿ ಮೆರೆದರು. ಗುರುವಾರ ರಾತ್ರಿ ಹಸನ್ ಹುಸೇನ್ ಪಿರಾಗಳ ಸವಾರಿ ಜರುಗಿತು. ಗ್ರಾಮದ ನೂರಾರು ಯುವಕರು ಆಲಾಯಿ ಕುಣಿಯ ಸುತ್ತಲೂ ಹಲಗೆ ಮತ್ತು ನಗಾರಿ ಬಾರಿಸುತ್ತಾ ಹೆಜ್ಜೆ ಕುಣಿಯುತ್ತ ಸಾಗುವ ದೃಶ್ಯ ಜರುಗಿತು.

ಮೊಹರಂ ಹಬ್ಬದ ಕೊನೆಯ ದಿನವಾದ ಶುಕ್ರವಾರದಂದು ಆಲಂ ದೇವರುಗಳು ಪರಸ್ಪರ ಮುಖಾಮುಖಿಯಾಗುವ ಕೊನೆಯ ಗಳಿಗೆ ಸಂದರ್ಭದಲ್ಲಿ ಸೇರಿದ ಸಾವಿರಾರು ಭಕ್ತರ ಕಣ್ಣಂಚಿನಲ್ಲಿ ನೀರು ತರಿಸಿದ ದೃಶ್ಯ ಕಂಡುಬಂದಿತು. ಈ ಸಂದರ್ಭದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಜನ ಸೇರಿ ಆಲಂ ದೇವರುಗಳ ದರ್ಶನ ಪಡೆದರು.

# ಬಳ್ಳಾರಿ ಗ್ರಾಮಾಂತರ: ಅಂಗನವಾಡಿ ಕಂ-ಕ್ರಷ್ ಕೇಂದ್ರಗಳ ಹುದ್ದೆಗಳಿಗೆ ಆಫ್‌ಲೈನ್ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ 'ಮಿಷನ್ ಶಕ್ತಿ' ಯೋಜನೆಯಡಿ ಬಳ್ಳಾರಿ (ಗ್ರಾಮಾಂತರ) ವ್ಯಾಪ್ತಿಯಲ್ಲಿ ಹೊಸದಾಗಿ 06 ಅಂಗನವಾಡಿ ಕಂ–ಕ್ರಷ್ ಕೇಂದ್ರಗಳು ಮಂಜೂರಾಗಿವೆ. ಈ ಕೇಂದ್ರಗಳಲ್ಲಿ ಖಾಲಿ ಇರುವ ಕ್ರಷ್ ಕಾರ್ಯಕರ್ತೆ ಮತ್ತು ಕ್ರಷ್ ಸಹಾಯಕಿಯರ ಗೌರವ ಸೇವೆ ಹುದ್ದೆಗಳ ಭರ್ತಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.*ಅರ್ಜಿ ಪಡೆಯುವ ಮತ್ತು ಸಲ್ಲಿಸುವ ಸ್ಥಳ:*ಎಸ್‌ಪಿ ಸರ್ಕಲ್ ಹತ್ತಿರ ಇರುವ ಬಳ್ಳಾರಿ (ಗ್ರಾಮಾಂತರ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಬೆಳಿಗ್ಗೆ 10.30 ರಿಂದ ಸಂಜೆ 5.30 ರ ಒಳಗಾಗಿ ಅರ್ಜಿ ಸಲ್ಲಿಸಬೇಕು. ಜುಲೈ 18 ಅರ್ಜಿ ಸಲ್ಲಿಸಲು ಕೊನೆಯ ದಿನ.ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ನಿಗದಿತ ಕಚೇರಿಗೆ ಭೇಟಿ ನೀಡಿ, ನಿಗದಿಪಡಿಸಿದ ನಮೂನೆಯ ಅರ್ಜಿಗಳನ್ನು ಪಡೆದುಕೊಂಡು, ಸೂಕ್ತ ದಾಖಲಾತಿಗಳೊಂದಿಗೆ ನಿಗದಿತ ದಿನಾಂಕದೊಳಗೆ ಅರ್ಜಿಯನ್ನು ಸಲ್ಲಿಸಲು ಕೋರಲಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

# ಬಳ್ಳಾರಿ ಜಿಲ್ಲಾದ್ಯಂತ ಪೊಲೀಸ್ ಬಂದೋಬಸ್ತಿನಲ್ಲಿ ಭಕ್ತಿಭಾವದಿಂದ ಮೊಹರಂ ಆಚರಣೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ಜಿಲ್ಲಾದ್ಯಂತ ಮೊಹರಂ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಧಾರ್ಮಿಕ ಭಾವನೆಯೊಂದಿಗೆ ಭಕ್ತರು ಶ್ರದ್ಧಾಭಕ್ತಿಯಿಂದ ಆಚರಿಸಿದರು. ಜಿಲ್ಲೆಯ ವಿವಿಧ ದರ್ಗಾಗಳು, ಆಶೂರ್ ಖಾನಾಗಳಲ್ಲಿ ವಿಶೇಷ ಪ್ರಾರ್ಥನೆಗಳು, ಧಾರ್ಮಿಕ ವಿಧಿವಿಧಾನಗಳು ಹಾಗೂ ಮೆರವಣಿಗೆಗಳು ಭಕ್ತಿಭಾವದಿಂದ ನೆರವೇರಿದವು. ನೂತನವಾಗಿ ಬಂದ ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠ ಅಧಿಕಾರಿಗಳು ಸುಮನ್ ಡಿ ಪನ್ನೇರ್ ಜಿಲ್ಲಾಯಲ್ಲಿ ಯಾವುದೇ ಗೊಂದಲಕ್ಕೆ ಸೃಷ್ಟಿ ಆಗಬಾರದು ಎಂದು ಆದೇಶ ಇನ್ನಲೇ ಮೋಹರಂ ಹಬ್ಬ ಆಚರಣೆ ಸೌಹಾರ್ದತೆಯಿಂದ ನಡೆದಿದೆ ಎಂದು ತಿಳಿದು ಬಂದಿದೆ .

ಹಬ್ಬದ ಅಂಗವಾಗಿ ವಿವಿಧ ಸಮುದಾಯಗಳ ಮುಖಂಡರು ಹಾಗೂ ಸಾರ್ವಜನಿಕರು ಪರಸ್ಪರ ಹೊಂದಾಣಿಕೆ ಮತ್ತು ಸಹಕಾರದಿಂದ ಹಬ್ಬವನ್ನು ಯಶಸ್ವಿಯಾಗಿ ಆಚರಿಸಿ ಸಾಮರಸ್ಯದ ಸಂದೇಶ ಸಾರಿದರು. ಮೆರವಣಿಗೆಗಳಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಂಪ್ರದಾಯದಂತೆ ಧಾರ್ಮಿಕ ಆಚರಣೆಗಳನ್ನು ನಡೆಸಿದರು.

ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಜಿಲ್ಲಾ ಪೊಲೀಸ್ ಇಲಾಖೆ ಜಿಲ್ಲೆಯಾದ್ಯಂತ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿತ್ತು. ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚುವರಿ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಿ, ಶಾಂತಿ ಕಾಪಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿವಿಧ ಊರಿನ ಮುಖಂಡರ ನಡುವಿನ ಸಮನ್ವಯದಿಂದ ಮೊಹರಂ ಆಚರಣೆ ಯಾವುದೇ ಅಡಚಣೆಯಿಲ್ಲದೆ ಶಾಂತಿಯುತವಾಗಿ ನಡೆಯಿತು.

ಸಾರ್ವಜನಿಕರು ಸಹ ಶಾಂತಿ, ಸೌಹಾರ್ದತೆ ಮತ್ತು ಸಹಕಾರದಿಂದ ಹಬ್ಬದಲ್ಲಿ ಭಾಗವಹಿಸಿದ್ದರಿಂದ ಜಿಲ್ಲೆಯಾದ್ಯಂತ ಮೊಹರಂ ಆಚರಣೆ ಯಶಸ್ವಿಯಾಗಿ ನೆರವೇರಿತು. ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಸಾರ್ವಜನಿಕರ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸಿ, ಮುಂದೆಯೂ ಇದೇ ರೀತಿಯ ಸಾಮರಸ್ಯವನ್ನು ಕಾಪಾಡಿಕೊಳ್ಳುವಂತೆ ಮನವಿ ಮಾಡಿದೆ.

# ಕಾಡ ಅಧ್ಯಕ್ಷ ಹಾಗೂ ಪೊಲೀಸರ ನಡುವೆ ಮಾತಿನ ಚಕಮಕಿ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮೂರು ರಾಜ್ಯಗಳ ಮುಖ್ಯಮಂತ್ರಿಗಳ ಆಗಮನ ಹಾಗೂ ನೂತನ ಟ್ರಸ್ಟ್ ಗೇಟ್ ಗಳ ಲೊಕಾರ್ಪಣೆಯ ವೇದಿಕೆಯ ಕಾರ್ಯಕ್ರಮದಲ್ಲಿ ವೇದಿಕೆಯಲ್ಲಿ ತುಂಗಭದ್ರಾ ಕಾಡ ಅಧ್ಯಕ್ಷ ಹಾಸನ ಸಾಬ ದೊಟಿಹಾಳ ಹಾಗೂ ಪೊಲೀಸರ ನಡುವೆ ಮಾತಿನ ಚಕಮಕಿ ಜರುಗಿತು

ತಾಲೂಕಿನ ಮುನಿರಾಬಾದ ಗ್ರಾಮದ ಸರ್ಕಾರಿ ಶಾಲಾ ಮೈದಾನದಲ್ಲಿ ಆಯೋಜಿಸಿದ 3 ರಾಜ್ಯಗಳ ಮುಖ್ಯಮಂತ್ರಿಗಳ ವೇದಿಕೆ ಕಾರ್ಯಕ್ರಮದಲ್ಲಿ ವೇದಿಕೆಯತ್ತ ತುಂಗಭದ್ರ ಕಾಡಾ ಅಧ್ಯಕ್ಷ ಹಸನಸಾಬ ದೋಟಿಹಾಳ ತೆರಳುತ್ತಿದ್ದ ವೇಳೆಯಲ್ಲಿ ಅವರ ಜೊತೆಯಲ್ಲಿದ್ದ ವ್ಯಕ್ತಿಯನ್ನು ವೇದಿಕೆ ಏರದಂತೆ ಪೊಲೀಸರು ತಡೆಗಟ್ಟಿದಾಗ ಪೊಲೀಸರ ವಿರುದ್ಧ ಕಾಡ ಅಧ್ಯಕ್ಷರು ಕೋಪಗೊಂಡ ಘಟನೆ ಜರುಗಿ–ತು. ಕಾರ್ಯಕ್ರಮದ ಶಿಷ್ಟಾಚಾರದಂತೆ ತಮಗೆ ನೀಡಿರುವ ಪಟ್ಟಿಯಲ್ಲಿರುವ ವ್ಯಕ್ತಿಗಳಿಗೆ ಮಾತ್ರ ಪ್ರವೇಶ ನೀಡಲಾಗುವುದು ಬೇರೆಯವರಿಗೆ ನೀಡುವುದಿಲ್ಲ ಎಂದು ಪೊಲೀಸರು ಹೇಳುತ್ತಿದ್ದಂತೆಯೇ ಕೋಪಗೊಂಡ ಅಧ್ಯಕ್ಷ ಹಸನಸಾಬ್ ದೋಟಿಹಾಳ ಅವರು ಪಕ್ಷದ ಪ್ರಮುಖರು ಹಾಗೂ ಗಣ್ಯರು ಮೇಲಾಗಿ ನನ್ನ ಜೊತೆ ಬಂದಿದ್ದಾರೆ ಅವರನ್ನು ಬಿಡುವುದಿಲ್ಲ ಎಂದರೆ ಹೀಗೆ ಎಂಬ ಮಾತಿನ ಚಕಮಕಿ ಪೋಲಿಸ್ ಹಾಗೂ ಅಧ್ಯಕ್ಷರ ನಡುವೆ ನಡೆಯಿತು.

ಪರಿಸ್ಥಿತಿ ವಿಕೋಪಕ್ಕೆ ಹೋಗುತ್ತಿದ್ದಂತೆಯೇ ಗಮನಿಸಿದ ಅಧಿಕಾರಿಗಳು ಇಬ್ಬರನ್ನು ಸಮಾಧಾನ ಗೊಳಿಸುವುದರ ಮುಖಾಂತರ ಪರಿಸ್ಥಿತಿಯನ್ನು ತಿಳಿಗೊಳಿಸಿದರು.

# ಪೋಲಿಯೋ ಮುಕ್ತ ಭಾರತಕ್ಕಾಗಿ ನಿಮ್ಮ ಮಕ್ಕಳಿಗೆ ಲಸಿಕೆ ಹಾಕಿಸಿ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ಪ್ರತಿಯೊಬ್ಬ ಪಾಲಕರು ತಮ್ಮ ಐದು ವರ್ಷ ವರ್ಷದ ಒಳಗಿನ ಪ್ರತಿಯೊಬ್ಬ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಿ ಪೋಲಿಯೋ ಮುಕ್ತ ಭಾರತ ನಿರ್ಮಾಣಕ್ಕೆ ಸಹಕರಿಸಿ ಎಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪರಶುರಾಮ ನಾಯಕ ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ತಾಲೂಕಿನ ಬನ್ನಿಕೊಪ್ಪ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪರಶುರಾಮ ನಾಯಕ ಮಾತನಾಡುತ್ತಾ ಕರ್ನಾಟಕ ಸರ್ಕಾರದ ಆದೇಶದಂತೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತಾಲೂಕ ಆರೋಗ್ಯ ಇಲಾಖೆ, ತಾಲೂಕ ಆಡಳಿತ ಹಾಗೂ ಪಟ್ಟಣ ಪಂಚಾಯಿತಿ ಸಹಯೋಗದಲ್ಲಿ ಇದೆ ಜೂನ್ 28ರ ಭಾನುವಾರ ಆರೋಗ್ಯ ಇಲಾಖೆ ಸೂಚಿಸುವ ಸ್ಥಳಗಳಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಪ್ರತಿ ಗ್ರಾಮಗಳಲ್ಲೂ ಸಹ ಪೋಲಿಯೋ ಬೂತ್ ಗಳನ್ನು ತೆರೆಯಲಾಗಿದ್ದು, ಪ್ರತಿ ಬೂತ್‌ಗಳಲ್ಲೂ ಸಹ ಆರೋಗ್ಯ ಇಲಾಖೆಯ ಹಾಗೂ ಪಂಚಾಯತಿಯ ಸಿಬ್ಬಂದಿಗಳು ಕಾರ್ಯನಿರ್ವಹಿಸಲಿದ್ದು ಪ್ರತಿಯೊಬ್ಬ ಪಾಲಕರು ನಿಗಾ ವಹಿಸಿ ತಮ್ಮ ಐದು ವರ್ಷದ ಒಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸುವುದರೊಂದಿಗೆ ಸರ್ಕಾರದ ಕಾರ್ಯಕ್ರಮವಾದ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು 100% ಯಶಸ್ವಿಗೊಳಿಸುವುದರೊಂದಿಗೆ ದೇಶವನ್ನು ಪೋಲಿಯೋ ಮುಕ್ತ ಭಾರತವನ್ನಾಗಿಸುವಲ್ಲಿ ಪಾಲಕರು ಸಹಕರಿಸಬೇಕೆಂದು ತಿಳಿಸಿರುತ್ತಾರೆ.

# ಮೊಹರಂ ಹಸನ್ ಹುಸೇನಿ ಪೀರಾ ಸವಾರಿ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್



ಮೊಹರಂ 9ನೇ ದಿನ ಕಿಲ್ಲಾ ಹುಸೇನಿ ಆಲಂ ಹಾಗೂ ಮೇಗಳಪೇಟೆಯ ಹಸನ್ ಆಲಂ ದರ್ಗಾದಲ್ಲಿ ಜರುಗಿದ ಸವಾರಿಗೆ ಭಕ್ತರ ದಂಡೆ ಹರಿದು ಬಂದಿತು.

ಕಿಲ್ಲಾದ ಹುಸೇನಿ ಆಲಂ ದರ್ಗಾದಲ್ಲಿ ಬೆಳಗ್ಗೆಯಿಂದಲೇ ಭಕ್ತರು ಭಕ್ತ ಸಾಗರದಂತೆ ಹರಿದು ಬಂದಂತಿತ್ತು. ದರ್ಗಾದ ಮುಂದಿನ ರಸ್ತೆಯ ಮೂಲಕವೇ ಭಕ್ತರಿಗೆ ದರ್ಶನಕ್ಕಾಗಿ ಬ್ಯಾರಿಕೇಡ್ ರಚಿಸಲಾಗಿತ್ತು. ಭಕ್ತರು ಕೆಂಪು ಸಕ್ಕರೆ, ಚ್ಯಂಗ್ಯಾ, ಸೇರಿದಂತೆ ತಮ್ಮ ಭಕ್ತಿಯನುಸಾರ ಸಮರ್ಪಿಸಿದರು. ಇನ್ನು ಕೆಲ ಭಕ್ತರು ಕೂಡ ಬಂಗಾರ, ಬೆಳ್ಳಿಯ ಆಭರಣಗಳನ್ನು ಆಡಳಿತ ಮಂಡಳಿ ಮೂಲಕ ಸಮರ್ಪಿಸಲಾಯಿತು.

# ಮುಂದಿನ ಚುನಾವಣೆಯಲ್ಲಿ ಸೋಲಿಸುವವರೆಗೂ ಹೋರಾಟ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ



ಜೆಡಿಎಸ್ ಪಕ್ಷ ಹಾಗೂ ದೇವೇಗೌಡರ ಕುಟುಂಬದ ಬಗ್ಗೆ ಹಗುರವಾಗಿ ಮಾತನಾಡುವುದನ್ನು ನಿಲ್ಲಿಸಬೇಕು. ಇಲ್ಲವಾದರೆ ಮುಂದಿನ ಚುನಾವಣೆಯಲ್ಲಿ ಸೋಲಿಸುವವರೆಗೂ ಹೋರಾಟ ಮಾಡುತ್ತೇನೆ ಎಂದು ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಶಾಸಕ ಮೇಲೂರು ರವಿಕುಮಾರ್ ಅವರು ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ತೀವ್ರ ಎಚ್ಚರಿಕೆ ನೀಡಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವರಾಗುವ ಆಸೆಯಿಂದಲೇ ಪ್ರದೀಪ್ ಈಶ್ವರ್ ಅವರು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ವಿರುದ್ಧ ಮಾತನಾಡುತ್ತಿದ್ದು,ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಗಮನ ಸೆಳೆಯುವ ಉದ್ದೇಶ ಇರಬಹುದು ಎಂದು ಆರೋಪಿಸಿದರು.

ಹೆಚ್.ಡಿ. ಕುಮಾರಸ್ವಾಮಿ ಅವರ ವಿರುದ್ಧ ಇಲ್ಲಸಲ್ಲದ ಆರೋಪಗಳು ಮತ್ತು ವೈಯಕ್ತಿಕ ಟೀಕೆಗಳನ್ನು ಇಲ್ಲಿಯೇ ನಿಲ್ಲಿಸಬೇಕು. ಇಲ್ಲವಾದರೆ ಮುಂದಿನ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಎನ್ ಡಿ ಎ ಅಭ್ಯರ್ಥಿ ಗೆಲ್ಲಿಸಲು ಎಲ್ಲ ಪ್ರಯತ್ನ ಮಾಡುತ್ತೇನೆ ಆ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಸೋತರೆ ನಿಮ್ಮ ಮನೆ ಮುಂದೆ ವಾಚ್‌ಮ್ಯಾನ್ ಆಗಿ ಕೆಲಸ ಮಾಡುತ್ತೇನೆ.ನೀವು ಸೋತರೆ ಕುಮಾರಸ್ವಾಮಿ ಅವರ ಮನೆ ಮುಂದೆ ವಾಚ್‌ಮ್ಯಾನ್ ಆಗಿ ಕೆಲಸ ಮಾಡಲು ಸಿದ್ಧರಿದ್ದೀರಾ? ಗಂಡಸಾಗಿದ್ದರೆ ನನ್ನ ಸವಾಲು ಸ್ವೀಕರಿಸಿ ಎಂದು ರವಿಕುಮಾರ್ ಸವಾಲು ಹಾಕಿದರು.

ಇತ್ತೀಚಿಗೆ ಪ್ರದೀಪ್ ಈಶ್ವರ್ ಅವರು ಹೆಚ್.ಡಿ. ಕುಮಾರಸ್ವಾಮಿ ಧರಿಸುವ ಕೈಗಡಿಯಾರ ಕುರಿತು ನೀಡಿದ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ರವಿಕುಮಾರ್,ರಾಜ್ಯಕ್ಕೆ ದೇವೇಗೌಡರ ಕುಟುಂಬದ ಕೊಡುಗೆ ಅಪಾರವಾಗಿದೆ.ಅಂತಹ ಕುಟುಂಬದ ಬಗ್ಗೆ ಮಾತನಾಡಲು ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದರು.

ಇತರರ ಖಾಸಗಿ ಬದುಕಿನ ಬಗ್ಗೆ ಪ್ರಶ್ನಿಸುವ ನೀವು,ನಿಮ್ಮ ಕ್ಷೇತ್ರದಲ್ಲಿ ಯಾವ ಅಭಿವೃದ್ಧಿ ಕೆಲಸ ಮಾಡಿದ್ದೀರಿ ಎಂಬುದನ್ನು ಮೊದಲು ಪರಿಶೀಲಿಸಿಕೊಳ್ಳಿ. ಕುಮಾರಸ್ವಾಮಿ ಅವರ ರಾಜಕೀಯ ಜೀವನ ಮತ್ತು ಆಸ್ತಿ ಬಗ್ಗೆ ಮಾತನಾಡುವ ಮೊದಲು ನಿಮ್ಮದೇ ಆಸ್ತಿ ವಿವರಗಳನ್ನು ಜನರ ಮುಂದೆ ಇಡಿ. ಪೂರ್ವಾಪರ ಯೋಚನೆ ಮಾಡದೆ ಮಾತನಾಡಿದರೆ ಜೆಡಿಎಸ್ ಕಾರ್ಯಕರ್ತರು ರಾಜಕೀಯವಾಗಿ ತಕ್ಕ ಉತ್ತರ ನೀಡುತ್ತಾರೆ ಎಂದು ಎಚ್ಚರಿಸಿದರು.

ಹೆಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ರೈತರ ಸಾಲಮನ್ನಾ,ಲಾಟರಿ ನಿಷೇಧ ಸೇರಿದಂತೆ ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು ಜನರ ಮನಸ್ಸಿನಲ್ಲಿ ಸ್ಥಾನ ಪಡೆದಿದ್ದಾರೆ ಅಂತಹ ನಾಯಕರ ಬಗ್ಗೆ ಮಾತನಾಡುವ ಬದಲು ತಮ್ಮ ಮೂರು ವರ್ಷದ ಅಧಿಕಾರಾವಧಿಯಲ್ಲಿ ಮಾಡಿದ ಕೆಲಸಗಳನ್ನು ಜನರಿಗೆ ತಿಳಿಸಬೇಕು,2023ರ ಚುನಾವಣೆಯಲ್ಲಿ ಜನರು ಕ್ಷೇತ್ರದ ಅಭಿವೃದ್ಧಿಗಾಗಿ ಆಯ್ಕೆ ಮಾಡಿದ್ದಾರೆ.ಆದರೆ ಕ್ಷೇತ್ರದ ಜನರ ಸಮಸ್ಯೆಗಳು, ರೈತರ ವಿಚಾರ ಹಾಗೂ ಅಭಿವೃದ್ಧಿ ಕುರಿತು ವಿಧಾನಸೌಧದಲ್ಲಿ ಧ್ವನಿ ಎತ್ತಿಲ್ಲ.ಸಿನಿಮಾ ಡೈಲಾಗ್‌ಗಳ ಮೂಲಕ ಪ್ರಚಾರ ಪಡೆಯುತ್ತಿದ್ದೀರ ಎಂದು ಹೇಳಿದರು.

ಇನ್ನೂ ಪ್ರದೀಪ್ ಈಶ್ವರ್ ಅವರು ತಾವು ಅಹಿಂದ ವರ್ಗದವರು ಎಂದು ಹೇಳಿಕೊಳ್ಳುತ್ತಾರೆ ಆದರೆ ಬಲಿಜ ಸಮುದಾಯದ ಪ್ರಮುಖರಾದ ಲೋಕಸಭಾ ಸದಸ್ಯ ಪಿ.ಸಿ.ಮೋಹನ್ ಹಾಗೂ ವಿಧಾನಪರಿಷತ್ ಸದಸ್ಯ ಎಂ.ಆರ್.ಸೀತಾರಾಂ ಸೇರಿದಂತೆ ಆ ಸಮುದಾಯದ ನಾಯಕರು ಯಾರೂ ಈ ರೀತಿಯ ಭಾಷೆ ಬಳಸಿಲ್ಲ ಬಲಿಜ ಸಮುದಾಯಕ್ಕೆ ತನ್ನದೇ ಆದ ಗೌರವವಿದೆ.ಪ್ರದೀಪ್ ಈಶ್ವರ್ ಅವರ ಮಾತು ಮತ್ತು ನಡೆನುಡಿ ಗಮನಿಸಿದರೆ ಅವರು ಆ ಸಮುದಾಯದ ಮೌಲ್ಯಗಳನ್ನು ಪ್ರತಿನಿಧಿಸುತ್ತಿಲ್ಲ ಎಂಬ ಅನುಮಾನ ವ್ಯಕ್ತವಾಗುತ್ತಿದೆ.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಮುಖಂಡರಾದ ಬಂಕ್ ಮುನಿಯಪ್ಪ,ರಘು,ಮಂಜುನಾಥ್,ಸದಾಶಿವ, ಜಿ. ನರಸಿಂಹಮೂರ್ತಿ,ವಿಜಯ್ ಕುಮಾರ್,ಕೆ. ಆರ್.ರೆಡ್ಡಿ,ಶಾಂತಮೂರ್ತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶ್ರವಣ ಸಾಧನಗಳ ವಿತರಣೆ



**ಬಾಗಲಕೋಟೆ:** ಕೇಂದ್ರ ಸರ್ಕಾರದ ಆರೋಗ್ಯ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸಿ ಆ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣ ಮಾಡುವುದು ಅವಶ್ಯಕವಾಗಿದ್ದು ಈ ದಿಸೆಯಲ್ಲಿ ವಿಕಲಚೇತನರನ್ನು ಸಮಾಜದ ಮುಖ್ಯವಾಹಿನಿಗೆ ಕರೆತರುವುದು ಅಗತ್ಯವಿದೆ ಎಂದು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯಲ್ಲಿ ರೋಗಿಗಳಿಗೆ ಉಚಿತ ಶ್ರವಣ ಸಾಧನಗಳನ್ನು ವಿತರಿಸಿ ಮಾತನಾಡಿದ ಅವರು, ವಿಶೇಷವಾಗಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ನೆರವಾಗುವ ಉದ್ದೇಶದಿಂದ ಅನೇಕ ಆರೋಗ್ಯ ಯೋಜನೆಗಳನ್ನು ಜಾರಿಗೆ ತರಲಾಗಿದ್ದು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಅಡಿಪ್ ಯೋಜನೆಯಡಿ ರೋಗಿಗಳಿಗೆ ಶ್ರವಣ ಸಾಧನಗಳನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಒಟ್ಟು 32 ಫಲಾನುಭವಿಗಳಿಗೆ 64 ಶ್ರವಣ ಸಾಧನಗಳನ್ನು ವಿತರಿಸಿದ್ದೇವೆ. ಒಟ್ಟಾರೆ ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಕೇಂದ್ರ ಸರ್ಕಾರದ ಕಾರ್ಯಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಕುಮಾರೇಶ್ವರ ಆಸ್ಪತ್ರೆಯ ಮೂಲಕ ಪ್ರಯತ್ನಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷರಾದ ಅಶೋಕ ಎಮ್.ಸಜ್ಜನ (ಬೇವೂರ), ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಉಪಪ್ರಾಚಾರ್ಯ ಡಾ.ಸಿ.ಎಸ್.ಹಿರೇಮಠ, ಬಿ.ವಿ.ವಿ.ಎಸ್ ವಾಕ್ ಮತ್ತು ಶ್ರವಣ ಸಂಸ್ಥೆಯ ಪ್ರಾಚಾರ್ಯೆ ಡಾ.ಶ್ರೀವಿದ್ಯಾ ಮತ್ತು ಸಿಬ್ಬಂದಿ, ಮೆಡಿಕಲ್ ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು, ವೈದ್ಯರು, ವಿದ್ಯಾರ್ಥಿಗಳು ಮತ್ತು ಫಲಾನುಭವಿಗಳು ಹಾಗೂ ಅವರ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

# ಜರ್ನಲಿಸಂ ವಿದ್ಯಾರ್ಥಿಗಳ ಸಾಧನೆ





**ಬಾಗಲಕೋಟೆ:** ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯ ಕಳೆದ ಡಿಸೆಂಬರ್ ಮತ್ತು ಜನೆವರಿಯಲ್ಲಿ ನಡೆಸಿದ 6ನೇಯ ಸೆಮಿಸ್ಟರ್ ಪರೀಕ್ಷೆಯಲ್ಲಿ ನಗರದ ಬಿವಿವಿ ಸಂಘದ ಬಸವೇಶ್ವರ ಕಲಾ ಮಹಾವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ವಿದ್ಯಾರ್ಥಿನಿ ಗಂಗಾ ಅಮಾತೆಪ್ಪನವರ ಜಾಹೀರಾತು ಮತ್ತು ಸಾಂಸ್ಥಿಕ ಸಂವಹನ ವಿಷಯಕ್ಕೆ 100ಕ್ಕೆ 100 ಮತ್ತು ಡಿಜಿಟಲ್ ಮಾಧ್ಯಮದ ಪರಿಚಯ ಪತ್ರಿಕೆಗೆ 98 ಅಂಕ ಪಡೆದರೆ, ಶಾಂತಾ ಪಾಟೀಲ ಪ್ರಥಮ ಪತ್ರಿಕೆಗೆ 80, ದ್ವಿತೀಯ ಪತ್ರಿಕೆಗೆ 89 ಹಾಗೂ ದೀಪಾ ಮುರನಾಳ ಪ್ರಥಮ ಮತ್ತು ದ್ವಿತೀಯ ವಿಷಯಗಳಿಗೆ ಅನುಕ್ರಮವಾಗಿ 75 ಹಾಗೂ 84 ಅಂಕಗಳನ್ನು ಪಡೆಡಿದ್ದಾರೆ.

ಮಹಾವಿದ್ಯಾಲಯದಿಂದ ಪರೀಕ್ಷೆಗೆ ಹಾಜರಾದ 11 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಸಾಧನೆ ತೋರಿದ ಮತ್ತು ಪಾಸಾದ ವಿದ್ಯಾರ್ಥಿಗಳನ್ನು ಬಿವ್ಹಿವ್ಹಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿಗ ಮಹೇಶ್.ಎನ್.ಅಥಣಿ, ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಪ್ರಾಚಾರ್ಯ ಎಸ್. ಆರ್. ಮುಗನೂರಮಠ, ವಿಭಾಗದ ಮುಖ್ಯಸ್ಥ ಐ.ಬಿ.ಚಿಕ್ಕಮಠ, ಪ್ರಾಧ್ಯಾಪಕ ಎಮ್.ಪಿ.ದೊಡವಾಡ ಸೇರಿದಂತೆ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

# ಬಾವಿಗೆ ಜಿಗಿದು ಗರ್ಭಿಣಿ ಆತ್ಮಹತ್ಯೆ

**ಕಲಬುರಗಿ:** ಒಂದೂವರೆ ವರ್ಷದ ಹಸುಗೂಸಿನೊಂದಿಗೆ ನಾಲ್ಕು ತಿಂಗಳಿನ ಗರ್ಭಿಣಿಯೊಬ್ಬರು ತೆರೆದ ಬಾವಿಯ ನೀರಿಗೆ ಜಿಗಿದು ಆತ್ಮಹತ್ಯೆ



ಮಾಡಿಕೊಂಡ ಘಟನೆ ಜಿಲ್ಲೆಯ ಆಳಂದ್ ತಾಲ್ಲೂಕಿನ ಚಿಂಚನಸೂರ್ ಗ್ರಾಮದಲ್ಲಿ ಸಂಭವಿಸಿದೆ. ಮೃತರನ್ನು ಅಂಬಿಕಾ (25) ಹಾಗೂ ಆಕೆಯ ಒಂದೂವರೆ ವರ್ಷದ ಪುತ್ರ ಆರಾಧ್ಯ ಎಂದು ಗುರುತಿಸಲಾಗಿದೆ.

ಮೃತ ಮಹಿಳೆ ಅಂಬಿಕಾಗೆ ಮೂರು ವರ್ಷಗಳ ಹಿಂದೆಯಷ್ಟೇ ವೀರಭದ್ರಪ್ಪ ಎಂಬುವವರ ಜೊತೆ ವಿವಾಹವಾಗಿತ್ತು. ದಂಪತಿಗೆ ಒಂದೂವರೆ ವರ್ಷದ ಗಂಡು ಮಗನಿದ್ದನು. ಇದರ ಬೆನ್ನಲ್ಲೇ ಅಂಬಿಕಾ ಈಗ ನಾಲ್ಕು ತಿಂಗಳ ಗರ್ಭಿಣಿಯಾಗಿದ್ದರು ಎಂದು ತಿಳಿದುಬಂದಿದೆ.

ಮೂಲಗಳ ಪ್ರಕಾರ ಅಂಬಿಕಾ ಕಳೆದ ಮಂಗಳವಾರ ಬೆಳಗ್ಗೆಯೇ ಯಾರಿಗೂ ಹೇಳದೆ ದಿಢೀರನೆ ಮನೆಯಿಂದ ಹೊರಟು ಹೋಗಿದ್ದರು. ಮಹಿಳೆ ಎಷ್ಟು ಹೊತ್ತಾದರೂ ಮನೆಗೆ ಮರಳದಿದ್ದಾಗ ಆತಂಕಗೊಂಡ ಕುಟುಂಬಸ್ಥರು ಮತ್ತು ಗ್ರಾಮಸ್ಥರು ಸುತ್ತಮುತ್ತಲಿನ ಎಲ್ಲ ಪ್ರದೇಶಗಳಲ್ಲೂ ತೀವ್ರ ಹುಡುಕಾಟ ನಡೆಸಿದ್ದರು. ಎರಡು ದಿನಗಳ ಸತತ ಹುಡುಕಾಟದ ಬಳಿಕ, ಗ್ರಾಮದ ಹೊರವಲಯದಲ್ಲಿದ್ದ ತೆರೆದ ಬಾವಿಯೊಂದರ ಪಕ್ಕದಲ್ಲಿ ಅಂಬಿಕಾ ಅವರ ಚಪ್ಪಲಿಗಳು ಪತ್ತೆಯಾಗಿವೆ. ಇದ-ರಿಂದ ಅನುಮಾನಗೊಂಡ ಗ್ರಾಮಸ್ಥರು ಬಾವಿಯೊಳಗೆ ಇಳಿದು ಶೋಧ ನಡೆಸಿದಾಗ ತಾಯಿ ಮತ್ತು ಮಗುವಿನ ಮೃತದೇಹಗಳು ತೇಲುತ್ತಿರುವುದು ಕಂಡುಬಂದಿದೆ.

ಘಟನೆಯ ಬಗ್ಗೆ ಮಾಹಿತಿ ತಿಳಿಯುತ್ತಿದ್ದಂತೆಯೇ ನರೋಣಾ ಠಾಣೆಯ ಪೊಲೀಸರು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯರ ನೆರವಿನೊಂದಿಗೆ ಬಾವಿಯಲ್ಲಿದ್ದ ಎರಡು ಶವಗಳನ್ನು ಹೊರತೆಗೆದು, ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ. ನಾಲ್ಕು ಜೀವಗಳು ಹೀಗೆ ಬಾವಿಯಲ್ಲಿ ಹೆಣವಾಗಿ ಬಿದ್ದಿರುವುದನ್ನು ಕಂಡು ಇಡೀ ಚಿಂಚನಸೂರ್ ಗ್ರಾಮ ಕಣ್ಣೀರಲ್ಲಿ ಮುಳುಗಿದೆ.

ಅಂಬಿಕಾ ಅವರ ಈ ಆತ್ಮಹತ್ಯೆಗೆ ನಿಖರವಾದ ಕಾರಣವೇನೆಂಬುದು ಇನ್ನು ಸ್ಪಷ್ಟವಾಗಿಲ್ಲ. ಈ ಭೀಕರ ದುರಂತದ ಕುರಿತು ನರೋಣಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

# 7.20 ಕೋಟಿ ರೂ. ವಿವಿಧ ಕಾಮಗಾರಿಗಳಿಗೆ ಶಾಸಕ ಉಮೇಶ ಮೇಟಿ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಕಳೆದ 2025–26 ನೇ ಸಾಲಿನ ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿ 7.20 ಕೋಟಿ ರೂ.ಗಳ ವೆಚ್ಚದ ವಿವಿಧ ರಸ್ತೆ ಸುಧಾರಣೆ ಹಾಗೂ ಡಾಂಬರೀಕರಣ ಕಾಮಗಾರಿಗಳಿಗೆ ಶಾಸಕ ಉಮೇಶ ಮೇಟಿ ಭೂಮಿ ಪೂಜೆ ನೆರವೇರಿಸಿದರು.

ಬಾಗಲಕೋಟೆ ಮತಕ್ಷೇತ್ರ ವ್ಯಾಪ್ತಿಯ ಕಿರಸೂರದಿಂದ ಮುಗಳೊಳ್ಳಿ ಪುನರ್ವಸತಿ ಕೇಂದ್ರ, ಕಡ್ಲಿಮಟ್ಟಿ ರೇಲ್ವೆ ಸ್ಟೇಶನ್, ಬೆನ್ನೂರ ಪುನರ್ವಸತಿ ಕೇಂದ್ರ ರಸ್ತೆಯಿಂದ 4.50 ಕಿಮೀವರೆಗೆ ಆಯ್ದ ಭಾಗಗಳಲ್ಲಿ 1 ಕೋಟಿ ರೂಪಾಯಿ ವೆಚ್ಚದ ರಸ್ತೆ ಸುಧಾರಣೆ, 1 ಕೋಟಿ ರೂ.ಗಳ ವೆಚ್ಚದ ಮುಚಖಂಡಿ ಕ್ರಾಸ್ ರಸ್ತೆಯಿಂದ ಹರಣ ಶಿಕಾರಿ ಕಾಲೋನಿ ಸರಕಾರಿ ಹೆಣ್ಣುಮಕ್ಕಳ ಪ್ರೌಢಶಾಲೆ ಮಾರ್ಗವಾಗಿ ಎನ್. ಎಚ್–367ಗೆ ಹೊಂದಿಕೊಳ್ಳುವ ಬಸವೇಶ್ವರ ಸರ್ಕಲ್‌ವರೆಗೆ 2.20 ಕಿಮೀ ರಸ್ತೆ ಸುಧಾರಣೆಗೆ ಚಾಲನೆ ನೀಡಲಾಯಿತು. ಅದೇ ರೀತಿ 4 ಕೋಟಿ ರೂ.ಗಳ ವೆಚ್ಚದ ಬಿಳಿಗಿರಿರಂಗನಬೆಟ್ಟ ರಾಷ್ಟ್ರಿಯ ಹೆದ್ದಾರಿ–57ಕ್ಕೆ ಕೂಡುವ ಸಿಕ್ಕೇರಿ ಹತ್ತಿರದ ಕೆ.ಎಚ್.ಬಿ ಬಡಾವಣೆಯಲ್ಲಿ ಆಂತರಿಕ ರಸ್ತೆಗಳ ಸುಧಾರಣೆ ಹಾಗೂ ಶಿರೂರ ಗ್ರಾಮದ ಹತ್ತಿರ ಇರುವ ಹೇಮರೆಡ್ಡಿ ಮಲ್ಲಮ್ಮ ದೇವಾಲಯದಿಂದ ರಾಜ್ಯ ಹೆದ್ದಾರಿ–367ಕ್ಕೆ ಕೂಡುವ 220 ಮೀಟರ ರಸ್ತೆಯ ಡಾಂಬರೀಕರಣ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ಮೇಟಿ ತಿಳಿಸಿದರು.

ಗ್ರಾಮೀಣ ಹಾಗೂ ನಗರ ಭಾಗದ ಜನರ ಸಂಚಾರ ಸುಗಮಗೊಳಿಸುವ ನಿಟ್ಟಿನಲ್ಲಿ ರಸ್ತೆ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗಿದೆ. ಉತ್ತಮ ರಸ್ತೆ ವ್ಯವಸ್ಥೆಯು ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಪೂರಕವಾಗಿದ್ದು, ಸಾರ್ವಜನಿಕರಿಗೆ ಗುಣಮಟ್ಟದ ಮೂಲಸೌಕರ್ಯ ಒದಗಿಸುವುದು ಸರಕಾರದ ಬದ್ಧತೆಯಾಗಿದೆ ಎಂದು ತಿಳಿಸಿದರು. ಗುತ್ತಿಗೆದಾರರು ಗುಣಮಟ್ಟದ ರಸ್ತೆ ಮಾಡುವುದರ ಜೊತೆಗೆ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಉಮೇಶ ಮೇಟಿ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಜಿ.ಪಂ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ, ನಗರಸಭೆ ಸದಸ್ಯೆ ಲಕ್ಷ್ಮೀ ಚವ್ಹಾಣ, ಬಾಗಲಕೋಟೆ ತಾಲೂಕಾ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಸ್. ಎಂ.ರಾಂಪೂರ, ಪ್ರಮುಖರಾದ ನಾಗರಾಜ ಹದ್ಲಿ, ಬಲರಾಮ ಪವಾರ್, ಲಕ್ಷ್ಮಣ ದಡ್ಡಿ, ನಿಂಗಪ್ಪ ಕೋಟಿ, ಸಿದ್ದಪ್ಪ ಸುನಗದ, ಸಿದ್ದಪ್ಪ ಕೋಟಿಕಲ್, ರಂಗಪ್ಪ ಮಳ್ಳಿ, ಎಸ್.ಬಿ.ಮಾಚಾ, ಮಂಜು ಮುಚಖಂಡಿ ಇತರರು ಉಪಸ್ಥಿತರಿದ್ದರು.

# ತುರ್ತು ಪರಿಸ್ಥಿತಿ ಪ್ರಜಾಪ್ರಭುತ್ವದ ಕಗ್ಗೊಲೆ: ಚರಂತಿಮಠ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



1975 ಜೂನ 25 ತುರ್ತು ಪರಿಸ್ಥಿತಿ ಹೇರಿದ ದಿನ. ಇದು ದೇಶದ ಪ್ರಜಾಪ್ರಭುತ್ವದ ಇತಿಹಾಸದ ಅತ್ಯಂತ ಕರಾಳ ಅಧ್ಯಾಯ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ತುರ್ತು ಪರಿಸ್ಥಿತಿ ಕರಾಳ ದಿನ ಆಚರಣೆ ಕಾರ್ಯಕ್ರಮದಲ್ಲಿ ಸೆರೆವಾಸ ಅನುಭವಿಸಿದ್ದ ಹಿರಿಯರನ್ನು ಸನ್ಮಾನಿಸಿ ಮಾತನಾಡಿದ ಅವರು, ತಮ್ಮ ಸ್ವಾರ್ಥ, ಅಧಿಕಾರದ ಹಪಾಹಪಿಗೆ ಅಂದಿನ ಕಾಂಗ್ರೆಸ್ ಸರ್ಕಾರ ಸಂವಿಧಾನಕ್ಕೆ ಅಪಚಾರ ಬಗೆದು ಪ್ರಜಾಪ್ರಭುತ್ವದ ಕಗ್ಗೊಲೆ ನಡೆಸಿತು ಎಂದರು.

ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರ ಸಲಹೆಯ ಮೇರೆಗೆ ರಾಷ್ಟ್ರಪತಿ ಫಕ್ರುದ್ದೀನ್ ಅಲಿ ಅಹ್ಮದ್ ದೇಶದಲ್ಲಿ ತುರ್ತು ಪರಿಸ್ಥಿತಿಯನ್ನು ಘೋಷಿಸಿದರು. ಆಂತರಿಕ ಭದ್ರತೆಯ ನೆಪದಲ್ಲಿ ಹೇರಲಾದ ಈ ತುರ್ತು ಪರಿಸ್ಥಿತಿ ಸುಮಾರು 21 ತಿಂಗಳ ಕಾಲ ಮುಂದುವರೆಯಿತು. ಈ ಅವಧಿಯಲ್ಲಿ ಮೂಲಭೂತ ಹಕ್ಕುಗಳನ್ನು ಮೊಟಕುಗೊಳಿಸಲಾಯಿತು, ಪತ್ರಿಕಾ ಸ್ವಾತಂತ್ರ್ಯವನ್ನು ಹತ್ತಿಕ್ಕಲಾಯಿತು ಮತ್ತು ಲಕ್ಷಾಂತರ ರಾಜಕೀಯ ನಾಯಕರು ಹಾಗೂ ಕಾರ್ಯಕರ್ತರನ್ನು ಜೈಲಿನಲ್ಲಿ ಇರಿಸಲಾಯಿತು, ಇದು ಕಾಂಗ್ರೆಸ್ಸ ಮಾಡಿದ ಪ್ರಜಾಪ್ರಭುತ್ವದ ಕಗ್ಗೊಲೆ ಎಂದ ಚರಂತಿಮಠ, ಪ್ರಜಾಪ್ರಭುತ್ವದ ರಕ್ಷಣೆಗಾಗಿ ಹೋರಾಡಿದ ಎಲ್ಲ ಮಹನೀಯರ ಧೈರ್ಯ, ತ್ಯಾಗ ಮತ್ತು ಬಲಿದಾನಗಳಿಗೆ ಗೌರವಪೂರ್ವಕ ಪ್ರಣಾಮಗಳನ್ನು ಸಲ್ಲಿಸಬೇಕು ಎಂದು ಹೇಳಿದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ, ಒಂದು ಕೋಟಿಗೂ ಅಧಿಕ ಜನರಿಗೆ ಬಲವಂತದ ಸಂತಾನಹರಣ ಶಸ್ತ್ರಚಿಕಿತ್ಸೆ, ಲಕ್ಷಕ್ಕೂ ಹೆಚ್ಚು ರಾಜಕೀಯ ಮುಖಂಡರು ಹಾಗೂ ಕಾರ್ಯಕರ್ತರ ಬಂಧನ ಮತ್ತು ಪತ್ರಿಕಾ ಸ್ವಾತಂತ್ರ್ಯದ ಹರಣದಂತಹ ಭಯಾನಕ ದೌರ್ಜನ್ಯಗಳನ್ನು ಇತಿಹಾಸ ಎಂದಿಗೂ ಮರೆಯುವುದಿಲ್ಲ. ದೇಶದ ಜನತೆ ಈ ಪ್ರಮಾದವನ್ನು ಎಂದಿಗೂ ಕ್ಷಮಿಸುವುದಿಲ್ಲ. ಭಾರತೀಯ ಜನತಾ ಪಕ್ಷದವರು ನಿಜವಾದ ಸಂವಿಧಾನ ರಕ್ಷಕರು ಎಂದರು.

ತುರ್ತು ಪರಿಸ್ಥಿತಿಯಲ್ಲಿ ಸೆರೆವಾಸ ಅನುಭವಿಸಿದ ಬಾಗಲಕೋಟೆಯ ಕಲ್ಲಪ್ಪ ಡಂಗೆ, ರಾಮಣ್ಣ ಬಾರಕೇರ, ವಿಠ್ಠಲ್ ಸಾಳುಂಕೆ, ಗುಂಡುರಾವ ಶಿಂಧೆ ಅವರನ್ನು ಸನ್ಮಾನಿಸಲಾಯಿತು.

ಮಹೇಶ ಅಥಣಿ, ಬಸವರಾಜ ಯಂಕಂಚಿ, ಡಾ. ಎಂ.ಎಸ್.ದಡ್ಡೆನ್ನವರ, ಮುತ್ತಣ್ಣ ಬೆಣ್ಣೂರ, ಬಸವರಾಜ ಹುನಗುಂದ, ಸತ್ಯನಾರಾಯಣ ಹೇಮಾದ್ರಿ, ಶಿವಾನಂದ ಟವಳಿ, ದುಂಡಪ್ಪ ಏಳಮ್ಮಿ, ಸುರೇಶ ಮಜ್ಜಿಗಿ, ಶಶಿಕಲಾ ಮಜ್ಜಗಿ, ಶಿವಲೀಲಾ ಸಂಬಣ್ಣವರ, ಜ್ಯೋತಿ ಚವ್ಹಾಣ, ನಾಗರತ್ನ ಹಡಗಲಿ, ವಿಜಯಲಕ್ಷ್ಮಿ ಭದ್ರಶೆಟ್ಟಿ, ರವಿ ಧಾಮಜಿ, ಶ್ರೀಧರ ನಾಗರಬೆಟ್ಟ, ಗಿರೀಶ ಬಾಂಡಗೆ, ರಾಜು ತಾಳಿಕೋಟಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಮುಂಗಾರು ಮಳೆ ಕೊರತೆಯಿಂದ ಬತ್ತಿದ ಭೀಮೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕರ್ನಾಟಕದಲ್ಲಿ ಮುಂಗಾರು ಆರಂಭವಾಗಿ 20 ದಿನಗಳು ಕಳೆದರೂ ಜಿಲ್ಲೆಯಲ್ಲಿ ವರುಣ ಕೃಪೆ ತೋರಿಲ್ಲ. ಕಳೆದ 20 ದಿನಗಳಿಂದ ಒಂದೇ ಒಂದು ಹನಿ ಮಳೆ ಬರದ ಕಾರಣ, ಇಡೀ ಜಿಲ್ಲೆ ಭೀಕರ ಬರಗಾಲದ ಛಾಯೆಗೆ ಒಳಗಾಗಿದೆ. ಕಲಬುರ್ಗಿ ಮತ್ತು ವಿಜಯಪುರ ಜಿಲ್ಲೆಗಳ ಜೀವನಾಡಿಯಾಗಿರುವ ಭೀಮಾ ನದಿ ಸಂಪೂರ್ಣವಾಗಿ ಬರಿದಾಗಿದೆ.

ಕಳೆದ ವರ್ಷ ಇದೇ ಜೂನ್‌ನಲ್ಲಿ ಭೀಮಾ ನದಿಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರಿತ್ತು. ಆದರೆ ಈ ಬಾರಿ ನದಿ ಸಂಪೂರ್ಣ ಬಿಕೋ ಎನ್ನುತ್ತಿದೆ. ನದಿಯ ಒಡಲು ಬರಿದಾಗಿದ್ದು, ಅಲ್ಲಲ್ಲಿ ಸ್ವಲ್ಪ ನೀರಿದ್ದರೂ, ಇನ್ನೂ 15 ದಿನ ಮಳೆಯಾಗದಿದ್ದರೆ ಆ ನೀರು ಕೂಡ ಮಾಯವಾಗುವ ಪರಿಸ್ಥಿತಿ ಇದೆ. ಸದ್ಯ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದು, ಇಡೀ ಜಿಲ್ಲೆಯಲ್ಲಿ ಹಾಹಾಕಾರ ಸೃಷ್ಟಿಯಾಗಿದೆ. ನಗರ, ಅಫಜಲಪುರ, ಜೇವರ್ಗಿ ಸೇರಿದಂತೆ ಸಾಕಷ್ಟು ಹಳ್ಳಿಗಳಿಗೆ ಕುಡಿಯುವ ನೀರು ಸರಬರಾಜು ಮಾಡುತ್ತಿದ್ದ ಭೀಮಾ ನದಿ ಒಣಗಿರುವುದರಿಂದ ಲಕ್ಷಾಂತರ ರೈತರು ಮತ್ತು ಜಾನುವಾರುಗಳಿಗೆ ತೀವ್ರ ತೊಂದರೆಯಾಗಿದೆ. ಜಾನುವಾರುಗಳಿಗೆ ನೀರು ಕುಡಿಸಲು ಕಿಲೋಮೀಟರ್ ಗಟ್ಟಲೆ ಅಲೆದಾಡಬೇಕಾದ ಸ್ಥಿತಿ ನಿರ್ಮಾಣವಾಗಿದೆ.

ಭೀಮಾ ನದಿಯ ದಡದಲ್ಲಿ ಕಲಬುರ್ಗಿ, ಅಫಜಲಪುರ, ಜೇವರ್ಗಿ ತಾಲ್ಲೂಕುಗಳು ಹೆಚ್ಚಿನ ಪ್ರಮಾಣದಲ್ಲಿ ಇರುವುದರಿಂದ ಭೀಮಾ ನದಿಯ ನೀರು ಬತ್ತಿರುವುದರಿಂದ ಅಲ್ಲೆಲ್ಲ ಕುಡಿಯುವ ನೀರಿಗಾಗಿಯೂ ಹಾಹಾಕಾರ ಏಳುವಂತಾಗಿದೆ. ಈಗಾಗಲೇ ಭೀಮಾ ನದಿಗೆ ನಾರಾಯಣಪುರ ಜಲಾಶಯದಿಂದ ನೀರು ಹರಿಸಲು ಒತ್ತಾಯಿಸಲಾಗಿದೆ. ಆದಾಗ್ಯೂ, ಭೀಮಾ ನದಿಗೆ ನಮ್ಮ ಪಾಲಿನ 15 ಟಿಎಂಸಿ ನೀರು ಬಿಡುವ ಕುರಿತಂತೆ ಈಗಲೂ ಸಹ ಮಹಾರಾಷ್ಟ್ರ ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರಲು ರಾಜ್ಯ ಸರ್ಕಾರ ಮುಂದಾಗುತ್ತಿಲ್ಲ.

ಹೀಗಾಗಿ ಇದೇ ರೀತಿಯ ಸಮಸ್ಯೆ ಮುಂದುವರೆದರೆ ಕುಡಿಯುವ ನೀರಿಗಾಗಿ ಮತ್ತಷ್ಟು ಬರ ಉಂಟಾಗುವ ಸಾಧ್ಯತೆ ಇದೆ. ಹಾಗಾಗಿ ಭೀಮಾ ನದಿಗೆ ತುರ್ತಾಗಿ ಆಲಮಟ್ಟಿ ಇಲ್ಲವೇ ಉಜನಿ ಜಲಾಶಯಗಳಿಂದ ನೀರು ಹರಿಸುವುದು ಅತ್ಯಂತ ಅಗತ್ಯವಾಗಿದೆ.

ಒಮ್ಮೆ ಅತಿವೃಷ್ಟಿಯಾದರೆ ಮಹಾರಾಷ್ಟ್ರದ ಹೆಚ್ಚುವರಿ ನೀರು ಬಿಡುವುದರಿಂದ ಭೀಮಾ ನದಿಯ ಕರ್ನಾಟಕದ ಪ್ರದೇಶದಲ್ಲಿ ಪ್ರವಾಹ ಉಂಟಾಗಿ ಸಾಕಷ್ಟು ಹಾನಿಯನ್ನುಂಟು ಮಾಡುತ್ತಿದೆ. ಮಳೆಗಾಲದಲ್ಲಿಯೇ ಭೀಮಾ ನದಿ ಬತ್ತಿ ಹೋಗುತ್ತಿರುವುದರಿಂದ ತುರ್ತು ಕ್ರಮ ಅಗತ್ಯವಾಗಿದೆ.

# ಅಪ್ರಾಪ್ತ ಬಾಲಕಿಗೆ ಲೈಂಗಿಕ ದೌರ್ಜನ್ಯ: ಅಪರಾಧಿಗೆ 20 ವರ್ಷ ಜೈಲು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಅಪ್ರಾಪ್ತ ಬಾಲಕಿಗೆ ಮದುವೆಯಾಗುವುದಾಗಿ ಘುಸಲಾಯಿಸಿ ಹೈದ್ರಾಬಾದ್‌ಗೆ ಕರೆದೊಯ್ದು ಅಲ್ಲಿ ಒಂದು ವಾರ ಕಾಲ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಅಪರಾಧಿ ನವೀನಕುಮಾರ್ ದಸ್ತಪ್ಪ ದುದ್ಯಾಲ್ (22) ಎಂಬಾತನಿಗೆ ಪೋಕ್ಸೋ ನ್ಯಾಯಾಲಯವು 20 ವರ್ಷಗಳ ಜೈಲು ಶಿಕ್ಷೆ ಹಾಗೂ 55000ರೂ.ಗಳ ದಂಡ ವಿಧಿಸಿ ತೀರ್ಪು ನೀಡಿದೆ.

ಕಳೆದ ವರ್ಷ 2025ರ ಮಾರ್ಚ್ 30ರಂದು ಬಾಲಕಿಗೆ ಕರೆ ಮಾಡಿ ಮಾತನಾಡುವುದಿದೆ ಎಂದು ಕರೆಸಿಕೊಂಡು ಪ್ರೀತಿಸುವುದಾಗಿ ಹೇಳಿ ಪಾಳು ಬಿದ್ದ ಮನೆಯೊಂದಕ್ಕೆ ಕರೆದೊಯ್ದು ಅಲ್ಲಿ ಲೈಂಗಿಕ ದೌರ್ಜನ್ಯ ಎಸಗಿದ್ದ. ನಂತರ ಜುಲೈ 12ರಂದು ಬೆಳಿಗ್ಗೆ ಬಾಲಕಿಗೆ ಕರೆ ಮಾಡಿ ಓಡಿ ಹೋಗಿ ಮದುವೆಯಾಗೋಣ ಎಂದು ಪುಸಲಾಯಿಸಿ ಕರೆಸಿಕೊಂಡು ಬಸ್ನಲ್ಲಿ ಸೇಡಂ ಪಟ್ಟಣಕ್ಕೆ ಬಂದು ಅಲ್ಲಿಂದ ಹೈದರಾಬಾದ್ಗೆ ಕರೆದೊಯ್ದ. ಅಲ್ಲಿ ಹೋಟೆಲೊಂದರಲ್ಲಿ ಕೆಲಸ ಹುಡುಕಿಕೊಂಡು ಒಂದು ವಾರ ಮನೆಯೊಂದನ್ನು ಬಾಡಿಗೆಗೆ ಪಡೆದು ಲೈಂಗಿಕ ದೌರ್ಜನ್ಯ ಎಸಗಿದ್ದ ಎನ್ನಲಾಗಿದೆ. ಬಾಲಕಿ ಹೇಳಿಕೆ ಆಧರಿಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ ಸೇಡಂ ಠಾಣೆಯ ಸಿಪಿಐ ಮಹಾದೇವಪ್ಪ ಹಾಗೂ ಕುರಕುಂಟಾ ಠಾಣೆಯ ಪಿಎಸ್ಐ ಚಿದಾನಂದ್ ಅವರು ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಜಿಲ್ಲಾ ಹೆಚ್ಚುವರಿ ಮತ್ತು ಸೆಷನ್ಸ್ (ವಿಶೇಷ ಪೋಕ್ಸೊ) ನ್ಯಾಯಾಲಯದ ನ್ಯಾಯಾಧೀಶ ಎಸ್.ಎಲ್. ಚವಾಣ್ ಸಿ.ಜಿ. ಅವರು ಪೋಕ್ಸೊ ಕಾಯ್ದೆಯ ವಿವಿಧ ಕಲಂ ಹಾಗೂ ಬಿಎನ್‌ಎಸ್ ಕಾಯ್ದೆಯಡಿ ಅಪರಾಧಿ ನವೀನ ಕುಮಾರಗೆ 20 ವರ್ಷ ಜೈಲು ಶಿಕ್ಷೆ ಹಾಗೂ 55 ಸಾವಿರ ರೂ.ಗಳ ದಂಡ ವಿಧಿಸಿ ಆದೇಶ ಹೊರಡಿಸಿದರು.

ನೊಂದ ಬಾಲಕಿಗೆ ಕಾನೂನು ಸೇವಾ ಪ್ರಾಧಿಕಾರದಿಂದ 5 ಲಕ್ಷ ರೂ.ಗಳ ಪರಿಹಾರವನ್ನು ತೀರ್ಪು ಪ್ರಕಟವಾದ ಒಂದು ತಿಂಗಳೊಳಗಾಗಿ ನೀಡುವಂತೆ ಆದೇಶದಲ್ಲಿ ತಿಳಿಸಿದ್ದಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಶಾಂತವೀರ ಬಿ. ತುಪ್ಪದ ವಾದ ಮಂಡಿಸಿದರು.

## ಪೂಜ್ಯ ವೇದಮೂರ್ತಿ ಷಣ್ಮುಖಯ್ಯ ಸ್ವಾಮಿ ಎಕಲಾರ ಲಿಂಗೈಕ್ಯ

**ಬೀದರ್:** ನೌಬಾದ–ಭಾಲ್ಕಿ ರಸ್ತೆಯಲ್ಲಿರುವ ಶ್ರೀ ಜಗದ್ಗುರು ಪಂಚಾಚಾರ್ಯ ಪುಣ್ಯಾಶ್ರಮದ ಸಂಚಾಲಕರು ಹಾಗೂ ತ್ರಿಕಾಲ ವಂದನಿಯ ಪೂಜ್ಯ



ವೇದಮೂರ್ತಿ ಷಣ್ಮುಖಯ್ಯ ಸ್ವಾಮಿ ಎಕಲರ್ ಇಂದು(26/06/2026) ಶುಕ್ರವಾರ ಬೆಳಿಗ್ಗೆ 3 ಗಂಟೆಗೆ ಲಿಂಗೈಕ್ಯರಾಗಿದ್ದಾರೆ. ಅವರಿಗೆ 86 ವರ್ಷ ವಯಸ್ಸಾಗಿತ್ತು.. ಅವರಿಗೆ ಪತ್ನಿ ತೇಜಮ್ಮ ತಾಯಿ, ಓರ್ವ ಹೆಣ್ಣು ಮಗಳು, ಇಬ್ಬರು ಗಂಡು ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಮಿತ್ರರನ್ನು ಬಿಟ್ಟು ಅಗಲಿದ್ದಾರೆ.

ಪೂಜ್ಯರು ಕಳೆದ ಮೂರು ವರೆ ದಶಕ(35 ವರ್ಷಗಳು)ಕ್ಕೂ ಹೆಚ್ಚು ಕಾಲ ಧಾರ್ಮಿಕ ಹಾಗೂ ಆಧ್ಯಾತ್ಮಿಕ ನೆಲೆಗಟ್ಟಿನಲ್ಲಿ ಗುರುತಿಸಿಕೊಂಡವರು. ಜಗದ್ಗುರು ಪಂಚಾಚಾರ್ಯ ಪುಣ್ಯಾಶ್ರಮವನ್ನು ನಿರ್ಮಿಸಲು ತನ್ನ ಸ್ವಂತದ ಹಣವನ್ನು ಖರ್ಚು ಮಾಡಿ ಆರು ವರೆ ಎಕರೆ ಜಮೀನನ್ನು ಖರೀದಿಸಿ ಪುಣ್ಯಾಶ್ರಮ ನಿರ್ಮಿಸಿ ರಂಭಾಪುರಿ ಜಗದ್ಗುರುಗಳ ಹೆಸರಿಗೆ ಮಾಡಿದ ಖ್ಯಾತಿ ಪೂಜ್ಯರಿಗೆ ಸಲ್ಲುತ್ತದೆ. ಹಾಗೆ ಪ್ರತಾಪನಗರದಲ್ಲಿ ತನ್ನ ಆರಾಧ್ಯ ಗುರು ಪೂಜ್ಯ ಷ.ಬ್ರ ತಮಲೂರಿನ ಶಿವಾನಂದ ಮಹಾಸ್ವಾಮಿಗಳವರ ಹೆಸರಿನಲ್ಲಿ ಮೂರು ವರೆ ಎಕರೆ ಜಮೀನು ಖರೀದಿಸಿ ಅಲ್ಲಿ ಮುಕ್ತಿಧಾಮ ನಿರ್ಮಿಸುವ ಮೂಲಕ ಹಾಗೂ ತನ್ನ ಇನ್ನೋರ್ವ ಗುರುಗಳಾದ ಭಾಲ್ಕಿಯ ಷ.ಬ್ರ ಲಿಂಗೈಕ್ಯ ಡಾ. ಚನ್ನಬಸವ ಪಟ್ಟದೇವರ ಹೆಸರಿನಲ್ಲಿ ಔರಾದ್ ತಾಲೂಕಿನ ಸಂತಪೂರಿನಲ್ಲಿ ಬಸವ ಮಂಟಪ ನಿರ್ಮಿಸಿರುವ ಖ್ಯಾತಿ ಪೂಜ್ಯರಿಗೆ ಸಲ್ಲುತ್ತದೆ. ಬೀದರ್ ಜಿಲ್ಲೆಯಲ್ಲಿಯೆ ಬ್ರಹತ್ತಾದ ಶ್ರೀ ಜಗದ್ಗುರು ರೇಣುಕಾಚಾರ್ಯರ ಭವ್ಯ ಮಂದಿರವನ್ನು ನಿರ್ಮಿಸಿ ಅದರ ಜೀರ್ಣೋದ್ಧಾರಕ್ಕಾಗಿ ತನ್ನ ಇಡೀ ಬದುಕನ್ನೇ ಸಮರ್ಪಿಸಿದ ಹೆಗ್ಗಳಿಕೆ ಇವರದು.

ಇವರ ಅಗಲಿಕೆಗೆ ರಂಭಾಪುರಿ ಜಗದ್ಗುರುಗಳು, ತಮಲೂರು ಶೀಗಳು, ಲಾಡಗೇರಿ, ಹೆಡಗಾಪುರ, ಹುಡಗಿ ಸೇರಿದಂತೆ ಹಲವರು ಶ್ರೀಗಳು ಶೃದ್ಧಾಂಜಲಿ ಸಲ್ಲಿಸಿ ಆಶಿರ್ವದಿಸಿದ್ದಾರೆ.

ಇವರ ಅಂತ್ಯಕ್ರಿಯೆ ಇಂದು(26/06/2026) ಶುಕ್ರವಾರ ಮಧ್ಯಾಹ್ನ 3 ಗಂಟೆಗೆ ಜಗದ್ಗುರು ಪಂಚಾಚಾರ್ಯ ಪುಣ್ಯಾಶ್ರಮದಲ್ಲಿ ನಡೆಯಲಿದೆ.

## ಶ್ರೀ ವಾಲ್ಮೀಕಿ ಕಲಾ ಸೇವಾ ರಾಷ್ಟ್ರೀಯ ಪ್ರಶಸ್ತಿಗೆ ಕುಮಾರಿ ಕೆ. ಎಲ್. ಸಾನ್ವಿ ಆಯ್ಕೆ

**ಹಗರಿಬೊಮ್ಮನಹಳ್ಳಿ:** ಪಟ್ಟಣದ ವಿ.ವಿ.ಎಸ್. ಎಂ.ಪಿ ಪ್ರಕಾಶ್ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ 3ನೇ ತರಗತಿ ವಿದ್ಯಾರ್ಥಿನಿ ಕುಮಾರಿ



ಕೆ. ಎಲ್. ಸಾನ್ವಿ ಶ್ರೀ ವಾಲ್ಮೀಕಿ ಕಲಾ ಸೇವಾ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಹೊಸಪೇಟೆಯ ಶ್ರೀ ವಾಲ್ಮೀಕಿ ಮಹಿಳಾ ಕಲಾ ಸಂಸ್ಥೆ ನೀಡುವ 2025 –26 ನೇ ಸಾಲಿನ ರಾಷ್ಟ್ರೀಯ ಪ್ರಶಸ್ತಿಗೆ ಭರತನಾಟ್ಯ ವಿಭಾಗದಲ್ಲಿ ಪ್ರತಿಭೆ ಹೊಂದಿರುವ ವಿದ್ಯಾರ್ಥಿಯನ್ನು ಸಂಸ್ಥೆಯ ಅಧ್ಯಕ್ಷರಾದ ಅನುರಾಧ ವಾಲ್ಮೀಕಿ ಗಮನಿಸಿ ಪ್ರಶಸ್ತಿಗೆ ಆಯ್ಕೆ ಮಾಡಿರುವದಾಗಿ ತಿಳಿಸಿದ್ದಾರೆ. ಹಗರಿಬೊಮ್ಮನಹಳ್ಳಿ ಪಟ್ಟಣದ ರಾಮನಗರದ ವೈ ಜಯಂತಿ ಮಾಲ ಲಕ್ಷ್ಮಿಪತಿ ಕುಪ್ಪ ಇವರ ಪುತ್ರಿ ಕೆ ಎಲ್. ಸಾನ್ವಿ ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳ ವೇದಿಕೆಯಲ್ಲಿ ನೃತ್ಯ ಮತ್ತು ಭರತನಾಟ್ಯ ಪ್ರದರ್ಶನ ಮಾಡಿ ಮೆಚ್ಚುಗೆ ಗಳಿಸುವ ಮೂಲಕ ಹಲವು ಬಹುಮಾನಗಳನ್ನು ಪಡೆದಿರುತ್ತಾಳೆ. 28ನೇ ಜೂನ್ 2026 ರಂದು ವಿಜಯನಗರ ಜಿಲ್ಲೆಯಲ್ಲಿ ನಡೆಯುವ 13 ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಕೆ ಎಲ್. ಸಾನ್ವಿಗೆ ಪ್ರಶಸ್ತಿ ಪ್ರಧಾನ ಮಾಡಲಾಗುವುದು ಎಂದು ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಬಾಲ ಪ್ರತಿಭೆ ಕೆ. ಎಲ್. ಸಾನ್ವಿಗೆ ಎಂ. ಪಿ ಪ್ರಕಾಶ್ ಶಾಲೆಯ ಮುಖ್ಯ ಶಿಕ್ಷಕಿ ಮಧುಮತಿ ಹಾಗೂ ಶಿಕ್ಷಕರ ಬಳಗ ಅಭಿನಂದನೆ ತಿಳಿಸುವ ಮೂಲಕ ಹಾರೈಸಿದ್ದಾರೆ. ಹಾಗೂ ಆರ್ಯವೈಶ್ಯ ಸಂಘ ಟ್ರಸ್ಟ್ ( ರಿ ) ಅಧ್ಯಕ್ಷರಾದ ಕೊರಗಲ್ ರಾಘವೇಂದ್ರ ಅವರು ಅಭಿನಂದನೆ ತಿಳಿಸಿದ್ದಾರೆ ಹಾಗೂ ಆರ್ಯವೈಶ್ಯ ಮಹಿಳಾ ಮಂಡಳಿ, ವಾಸವಿ ಯುವ ಜನ ಸಂಘ, ವಾಸವಿ ವನಿತ ಸಂಘ, ಆಪೋಪ ಸಂಘ. ಎಲ್ಲಾ ಸಂಘದ ಅಧ್ಯಕ್ಷರುಗಳು ಅಭಿನಂದನೆ ತಿಳಿಸಿದ್ದಾರೆ. ಹಗರಿಬೊಮ್ಮನಹಳ್ಳಿಯ ಆರ್ಯವೈಶ್ಯ ಕುಲಬಾಂಧವರು ಅಭಿನಂದನೆ ತಿಳಿಸುವ ಮೂಲಕ ಹಾರೈಸಿದ್ದಾರೆ ಹಾಗೂ ದರ್ಶನ್ ಹೋಟೆಲ್ ಮಾಲೀಕರಾದ ಎಸ್ ಎಂ ಗಂಗಾಧರಯ್ಯ ಅಪ್ತ ಗೆಳೆಯರ ಬಳಗ ಸಹ ಅಭಿನಂದನೆ ತಿಳಿಸುವ ಮೂಲಕ ಹಾರೈಸಿದ್ದಾರೆ.

# ನಗರದಲ್ಲಿ ಪ್ರವಾಹ ಉಂಟಾಗದಂತೆ ಕ್ರಮ: ಸಚಿವ





• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಕಳೆದ ವರ್ಷದ ಮಳೆಗಾಲದಲ್ಲಿ ನಗರದಲ್ಲಿ ಪ್ರವಾಹ ಉಂಟಾಗಿದ್ದರಿಂದ ಪ್ರವಾಹ ನಿಯಂತ್ರಣ ನಿಧಿಯಡಿ ಹಾಗೂ ಮಹಾನಗರ ಪಾಲಿಕೆ ವಿಜಯಪುರದಿಂದ ಕೈಗೊಂಡ ಹಲವು ಅಭಿವೃದ್ಧಿ ಕಾರ್ಯಗಳನ್ನು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಡಾ.ಎಂ.ಬಿ. ಪಾಟೀಲ ಶುಕ್ರವಾರ ಪರಿಶೀಲಿಸಿದರು.

ನಗರದ ಶಿವಾಜಿ ವೃತ್ತದಲ್ಲಿ ಕೈಗೊಂಡ ಕಾಮಗಾರಿಗಳನ್ನು ಖುದ್ದು ವೀಕ್ಷಿಸಿದ ಬಳಿಕ ಮಾತನಾಡಿದ ಅವರು, ಕಳೆದ ವರ್ಷ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದರಿಂದ ನಗರದ ಕೆಲವು ಮನೆಗಳಲ್ಲಿ ನೀರು ನುಗ್ಗಿ ಹಾನಿಯಾಗಿತ್ತು. ಇದು ಮತ್ತೆ ಪುನರಾವರ್ತನೆಯಾಗಬಾರದೆಂದೇ ಕೋಟೆ ಗೋಡೆ ಕಂದಕ ಹಾಗೂ ಕಾಲುವೆಗಳ ಹೂಳು ತೆಗೆಯುವ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ ಎಂದರು.

ಕಂದಕಗಳಲ್ಲಿ ಮಣ್ಣು ಕುಸಿಯಬಾರೆಂದು ಪಿಚ್ಚಿಂಗ್ ಮಾಡಲಾಗುತ್ತಿದೆ. ಇಲ್ಲಿಯವರೆಗೆ ಇದಕ್ಕೆಂದೇ 6 ಕೋಟಿ ರೂ. ವೆಚ್ಚದ ಕಾಮಗಾರಿ ಕೈಗೊಳ್ಳಲಾಗಿದೆ. ಕೆಲವು ಕಾಮಗಾರಿಗಳ ಬದಲಾವಣೆ ಮಾಡಿ ಈ ಕಾಮಗಾರಿಗೆ ಅನುದಾನ ಹೊಂದಾಣಿಕೆ ಮಾಡಲಾಗಿದೆ. ಬಿಡಿಎ ಹಾಗೂ ಪಾಲಿಕೆಯಿಂದ ಕಾಮಗಾರಿ ಬದಲಾವಣೆ ಮಾಡಿ ಅನುದಾನ ಒದಗಿಸಲಾಗುತ್ತಿದೆ. ಆದಾಗ್ಯೂ ಅಗತ್ಯ ಬಿದ್ದರೆ ನನ್ನ ಮತಕ್ಷೇತ್ರದ ಕೆಲ ಕಾಮಗಾರಿ ಬದಲಾವಣೆ ಮಾಡಿ ಇದಕ್ಕೆ ಅನುದಾನ ಕೊಡಿಸುವುದಾಗಿ ಸಚಿವರು ಹೇಳಿದರು. ಇನ್ನೂ ಅನುದಾನದ ಅಗತ್ಯ ಬಿದ್ದರೆ, ಯಾವುದಾದರೂ ಕಂಪನಿಯನ್ನು ಸಂಪರ್ಕಿಸಿ, ಆ ಕಂಪನಿಯ ಸಿಎಸ್ ಆರ್ ಅನುದಾನವನ್ನೂ ಕಾಮಗಾರಿಗೆ ಕೊಡಿಸುವುದಾಗಿ ಸಚಿವರು ಹೇಳಿದರು.

ನಗರದಲ್ಲಿ ಅದೆಷ್ಟೇ ಮಳೆಯಾದರೂ ನಗರ ಭಾಗದಲ್ಲಿ ಪ್ರವಾಹ ಉಂಟಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದ್ದು, ಕಂದಕ ಸೇರಿದಂತೆ ಇತರೆ ಸ್ಥಳಗಳಲ್ಲಿ ಶಾಶ್ವತವಾದ ಕಾಮಗಾರಿಗಳನ್ನು ಮಾಡಲಾಗುತ್ತಿದೆ ಎಂದರು. ನಗರ ಭಾಗದ ರಸ್ತೆಗಳ ಕಾಮಗಾರಿಗೆ 150 ಕೋಟಿ ಹಣ ಮಂಜೂರು ಮಾಡಲಾಗಿದೆ. ಈ ಮೊತ್ತದಲ್ಲಿ ರಸ್ತೆಗಳ ಕೆಲಸ ಕಾಮಗಾರಿಗಳು ನಡೆಯುತ್ತವೆ ಎಂದ ಅವರು, ನಗರದಲ್ಲಿ ಪ್ರವಾಹ ತಡೆ ಕಾಮಗಾರಿ ಕೈಗೆತ್ತಿಕೊಂಡಿದ್ದಕ್ಕೆ ಪಾಲಿಕೆ ಸದಸ್ಯರು ಹಾಗೂ ಸಾರ್ವಜನಿಕರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗುತ್ತಿದೆ ಎಂದು ಸಚಿವರು ಇದೇ ವೇಳೆ ಹೇಳಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಮೇಯರ್ ಮಡಿವಾಳಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಗಂಗಾಧರ ಸಂಬಣ್ಣಿ, ಜಿಲ್ಲಾಧಿಕಾರಿಗಳಾದ ಆನಂದ ಕೆ ಹಾಗೂ ಪಾಲಿಕೆಯ ಆಯುಕ್ತರಾದ ವಿಜಯ ಮೆಕ್ಕಳಕಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದರು.

## ಮಹಾನುಭಾವಿ ಅಲ್ಲಮಪ್ರಭು ವಿಚಾರ ಸಂಕಿರಣ



• ಮಲ್ಲಮ್ಮ ನುಡಿ ವಾರ್ತೆ ಬೀದರ್

ವಚನಾಮೃತ ಕನ್ನಡ ಸಂಘದಿಂದ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಜುಲೈ 10 ರಂದು ಹಮ್ಮಿಕೊಳ್ಳಲಾದ ಮಹಾನುಭಾವಿ ಅಲ್ಲಮಪ್ರಭು ದೇವರು ವಿಚಾರ ಸಂಕಿರಣದ ಸ್ವಾಗತ ಸಮಿತಿಯ ಅಧ್ಯಕ್ಷರಾಗಿ ಪ್ರೊ. ಉಮಾಕಾಂತ ಮೀಸೆ ಅವರನ್ನು ಆಯ್ಕೆ ಮಾಡಲಾಗಿದೆ.

ನಗರದಲ್ಲಿ ಶುಕ್ರವಾರ ವಚನಾಮೃತ ಕನ್ನಡ ಸಂಘದ ಅಧ್ಯಕ್ಷ ಪ್ರೊ. ಸಿದ್ರಾಮಪ್ಪ ಮಾಸಿಮಾಡೆ ಅವರು ಮೀಸೆ ಅವರಿಗೆ ಶಾಲು ಹೊದಿಸಿ ಗೌರವಿಸಿದರು. ವಿಚಾರ ಸಂಕಿರಣದಲ್ಲಿ ನಾಡಿನ ಹಲವರು ವಿದ್ವಾಂಸರು ಉಪನ್ಯಾಸ ನೀಡಲಿದ್ದಾರೆ. ಗಣ್ಯರು ಪಾಲ್ಗೊಳ್ಳಲಿದ್ದಾರೆ. ವಿಚಾರ ಸಂಕಿರಣದ ಯಶಸ್ವಿಗೆ ಸ್ವಾಗತ ಸೇರಿ ವಿವಿಧ ಸಮಿತಿಗಳನ್ನು ರಚಿಸಲಾಗಿದೆ ಎಂದು ಅವರು ತಿಳಿಸಿದರು.

ಅಲ್ಲಮಪ್ರಭು ದೇವರು ಆಧ್ಯಾತ್ಮ ಲೋಕದ ಶಿಖರಪ್ರಾಯದ ಅನುಭಾವಿಯಾಗಿದ್ದರು. ಅವರ ವ್ಯಕ್ತಿತ್ವ ಹಾಗೂ ವಿಚಾರಗಳನ್ನು ಜನರಿಗೆ ತಿಳಿಸಲು ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ತಿಳಿಸಿದರು. ಪ್ರಮುಖರಾದ ಪರಮೇಶ್ವರ ಬಿರಾದಾರ, ಸಂತೋಷ ಮಂಗಳೂರೆ, ಕೆ. ಸತ್ಯಮೂರ್ತಿ, ಶ್ರೀಕಾಂತ ಬಿರಾದಾರ, ಪ್ರಕಾಶ ಪಾಟೀಲ ಜೈನಾಪುರ, ಪರಮೇಶ್ವರ ಮುಗಟೆ, ಬಸವರಾಜ ಬಿರಾದಾರ, ಬಸವರಾಜ ಬೆಳಕುಣೆ, ಸಿದ್ರಾಮ ಸಪಾಟೆ, ಕಲ್ಯಾಣರಾವ್ ಹೊಸಖಂಡೆ, ಪದ್ಮರಾಜ್ ಮತ್ತಿತರರು ಇದ್ದರು.

## ಸಂಡೂರಿನಲ್ಲಿ ಬಾಲಕಾರ್ಮಿಕರ ರಕ್ಷಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಂಡೂರು ತಾಲೂಕಿನ ಚೋರನೂರು ಹೋಬಳಿ ವ್ಯಾಪ್ತಿಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಜಂಟಿ ಆಶ್ರಯದಲ್ಲಿ ಗುರುವಾರ ಹಠಾತ್ ದಾಳಿ ನಡೆಸಿ, ಇಬ್ಬರು ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಯಶಸ್ವಿಯಾಗಿ ರಕ್ಷಿಸಲಾಗಿದೆ.

ಸಂಡೂರು ತಾಲೂಕಿನ ಚೋರನೂರು ಹೋಬಳಿ ವ್ಯಾಪ್ತಿಯ ಸುಮಾರು 25 ಉದ್ದಿಮೆ ಹಾಗೂ ಅಂಗಡಿ ಮುಂಗಟ್ಟುಗಳ ಮೇಲೆ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸದಸ್ಯರು ಜಂಟಿಯಾಗಿ ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ಕಾನೂನು ಬಾಹಿರವಾಗಿ ಕೆಲಸ ಮಾಡುತ್ತಿದ್ದ ಇಬ್ಬರು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ಪತ್ತೆ ಹಚ್ಚಿ, ಕೆಲಸದಿಂದ ಮುಕ್ತಿಗೊಳಿಸಲಾಗಿದೆ. ರಕ್ಷಿಸಲ್ಪಟ್ಟ ಮಕ್ಕಳನ್ನು ಅವರು ಈ ಹಿಂದೆ ವ್ಯಾಸಂಗ ಮಾಡುತ್ತಿದ್ದ ಶಾಲೆಗೆ ಮರು ದಾಖಲಿಸಲು ಕ್ರಮ ಕೈಗೊಳ್ಳಲಾಗಿದೆ.



ಮಕ್ಕಳ ವಯಸ್ಸಿನ ದಾಖಲಾತಿಗಳನ್ನು ಪಡೆದುಕೊಂಡಿರುವ ಅಧಿಕಾರಿಗಳು, ಬಾಲಕಾರ್ಮಿಕರನ್ನು ಕೆಲಸಕ್ಕೆ ಇಟ್ಟುಕೊಂಡಿದ್ದ ಮಾಲೀಕರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಬಾಲಕಾರ್ಮಿಕ ಕಾಯ್ದೆಯಡಿ ಪ್ರಕರಣ ದಾಖಲಿಸಲು ಮುಂದಾಗಿದ್ದಾರೆ. ಇದೇ ವೇಳೆ, ಇನ್ನು ಮುಂದೆ ಅಂಗಡಿ ಮತ್ತು ಉದ್ದಿಮೆಗಳಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಯಾವುದೇ ಕಾರಣಕ್ಕೂ ಕೆಲಸಕ್ಕೆ ನೇಮಿಸಿಕೊಳ್ಳಬಾರದು ಎಂದು ಮಾಲೀಕರಿಗೆ ಎಚ್ಚರಿಕೆ ನೀಡಿ, ಪೋಸ್ಟರ್‌ಗಳನ್ನು ಹಂಚುವ ಮೂಲಕ ಜಾಗೃತಿ ಮೂಡಿಸಲಾಯಿತು.

## ಸಯ್ಯದ್ ಅಕ್ಬರ್ ಹುಸೇನಿ ಶಾಲೆಯಲ್ಲಿ ಅಂತರ ಶಾಲಾ ಸ್ಪರ್ಧೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರ್ಗಿ

ಸ್ಥಳೀಯ ಸಯ್ಯದ್ ಅಕ್ಬರ್ ಹುಸೇನಿ ಪ್ರೌಢಶಾಲೆಯಲ್ಲಿ (ICSE/ISC-KG to XII) 25 ಜೂನ್ 2026ಗುರುವಾರರಂದು ಉತ್ತರ ಕರ್ನಾಟಕದಾದ್ಯಂತ ವಿವಿಧ ICSE ಶಾಲೆಗಳ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಒಟ್ಟುಗೂಡಿಸಿ ಕರ್ನಾಟಕ ICSE ಶಾಲೆಗಳ ಸಂಘದ ಅಂತರ–ಶಾಲಾ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.



ಈ ಕಾರ್ಯಕ್ರಮವು ಯುವ ಮನಸ್ಸುಗಳಿಗೆ ತಮ್ಮ ಸೃಜನಶೀಲತೆ, ಜ್ಞಾನ, ಸಂವಹನ ಕೌಶಲ್ಯ ಮತ್ತು ಕಲಾತ್ಮಕ ಪ್ರತಿಭೆಯನ್ನು ಆರೋಗ್ಯಕರ ಸ್ಪರ್ಧೆಯಡಿ ಉತ್ಸಾಹದಲ್ಲಿ ಪ್ರದರ್ಶಿಸಲು ರೋಮಾಂಚಕ ವೇದಿಕೆಯನ್ನು ಒದಗಿಸಿತು. ಕಾರ್ಯಕ್ರಮವು VIII ನೇ ತರಗತಿಯ ವಿದ್ಯಾರ್ಥಿಗಳ ಭಾವಪೂರ್ಣ ಆವಾಹನೆಯೊಂದಿಗೆ ಪ್ರಾರಂಭವಾಯಿತು. ಇದರ ನಂತರ ಒಂಬತ್ತನೇ ತರಗತಿಯಿಂದ ಶಾಲಾ ಗಾಯಕ–ರಿಂದ ಶಾಲಾ ಗೀತೆಯನ್ನು ಪ್ರಸ್ತುತಪಡಿಸಲಾಯಿತು. ಹತ್ತನೇ ತರಗತಿಯ ಮಿರ್ಜಾ ಉಜಿರೆ ಬೇಗ್ ಸ್ವಾಗತ ಭಾಷಣ ಮಾಡಿದರು. ಕೆಬಿಎನ್ ಸೊಸೈಟಿಯ ಕಾರ್ಯದರ್ಶಿ ಶ್ರೀ ಬೆನ್ನಿ ಕುರಿಯಾಕೋಸ್ ಅವರು ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡುತ್ತ ವಿದ್ಯಾರ್ಥಿಗಳು ಉತ್ಸಾಹ, ಸಮಗ್ರತೆ ಮತ್ತು ಕ್ರೀಡಾ ಮನೋಭಾವದಿಂದ ಭಾಗವಹಿಸಲು ಪ್ರೋತ್ಸಾಹಿಸಿದರು.

ಪ್ರಾಂಶುಪಾಲರಾದ ಶ್ರೀ ಲಿಜೀಶ್ ತುರುತಿಲ್ ಅವರು ಸಭೆಯನ್ನು ಸ್ವಾಗತಿಸಿ, ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಸೃಜನಶೀಲತೆ, ಸಾಂಘಿಕ ಕಾರ್ಯ ಮತ್ತು ಸಮಗ್ರ ಬೆಳವಣಿಗೆಯನ್ನು ಉತ್ತೇಜಿಸುವಲ್ಲಿ ಅಂತರ್ ಶಾಲಾ ಸ್ಪರ್ಧೆಗಳ ಮಹತ್ವವನ್ನು ತಿಳಿಸಿದರು.

ಸ್ಪರ್ಧೆಗಳಲ್ಲಿ ಘೋಷಣೆ, ರಸಪ್ರಶ್ನೆ, ಡಿಬೇಟ, ಡ್ರಾಯಿಂಗ್ ಮತ್ತು ಪೇಂಟಿಂಗ್ ಮತ್ತು ಸೃಜನಾತ್ಮಕ ಬರವಣಿಗೆ ಒಳಗೊಂಡಿದ್ದವು. ಹಲವಾರು ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದರು. ಸ್ಪರ್ಧೆಗಳ ನಂತರ ಪ್ರಾಂಶುಪಾಲ ಶ್ರೀ ಲಿಜೀಶ್ ತುರುತಿಲ್ ಅವರು ವಿಜೇತರನ್ನು ಘೋಷಿಸಿದರು. ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು. ವೈಸ್ ಪ್ರಿನ್ಸಿಪಾಲ್ ಶ್ರೀಮತಿ ಲಿಸ್ಸಿ ಬೆನ್ನಿ, ಶೈಕ್ಷಣಿಕ ಸಂಯೋಜಕಿ ಶ್ರೀಮತಿ ಸೈಯದಾ ಫೌಜಿಯಾ, ಸಾಂಸ್ಕೃತಿಕ ಸಂಯೋಜಕಿ ಶ್ರೀಮತಿ ಅಂಜುಮೋಲ್ ಬೆನ್ನಿ, ಸಾಂಸ್ಕೃತಿಕ ಉಸ್ತುವಾರಿಗಳಾದ ಶ್ರೀ ನಾಸಿರ್, ಶ್ರೀಮತಿ ನಸೀರಾ, ಶ್ರೀಮತಿ ಅಜ್ಮಾ ನೂರ್, ಅಬೂಬಕರ್, ಶ್ರೀಮತಿ ರಾಜೇಶ್ವರಿ, ಮತ್ತು ಸಮಸ್ತ ಶಿಕ್ಷಕ ವೃಂದದವರು ಹಾಜರಿದ್ದರು.

# ಸಗರ ನಾಡಿನ ಸಾಹಿತ್ಯದ ಸತ್ವರತ್ನ: ಪ್ರಾಚಾರ್ಯ ದೊಡ್ಡಬಸಪ್ಪ ಬಳೂರಗಿ



**ಆದರ್ಶ–ವ್ಯಕ್ತಿತ್ವ**

● ಡಾ. ಯಂಕನಗೌಡ ಪಾಟೀಲ್
ಉಪನ್ಯಾಸಕರು, ಕೆಂಭಾವಿ


ಸಗರ ನಾಡಿನ ಒಡಲು, ಕೃಷ್ಣಾ–ಭೀಮೆಯರ ಮಡಿಲು. ಸಾಹಿತ್ಯದ ಪರಿಮಳವನ್ನು ಪಸರಿಸಿದ ಈ ಪುಣ್ಯಭೂಮಿ ಸೂಫಿ ಸಂತರು, ದಾಸ ಶ್ರೇಷ್ಠರು, ಶಿವಶರಣರು, ಸಮಾಜ ಸುಧಾರಕರು ಹಾಗೂ ಕವಿ–ಕಲಾವಿದರನ್ನು ಜಗತ್ತಿಗೆ ನೀಡಿದ ಹೆಮ್ಮೆಯ ನಾಡು. ಅಂತಹ ಸಾಂಸ್ಕೃತಿಕ ಪರಂಪರೆಯ ಹಿನ್ನೆಲೆಯಲ್ಲಿ, ತಮ್ಮ ವೃತ್ತಿ ಮತ್ತು ಪ್ರವೃತ್ತಿಗಳ ಮೂಲಕ ಆದರ್ಶ ವ್ಯಕ್ತಿತ್ವವಾಗಿ ಮೂಡಿಬಂದವರು ಮಿಸ್ಟರ್ ದೊಡ್ಡಬಸಪ್ಪ ಬಳೂರಗಿ.

**ಅರ್ಧಶತಮಾನದ ಸಾಹಿತ್ಯ ಸೇವೆ ಮತ್ತು ಕಡೆಗಣನೆಯ ಕಹಿ:** ಹಣ್ಣಿನ ಹರೆಯ 77 ರ ಹೊಸ್ತಿಲಲ್ಲಿ ನಿಂತಿರುವ ಪ್ರಾಚಾರ್ಯ ದೊಡ್ಡಬಸಪ್ಪ ಬಳೂರಗಿ ಅವರು ಕಳೆದ ಐದು ದಶಕಗಳಿಂದ ಯಾವುದೇ ಸದ್ದು–ಗದ್ದಲವಿಲ್ಲದೆ, ಪ್ರಚಾರದ ಹಪಾಹಪಿತನವಿಲ್ಲದೆ ಮೌನ ಕ್ರಾಂತಿಯ ಮೂಲಕ ಸಗರ ನಾಡಿನ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ ಹಿರಿಯ ಚೇತನ. ವೃತ್ತಿಯಲ್ಲಿ ಪ್ರಾಂಶುಪಾಲರಾಗಿ ಜ್ಞಾನದೀವಿಗೆ ಬೆಳಗುತ್ತಲೇ, ಪ್ರವೃತ್ತಿಯಲ್ಲಿ ನಾಡು–ನುಡಿಯ ಸೇವೆಯನ್ನು ಉಸಿರಾಗಿಸಿಕೊಂಡು 16ಕ್ಕೂ ಹೆಚ್ಚು ಪ್ರೌಢ ಕೃತಿಗಳನ್ನು ಸಾರಸ್ವತ ಲೋಕಕ್ಕೆ ಧಾರೆಯೆರೆದ ಹೆಗ್ಗಳಿಕೆ ಇವರದ್ದು.

ಆದರೆ, ಮೌಲ್ಯಗಳನ್ನು ಗಾಳಿಗೆ ತೂರಿ, ಇಂದಿನ ಕಲುಷಿತ ಕಾಲಘಟ್ಟದಲ್ಲಿ, ಇಂತಹ ಪ್ರಾಮಾಣಿಕ ಸಾಧಕರು ಮೂಲೆಗುಂಪಾಗುತ್ತಿರುವುದು ಇಡೀ ಸಾಹಿತ್ಯವಲಯಕ್ಕೇ ಆವರಿಸಿದ ದುರಂತವಾಗಿದೆ. ಅರ್ಹತೆಗಿಂತ ಪ್ರಚಾರವೇ ಮಾನದಂಡವಾಗುತ್ತಿರುವ ಹೊತ್ತಿನಲ್ಲಿ, ಇಳಿವಯಸ್ಸಿನ ಈ ಹಂತದಲ್ಲೂ ಇವರಿಗೆ ದಕ್ಕಬೇಕಾದ ಉನ್ನತ ಸ್ಥಾನಮಾನಗಳು ಇಂದಿಗೂ ಮರೀಚಿಕೆಯಾಗಿಯೇ ಉಳಿದಿರುವುದು ತೀವ್ರ ಬೇಸರದ ಸಂಗತಿ. ಸಾಧಕರ ಕೊಡುಗೆಯನ್ನು ಅವರು ಬದುಕಿರುವಾಗಲೇ ಗೌರವಿಸಬೇಕಾದದ್ದು ವ್ಯವಸ್ಥೆಯ ಕರ್ತವ್ಯವಾಗಿದೆ.

ಯಾದಗಿರಿ ಜಿಲ್ಲೆಯ ಶಹಾಪೂರದಲ್ಲಿ ನೆಲೆನಿಂತಿರುವ ಇವರು ಹುಣಸಗಿ ತಾಲೂಕಿನ ಅರಕೇರಿ (ಜಾಗೀರ) ಗ್ರಾಮದ ಆದರ್ಶ ದಂಪತಿಗಳಾದ ಶಿವಮ್ಮ ಮತ್ತು ಗುರುಬಸಪ್ಪ ಬಳೂರಗಿ ಅವರ ಮಗನಾಗಿ 04 ಮೇ 1950 ರಂದು ಜನಿಸಿದರು. ಪ್ರಾಥಮಿಕ ಶಿಕ್ಷಣವನ್ನು ಸ್ವಗ್ರಾಮದಲ್ಲಿ ಮುಗಿಸಿದ ಶ್ರೀಯುತರು, 7ನೇ ತರಗತಿಯನ್ನು ಹುಣಸಗಿಯಲ್ಲಿ, ಪ್ರೌಢ ಶಿಕ್ಷಣವನ್ನು ತಾಳಿಕೋಟೆಯಲ್ಲಿ ಹಾಗೂ ಪದವಿ ಶಿಕ್ಷಣವನ್ನು ಬಾಗಲಕೋಟೆಯಲ್ಲಿ ಪೂರೈಸಿದರು. ಬಳಿಕ ಜಮಖಂಡಿಯಲ್ಲಿ ಬಿ.ಇಡಿ ಪದವಿ ಪಡೆದರು.

**ಶೈಕ್ಷಣಿಕ ಸೇವೆ ಮತ್ತು ವೃತ್ತಿ ಬದುಕು:** 1974 ರಲ್ಲಿ ಗುರುಮಠಕಲ್ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕರಾಗಿ ವೃತ್ತಿ ಬದುಕು ಆರಂಭಿಸಿದ ಬಳೂರಗಿಯವರು, ಜ್ಞಾನದ ಹಸಿವನ್ನು ಇಂಗಿಸಿಕೊಳ್ಳದೆ 1976 ರಲ್ಲಿ ಕನ್ನಡ



ವಿಷಯದಲ್ಲಿ ಹಾಗೂ 1984 ರಲ್ಲಿ ಅರ್ಥಶಾಸ್ತ್ರ ವಿಷಯದಲ್ಲಿ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಿಂದ ಸ್ನಾತ–ಕೋತ್ತರ (ಎಂ.ಎ) ಪದವಿ ಪಡೆದರು. ಮುಂದೆ 1986 ರಲ್ಲಿ ಭೀಮರಾಯನಗುಡಿಯ ಕಾಲೇಜಿನಲ್ಲಿ ಅರ್ಥಶಾಸ್ತ್ರ ಉಪನ್ಯಾಸಕರಾಗಿ ಸೇವೆ ಆರಂಭಿಸಿ, 2005 ರಲ್ಲಿ ಗೋಗಿ ಕಾಲೇಜಿನ ಪ್ರಾಂಶುಪಾಲರಾಗಿ ಬಡ್ತಿ ಪಡೆದರು.

ಜ್ಞಾನದೀವಿಗೆಯನ್ನು ಬೆಳಗಿದ ಇವರು 31 ಮೇ 2008 ರಂದು ವಯೋನಿವೃತ್ತಿ ಹೊಂದಿದರು. ಸದ್ಯ ಧರ್ಮಪತ್ನಿ ನಾಗಲಿಂಗಮ್ಮ, ಮಕ್ಕಳು ಹಾಗೂ ಮೊಮ್ಮಕ್ಕಳೊಂದಿಗೆ ಶಹಾಪುರದ "ಪ್ರೇಮ ಕುಂಜ" ನಿವಾಸದಲ್ಲಿ ವಿಶ್ರಾಂತ ಜೀವನ ನಡೆಸುತ್ತಿದ್ದಾರೆ.

**ಸಾಹಿತ್ಯಿಕ ಕೃಷಿ ಮತ್ತು ಸಂಘಟನೆ:** ವಿದ್ಯಾರ್ಥಿ ದೆಸೆಯಿಂದಲೇ ಸಾಹಿತ್ಯದ ನಂಟು ಹೊಂದಿದ್ದ ಬಳೂರಗಿ ಮೇಸ್ಟ್ರು, ಕಥೆ, ಕವನ, ಮಹಾತ್ಮರ ಜೀವನ ಚರಿತ್ರೆ, ವಚನ ಹಾಗೂ ವೈಚಾರಿಕ ಪ್ರಬಂಧಗಳೂ ಸೇರಿದಂತೆ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ಮೌಲ್ಯಯುತ 20 ಕ್ಕೂ ಹೆಚ್ಚು ಕೃತಿಗಳನ್ನು ಹಾಗೂ 100ಕ್ಕೂ ಹೆಚ್ಚು ಬಿಡಿ ಲೇಖನಗಳನ್ನು ಪ್ರಕಟಿಸಿದ್ದಾರೆ. ಇವರ ಸಾಕಷ್ಟು ಚಿಂತನೆಗಳು ಕಲಬುರ್ಗಿ ಆಕಾಶವಾಣಿ ಕೇಂದ್ರದಿಂದ ಬಿತ್ತರಗೊಂಡಿವೆ. ಶರಣ ಸಾಹಿತ್ಯ ಪರಿಷತ್ ಮತ್ತು ಕನ್ನಡ ಸಾಹಿತ್ಯ ಪರಿಷತ್ತಿನ ವಿವಿಧ ಗೋಷ್ಠಿಗಳಲ್ಲಿ ಭಾಗವಹಿಸಿ ಭವಿಷ್ಯದ ಸಾಹಿತ್ಯಿಕ ಸ್ಥಿತಿಗತಿಗಳ ಮೇಲೆ ಬೆಳಕು ಚೆಲ್ಲಿದ್ದಾರೆ. ಇವರ ಸಾಂಘಿಕ ಶಕ್ತಿಗೆ ಸಾಕ್ಷಿಯೆಂಬಂತೆ ಶಹಾಪುರ ತಾಲೂಕು ಕಸಾಪ ಅಧ್ಯಕ್ಷರಾಗಿ, ಖಜಾಂಚಿಯಾಗಿ, ಹಾಗೂ ಕರ್ನಾಟಕ ಸರ್ಕಾರಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ತಾಲೂಕು ಪ್ರತಿನಿಧಿಯಾಗಿ (1995–1998) ಕಾರ್ಯನಿರ್ವಹಿಸಿ ಸೈ ಎನಿಸಿಕೊಂಡಿದ್ದಾರೆ.

**ಸಂಶೋಧನೆ ಮತ್ತು ಪ್ರಶಸ್ತಿಗಳು:** ಬಳೂರಗಿ ಅವರ ಸಾಹಿತ್ಯದ ಶ್ರೀಮಂತಿಕೆಯನ್ನು ಗುರುತಿಸಿ ಕಲ್ಬುರ್ಗಿ ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿ ಮೇಘನಾ ಮಹಾದೇವಪ್ಪ ಅವರು 'ದೊಡ್ಡಬಸಪ್ಪ ಬಳೂರಗಿ ಅವರ ಸಾಹಿತ್ಯ ಅಧ್ಯಯನ' ಎಂಬ ಮಹಾಪ್ರಬಂಧ ಮಂಡಿಸಿ ಪಿಎಚ್.ಡಿ ಪದವಿ ಪಡೆದಿರುವುದು ಇವರ ಸಾಹಿತ್ಯದ ಗಟ್ಟಿತನಕ್ಕೆ ಹಿಡಿದ ಕನ್ನಡಿಯಾಗಿದೆ. ಇವರ ನಿಸ್ವಾರ್ಥ ಸೇವೆಯನ್ನು ಪರಿಗಣಿಸಿ ಯಾದಗಿರಿ ಜಿಲ್ಲಾಡಳಿತವು ರಾಜ್ಯೋತ್ಸವ ಪ್ರಶಸ್ತಿ' ನೀಡಿ ಗೌರವಿಸಿದೆ. ಇದಲ್ಲದೆ ವಿವಿಧ ಸಂಘ–ಸಂಸ್ಥೆಗಳಿಂದ ಪ್ರಶಸ್ತಿ–ಪುರಸ್ಕಾರಗಳು ಇವರಿಗೆ ಲಭಿಸಿವೆ.

**ದೊಡ್ಡಬಸಪ್ಪ ಬಳೂರಗಿ ಅವರು ಪ್ರಚಾರದ ಹಪಾಹಪಿತನವಿಲ್ಲದೆ ಅರ್ಧಶತಮಾನ ಕಾಲ ಸಗರ ನಾಡಿನ ಸಾಹಿತ್ಯಲೋಕವನ್ನು ಶ್ರೀಮಂತಗೊಳಿಸಿದ ಅಪ್ಪಟ ತಪಸ್ವಿ. ಯಾವುದೇ ಸದ್ದಿಲ್ಲದೆ ಮೌನ ಕ್ರಾಂತಿ ಮಾಡಿದ ಅವರ ಸರಳತೆ ನಮಗೆಲ್ಲ ಆದರ್ಶ. ಮೌಲ್ಯಯುತ ಬದುಕು ನಡೆಸುತ್ತಿರುವ ಇಂತಹ ಹಿರಿಯ ಚೇತನ ಸಾಧಕನನ್ನು ವ್ಯವಸ್ಥೆಯು ಹುಡುಕಿ ಗೌರವಿಸಬೇಕಿದೆ. ಇಳಿವಯಸ್ಸಿನ ಈ ಹಂತದಲ್ಲಾದರೂ ಬಳೂರಗಿಯವರಿಗೆ ದಕ್ಕಬೇಕಾದ ಅತ್ಯುನ್ನತ ಸ್ಥಾನಮಾನಗಳು ಶೀಘ್ರದಲ್ಲೇ ಸಿಗಲಿ ಎಂಬುದೇ ಆಶಯ.**

**–ವೀರಣ್ಣ ಕಲಕೇರಿ, ಸಾಹಿತಿಗಳು ಕೆಂಭಾವಿ**

**ಸಾರ್ವಜನಿಕರ ಆಶಯ:** ಪ್ರಸ್ತುತ ಶಹಾಪುರ ತಾಲೂಕು ಕಸಾಪ ಸಲಹಾ ಸಮಿತಿ ಪದಾಧಿಕಾರಿಯಾಗಿ ಇಂದಿಗೂ ಸಕ್ರಿಯರಾಗಿರುವ ದೊಡ್ಡ ಗುಣದ ದೊಡ್ಡಬಸಪ್ಪ ಬಳೂರಗಿಯವರ ಜೀವಮಾನದ ಸಾಧನೆಯನ್ನು ಮುಂದಿನ ದಿನಗಳಲ್ಲಾದರೂ ತಾಲೂಕು–ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ರಾಜ್ಯದ ವಿಭಿನ್ನ ಅಕಾಡೆಮಿಗಳು ಮತ್ತು ಪ್ರಾಧಿಕಾರಗಳು ಯಾವುದೇ ವಿಳಂಬವಿಲ್ಲದೆ ಪರಿಗಣಿಸಬೇಕಿದೆ. ಇಳಿವಯಸ್ಸಿನ ಈ ಹಂತದಲ್ಲಾದರೂ ಇವರನ್ನು ಹುಡುಕಿಕೊಂಡು ಬರಲಿ, ವ್ಯವಸ್ಥೆ ಮಾಡಿದ ತಪ್ಪನ್ನು ತಿದ್ದಿಕೊಳ್ಳಲಿ ಎಂಬುದೇ ಸಮಸ್ತ ಸಾಹಿತ್ಯಾಭಿಮಾನಿಗಳ ಹಾಗೂ ಸಾರ್ವಜನಿಕರ ಸದಾಶಯವಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)